24 December 2025 Wednesday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಉಪದೇಶ ಮಾಡುವವರ ದೋಷ ತಕ್ಷಣ ಕಣ್ಣಿಗೆ ಬೀಳುತ್ತದೆ! ಹೀಗಾಗಿ ಉಪದೇಶಿಸುವವರು ಹೇಳಿದಂತೆ ನಡೆಯಬೇಕು!

ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಉತ್ತಮ ವಿಚಾರಗಳನ್ನು ತಲೆಯಲ್ಲಿ ತುಂಬಿಕೊಂಡು ಹೊರಟವನು ಎಂದಿಗೂ ಒಂಟಿಯಲ್ಲ, ಯೋಜನೆ ಸರಿಯಿದ್ದಾಗ ಸಹಾಯ ಹಸ್ತಗಳ ಕೊರತೆಯಿಲ್ಲ.

ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 60 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಮಾನವ-ವನ್ಯಜೀವಿ ಸಂಘರ್ಷದಲ್ಲಿ ಸಾವು

# ಚಾ.ನಗರಕ್ಕೆ ಅಗ್ರ ಸ್ಥಾನ, ಕೊಡಗು ನಂ.2

## ಮೈಸೂರು, ಹಾಸನಕ್ಕೆ ನಂತರದ ಸ್ಥಾನ | 2022ರಿಂದ ಈವರೆಗೆ 203 ಮಂದಿ ಬಲಿ

**ಮೈಸೂರು:** ರಾಜ್ಯದಲ್ಲಿ ಮಾನವ-ವನ್ಯಜೀವಿ ಸಂಘರ್ಷ ಪ್ರಕರಣಗಳಲ್ಲಿ ಹೆಚ್ಚಳ ಕಂಡುಬಂದಿದೆ. ಅದರಲ್ಲೂ ಮೈಸೂರು, ಚಾಮರಾಜನಗರ, ಕೊಡಗು ಮತ್ತು ಹಾಸನ ಜಿಲ್ಲೆಗಳಲ್ಲಿಯೇ ವನ್ಯಜೀವಿಗಳೊಂದಿಗಿನ ಘರ್ಷಣೆ ಪ್ರಕರಣಗಳಲ್ಲಿ ಶೇ.60ರಷ್ಟು ಮಾನವರ ಸಾವು ಸಂಭವಿಸಿವೆ. ಇದರಲ್ಲಿ ಚಾಮರಾಜನಗರ ಜಿಲ್ಲೆ ರಾಜ್ಯದಲ್ಲಿಯೇ ನಂ.1 ಸ್ಥಾನದಲ್ಲಿದೆ.

ರಾಜ್ಯದಲ್ಲಿ 2022ರಿಂದ 2025 ರವರೆಗೆ ಮಾನವ-ಪ್ರಾಣಿ ಸಂಘರ್ಷದಲ್ಲಿ 203 ಜನರು ಸಾವನ್ನಪ್ಪಿದ್ದಾರೆ. ಅವರಲ್ಲಿ 2022-23 ರಲ್ಲಿ 58 ಜನರು, 2023-24ರಲ್ಲಿ 65 ಮಂದಿ, 2024-25 ರಲ್ಲಿ 46 ಮತ್ತು 2025ರ ನವೆಂಬರ್ ವರೆಗೆ 34 ಜನ ಸಾವನ್ನಪ್ಪಿದ್ದಾರೆ. ಚಾಮರಾಜನಗರ ಜಿಲ್ಲೆಯಲ್ಲಿ ನಾಲ್ಕು ವರ್ಷ ಗಳಲ್ಲಿ 40 ಸಾವು ಸಂಭವಿಸಿವೆ. ಈ ಪಟ್ಟಿಯಲ್ಲಿ ಚಾ.ನಗರ ಅಗ್ರಸ್ಥಾನದಲ್ಲಿದೆ. ನಂತರ ಕೊಡಗು 32 ಸಾವು, ಮೈಸೂರು 25 ಮತ್ತು ಹಾಸನ 19 ಸಾವುಗಳೊಂದಿಗೆ ನಂತರದ ಸ್ಥಾನದಲ್ಲಿದೆ.

ದಕ್ಷಿಣ ಕರ್ನಾಟಕದ ಅರಣ್ಯಗಳ ಅಂಚಿನ ಪ್ರದೇಶಗಳಿಂದ ಉಂಟಾಗುವ ಅಸಮಾನ ಪರಿಣಾಮವನ್ನು ಅಂಕಿ-ಅಂಶವು ತೋರಿಸಿದೆ. ಅಲ್ಲಿ ಮಾನವ ವಸಾಹತುಗಳು ವನ್ಯಜೀವಿಗಳ ಆವಾಸ ಸ್ಥಾನಗಳೊಂದಿಗೆ ಹೆಚ್ಚಾಗಿ ಅತಿಕ್ರಮಿಸುತ್ತವೆ. ಈ





ಜಿಲ್ಲೆಗಳಲ್ಲಿ ದಕ್ಷಿಣ ಭಾರತದ ಅತಿದೊಡ್ಡ ಅರಣ್ಯ ಪ್ರದೇಶಗಳಾದ ಬಂಡೀಪುರ-ನಾಗರಹೊಳೆ-ವಯನಾಡು-ಮುದುಮಲೈ ಸೇರಿದಂತೆ ಪರಿಸರ ಸೂಕ್ಷ್ಮ ವಲಯಗಳೊಂದಿಗೆ ವ್ಯಾಪಕ ಗಡಿಗಳನ್ನು ಹಂಚಿಕೊಂಡಿವೆ. ಕುಗ್ಗುತ್ತಿರುವ ಅರಣ್ಯ ಕಾರಿಡಾರ್‌ಗಳು, ಕೃಷಿ ವಿಸ್ತರಣೆ ಮತ್ತು ವನ್ಯಜೀವಿ ಆವಾಸಸ್ಥಾನಗಳಲ್ಲಿ ಮಾನವ ಅತಿಕ್ರಮಣದಂತಹ ಅಂಶಗಳಿಂದ ಸಾವಿನ ಪ್ರಮಾಣ ಹೆಚ್ಚುತ್ತಿದೆ ಎಂದು ಅಧಿಕಾರಿಗಳು ಹೇಳುತ್ತಾರೆ. ಆದರೆ ವನ್ಯಜೀವಿ ಕಾರಿಡಾರ್‌ಗಳ ಪುನಃಸ್ಥಾಪನೆ, ವೈಜ್ಞಾನಿಕ ಭೂ-ಬಳಕೆ ಯೋಜನೆ, ಹೆಚ್ಚು ದುರ್ಬಲ ವಸಾಹತುಗಳ ಸ್ಥಳಾಂತರ ನಿರಂತರ ಸಮು ದಾಯ ಜಾಗೃತಿ ಕಾರ್ಯಕ್ರಮಗಳು ಸೇರಿದಂತೆ ದೀರ್ಘಕಾಲೀನ ಪರಿಹಾರಗಳ ಅಗತ್ಯವಿದೆ ಎಂದು ಸಂರಕ್ಷಣಾ ತಜ್ಞರು ತಿಳಿಸಿದ್ದಾರೆ.

ಆನೆಗಳ ದಾಳಿಯು ಸಾವು ನೋವುಗಳಲ್ಲಿ ಗಮನಾರ್ಹ ಪಾಲನ್ನು ಹೊಂದಿದೆ. ನಂತರ ಚಿರತೆಗಳು ಮತ್ತು ಹುಲಿಗಳ ದಾಳಿ ಯಿಂದ ಮನುಷ್ಯರ ಸಾವು ಉಂಟಾ ಗಿದೆ. ಜನರು ಕೃಷಿ ಕೆಲಸ ಮಾಡು ವಾಗ, ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸುವಾಗ ಅಥವಾ ಅರಣ್ಯ ಪ್ರದೇಶಗಳಲ್ಲಿ ಓಡಾಡುವಾಗ ಹೆಚ್ಚಾಗಿ ಬೆಳಗಿನ ಜಾವ ಅಥವಾ ಸಂಜೆ ಸಮಯದಲ್ಲಿ ಹೆಚ್ಚಿನ ಸಾವು ಗಳು ಸಂಭವಿಸಿವೆ.

ಸೌರಶಕ್ತಿ ಚಾಲಿತ ಬೇಲಿಗಳ ಸ್ಥಾಪನೆ, ಆನೆ-ನಿರೋಧಕ ಕಂದಕಗಳು, ಮುಂಜಾಗ್ರತಾ ವ್ಯವಸ್ಥೆಗಳು ಮತ್ತು ಕಮಾಂಡ್

ಪುಟ 2ಕ್ಕೆ

# ಚಿರತೆ ಬೋನಿಗೆ ಬಿದ್ದ ವ್ಯಕ್ತಿ!

## ಹುಡುಗಾಟ ಆಡಲು ಹೋಗಿ 4 ಗಂಟೆ ಲಾಕ್ ಆದ ಕಿಟ್ಟಿ

**ಚಾಮರಾಜನಗರ:** ಹುಡುಗಾಟ ಆಡಲು ಹೋದ ವ್ಯಕ್ತಿಯೊಬ್ಬ ಚಿರತೆ ಸೆರೆಗೆ ಇಟ್ಟಿದ್ದ ಬೋನಿನಲ್ಲಿ ಸೆರೆಯಾಗಿ ನಾಲ್ಕು ಗಂಟೆಗೂ ಹೆಚ್ಚು ಕಾಲ ಸೆರೆಯಾದ ಘಟನೆ ಯಳಂದೂರು ತಾಲೂಕಿನ ಗಂಗವಾಡಿ ಗ್ರಾಮದಲ್ಲಿ ನಡೆದಿದೆ.

ಗಂಗವಾಡಿ ಗ್ರಾಮದ ಕಿಟ್ಟಿ ಎಂಬಾತ ಬೋನಿನಲ್ಲಿ ಸಿಲುಕಿದ ವ್ಯಕ್ತಿ. ಚಿರತೆಗಾಗಿ ಇಟ್ಟಿದ್ದ ಬೋನಿನಲ್ಲಿ ಸಿಲುಕಿ 4 ತಾಸು ಒದ್ದಾಡಿದ್ದಾನೆ. ಗಂಗವಾಡಿ ಗ್ರಾಮದಲ್ಲಿ ಶನಿವಾರ ರಾತ್ರಿ ರಾಮಯ್ಯ ಎಂಬುವರಿಗೆ ಸೇರಿದ ಜಮೀನಿನಲ್ಲಿ ಚಿರತೆ ದಾಳಿ ನಡೆಸಿ ಮೂರು ಜಾನುವಾರುಗಳನ್ನು ಕೊಂದು ಹಾಕಿತ್ತು. ಅರಣ್ಯ ಇಲಾಖೆ ಸಿಬ್ಬಂದಿ ಚಿರತೆ ಸೆರೆಗಾಗಿ ಗ್ರಾಮದಲ್ಲಿ ಭಾನುವಾರ ಎರಡು ಕಡೆ ಬೋನನ್ನು ಇರಿಸಿದ್ದರು. ಒಂದು ರಾಮಯ್ಯನವರ ಜಮೀನಿನಲ್ಲಿ, ಮತ್ತೊಂದು ಬೋನನ್ನು ರುದ್ರ ಜಮೀನಿನಲ್ಲಿ ಇರಿಸಿದ್ದರು.

ರುದ್ರ ಎಂಬುವರ ಜಮೀನು ಗ್ರಾಮದಿಂದ ದೂರವಿದೆ. ಇಲ್ಲಿ ಜನರ ಓಡಾಟ ಕಡಿಮೆ. ಇದೇ ಗ್ರಾಮದ ಕಿಟ್ಟಿ ಕುತೂಹಲಕ್ಕಾಗಿ ಸೋಮವಾರ ಬೆಳಗ್ಗೆ ಬೋನನ್ನು ನೋಡಲು ಒಬ್ಬರೇ ತೆರಳಿ ಇದರ ಒಳಹೊಕ್ಕಿದ್ದಾರೆ. ಆಗ ಬೋನಿನ ಬಾಗಿಲು ಮುಚ್ಚಿಕೊಂಡಿದೆ. ಕಿಟ್ಟಿ ಎಷ್ಟೇ ಪ್ರಯತ್ನ ಪಟ್ಟರೂ ಕೂಡ ಇದನ್ನು ತೆರೆಯಲು ಸಾಧ್ಯವಾಗಿಲ್ಲ.

ಕಿಟ್ಟಿ ಬಳಿ ಮೊಬೈಲ್ ಕೂಡ ಇರಲಿಲ್ಲ. ಹಾಗಾಗಿ, ಇವರು ಇದರೊಳಗಿಂದಲೇ ಕಾಪಾಡಿ, ಕಾಪಾಡಿ ಎಂದು ಚೀರಾಟ ನಡೆಸಿದ್ದಾರೆ. ಆದರೆ ಚಿರತೆ ಭಯವಿದ್ದ ಕಾರಣ ಬೋನು ಇರಿಸಿದ್ದ ಜಾಗದಲ್ಲಿ ಇಲ್ಲಿನ ರೈತರು, ಕುರಿ, ದನಗಾಹಿಗಳು ತೆರಳಿಲ್ಲ. ಹಾಗಾಗಿ ಇವರು ಚೀರಾಟ ಯಾರಿಗೂ ಕೇಳಿಸಿಲ್ಲ. ನಂತರ ಇವರು ದಿಕ್ಕು ತೋಚದೆ ಇದರೊಳಗೆ ಬಂಧಿಯಾಗಿದ್ದರು. ಕೊನೆಗೆ ಮಧ್ಯಾಹ್ನ 2.30ರ ವೇಳೆಗೆ ಊಟಕ್ಕೆ ತೆರಳುತ್ತಿದ್ದ ದನಗಾಹಿಗಳು, ರೈತರು ದೂರದಿಂದ ಇವರ ಕಣ್ಣಿಗೆ ಬಿದ್ದಿದ್ದಾರೆ. ಆಗ ಇವರು ಜೋರಾಗಿ ಕಿರುಚಿದ್ದಾರೆ. ಅಳುಕಿನಿಂದಲೇ ಕೆಲವರು ಧೈರ್ಯ ಮಾಡಿ ಈ ಬೋನಿನ ಹತ್ತಿರ ತೆರಳಿದ್ದಾರೆ. ಆಗ ಕಿಟ್ಟಿ, ನಾನು ಒಳಗೆ ಸಿಲುಕಿಕೊಂಡಿದ್ದೇನೆ. ನನ್ನನ್ನು ಕಾಪಾಡಿ ಎಂದು ಅಂಗಲಾಚಿದ್ದಾರೆ. ಆಗ ಕೆಲವು ಗ್ರಾಮಸ್ಥರು ಬಂದು ಬೋನಿನ ಬಾಗಿಲನ್ನು ತೆರೆದು ಇವರನ್ನು ಸುರಕ್ಷಿತವಾಗಿ ಹೊರಗೆ ತಂದಿದ್ದಾರೆ.





# ನ್ಯಾಷನಲ್ ಹೆರಾಲ್ಡ್ ಹಗರಣದಲ್ಲಿ ರಾಜ್ಯದ 'ಭಾವಿ ಮುಖ್ಯಮಂತ್ರಿ' ಭಾಗಿ

## ಡಿ.ಕೆ.ಶಿವಕುಮಾರ್ ಹೆಸರು ಹೇಳದೆ ಸಚಿವೆ ಕರಂದ್ಲಾಜೆ ವಾಗ್ದಾಳಿ

**ಬೀದರ್:** ಕರ್ನಾಟಕದ ಭಾವಿ ಮುಖ್ಯಮಂತ್ರಿ ಎಂದು ಬಿಂಬಿಸಿಕೊಳ್ಳುತ್ತಿರುವವರು ನ್ಯಾಷನಲ್ ಹೆರಾಲ್ಡ್ ಹಗರಣದಲ್ಲಿ ಸಿಕ್ಕಿಕೊಳ್ಳುತ್ತಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಡಿ.ಕೆ.ಶಿವಕುಮಾರ್ ಅವರ ಹೆಸರು ಹೇಳದೆ ಲೇವಡಿ ಮಾಡಿದ್ದಾರೆ.



ನಗರದಲ್ಲಿ ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಅವರು, ನ್ಯಾಷನಲ್ ಹೆರಾಲ್ಡ್ ಹಗರಣ ಬಹಳ ದೊಡ್ಡದು. ಕಾಂಗ್ರೆಸ್‌ನ ಹಲವು ಜನನಾಯಕರು ಇದರಲ್ಲಿ ಸಿಕ್ಕಿಕೊಳ್ಳುತ್ತಾರೆ. ಹಗರಣದ ಯಾವುದೋ ಒಂದು ವಿಷಯದಲ್ಲಿ ಜಯ ಸಿಕ್ಕಿದೆ ಎಂದರೆ ಭ್ರಷ್ಟಾಚಾರ ಮುಚ್ಚಿ ಹೋಗಿದೆ ಎಂದರ್ಥವಲ್ಲ ಎಂದು ಟೀಕಿಸಿದರು. ಕಾಂಗ್ರೆಸ್ ನಿರಂತರವಾಗಿ ಭೃಷ್ಟಾಚಾರ ಮಾಡುತ್ತಿದೆ. ನಿರಂತರವಾಗಿ ಅದನ್ನು

ಪುಟ 2ಕ್ಕೆ

### ಬಾಯಿ ಮುಚ್ಚಿಸಲು ಷಡ್ಯಂತ್ರ

ರಾಜ್ಯದ ಕಾಂಗ್ರೆಸ್ ಸರ್ಕಾರವು ದ್ವೇಷ ಭಾಷಣ ತಡೆ ಕಾಯ್ದೆ ಜಾರಿಗೆ ತರುವುದರ ಮೂಲಕ ನಮ್ಮೆಲ್ಲರ ಬಾಯಿ ಮುಚ್ಚಿಸುವ ಷಡ್ಯಂತ್ರ ಮಾಡಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದರು.

ಪುಟ 2ಕ್ಕೆ

### ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತ

ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತವಾಗಿದೆ. ಡಾ.ಜಿ. ಪರಮೇಶ್ವರ, ಮಲ್ಲಿಕಾರ್ಜುನ ಖರ್ಗೆ, ಡಿ.ಕೆ.ಶಿವಕುಮಾರ ಸಿಎಂ ಆಗಲು ಪ್ರಯತ್ನಿಸುತ್ತಿದ್ದರೆ, ಸಿದ್ದರಾಮಯ್ಯನವರು ಕುರ್ಚಿ ಉಳಿಸಿಕೊಳ್ಳಲು ಯತ್ನಿಸುತ್ತಿದ್ದಾರೆ. ಡಿ.ಕೆ. ಶಿವಕುಮಾರ ಅವರು ಮುಖ್ಯಮಂತ್ರಿ ಆಗಬೇಕಾ? ಸಿದ್ದರಾಮಯ್ಯನವರು ಉಳಿಬೇಕಾ ಎಂಬ ಚರ್ಚೆ

ಪುಟ 2ಕ್ಕೆ

# ಸಿದ್ದುಗೆ ರಾಜಣ್ಣ ಜೈ, ಡಿಕೆಶಿಗೆ ಬೈಬೈ!

## ಹೈಕಮಾಂಡ್‌ಗೆ ಕೆ.ಎನ್.ರಾಜಣ್ಣ ಪತ್ರ | ಡಿಕೆಶಿ ಕಾರ್ಯವೈಖರಿಗೆ ಅಸಮಾಧಾನ

**ಬೆಂಗಳೂರು:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಮಾಜಿ ಸಚಿವ ಕೆ.ಎನ್.ರಾಜಣ್ಣ ಬರೆದಿರುವ ಪತ್ರ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ರಾಗಾ ಭೇಟಿಗೂ ರಾಜಣ್ಣ ಸಮಯ ಕೇಳಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಕೆ.ಎನ್.ರಾಜಣ್ಣ ಅವರನ್ನು ಎರಡು ಬಾರಿ ಭೇಟಿ ಮಾಡಿ ಮಾತನಾಡಿದ ಬೆನ್ನಲ್ಲಿಯೇ ರಾಜಣ್ಣ ಅವರ ಪತ್ರ ಬಹಿರಂಗಗೊಂಡಿದೆ.

ರಾಹುಲ್ ಅವರಿಗೆ ಈಗಾಗಲೇ ನಾಲ್ಕು ಪತ್ರಗಳನ್ನು ರಾಜಣ್ಣ ಬರೆದಿದ್ದರು. ರಾಜ್ಯದ ರಾಜಕೀಯ ವಿದ್ಯಮಾನದಿಂದ ಪಕ್ಷಕ್ಕೆ ಆಗುತ್ತಿರುವ ಡ್ಯಾಮೇಜ್ ಬಗ್ಗೆಯೂ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಪತ್ರದಲ್ಲಿ ಸಿದ್ದರಾಮಯ್ಯರನ್ನು ಸಿಎಂ ಸ್ಥಾನದಿಂದ ಕೈಬಿಟ್ಟರೆ ಆಗುವ ಸಮಸ್ಯೆ ಬಗ್ಗೆ ಮನವರಿಕೆ ಮಾಡುವ ಪ್ರಯತ್ನ ಮಾಡಿದ್ದಾರೆ. ಅಲ್ಲದೆ, ಕಾಂಗ್ರೆಸ್ ಮತಕಳ್ಳತನ ಅಭಿಯಾನದ ಬಗ್ಗೆ ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ



ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ರಾಜಣ್ಣ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಾಡಿ ಹೊಗಳಿದ್ದಾರೆ. ಸಿದ್ದರಾಮಯ್ಯ ಅವರು ರಾಜ್ಯಕ್ಕೆ ಎಷ್ಟು ಅನಿವಾರ್ಯ ಎಂಬುದನ್ನು ಬಿಡಿಸಿಟ್ಟಿದ್ದಾರೆ. ಮುಖ್ಯಮಂತ್ರಿ ಕುರ್ಚಿ ಕದನದ ಈ

ಪುಟ 2ಕ್ಕೆ

### ಪತ್ರದಲ್ಲಿ ಅಂಥದ್ದೇನಿದೆ?

ತುಮಕೂರು ಜಿಲ್ಲೆಯ ಮಧುಗಿರಿ ಕ್ಷೇತ್ರದ ಶಾಸಕನಾದ ನಾನು ಸಹಕಾರ ಸಚಿವ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವನಾಗಿ ಸೇವೆ ಸಲ್ಲಿಸಿದ್ದೇನೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಸಚಿವ ಸಂಪುಟದಿಂದ ತನ್ನನ್ನು ಕೈಬಿಟ್ಟಿರುವ ಹಿನ್ನೆಲೆಯಲ್ಲಿ, ಕೆಲ ಪ್ರಮುಖ ವಿಷಯಗಳನ್ನು ಗಮನಕ್ಕೆ ತರುತ್ತಿದ್ದೇನೆ ಎಂದು ಪತ್ರದಲ್ಲಿ ರಾಜಣ್ಣ ಬರೆದಿದ್ದಾರೆ.

ವೋಟ್ ಚೋರಿ ಕಾರ್ಯಕ್ರಮವನ್ನು ತಾನು ಹೃದಯಪೂರ್ವಕವಾಗಿ ಬೆಂಬಲಿಸಿದ್ದೇನೆ. ಇಂತಹ ಮಹತ್ವದ ವಿಷಯಗಳನ್ನು ದೇಶದ ಮುಂದೆ ಇಡುವ ನಿಮ್ಮ ನಾಯಕತ್ವ ಮತ್ತು ಮುಂದಾಳತ್ವವನ್ನು ಆಳವಾಗಿ ಮೆಚ್ಚುತ್ತೇನೆ. ನಾನು ನೀಡಿದ್ದ

ಪುಟ 2ಕ್ಕೆ

# ಹಸುವಿನ ಮೇಲೆ ಹುಲಿ ದಾಳಿ: ಆರ್‌ಎಫ್‌ಒಗೆ ರೈತರ ಘೇರಾವ್

**ಹುಣಸೂರು:** ತಾಲ್ಲೂಕಿನ ನೇಗತ್ತೂರು ಗ್ರಾಮದ ಜಮೀನಿನಲ್ಲಿ ಮೇಯುತ್ತಿದ್ದ ಹಸುವಿನ ಮೇಲೆ ಹುಲಿ ದಾಳಿ ನಡೆಸಿ ಗಾಯಗೊಳಿಸಿರುವ ಘಟನೆ ಮಂಗಳವಾರ ನಡೆದಿದೆ. ರೊಚ್ಚಿಗೆದ್ದ ರೈತರು ಅರಣ್ಯ ಸಿಬ್ಬಂದಿಗೆ ಘೇರಾವ್ ಮಾಡಿ ಪ್ರತಿಭಟನೆ ನಡೆಸಿದರು.

ಹುಣಸೂರು ವನ್ಯಜೀವಿ ವಿಭಾಗದ ಶೆಟ್ಟಹಳ್ಳಿ ಲಕ್ಕಪಟ್ಟಣ ಅರಣ್ಯದಂಚಿನ ನೇಗತ್ತೂರು ಗ್ರಾಮದ ಸೈಯದ್ ಪೀರ್ ಹಸು ಹುಲಿ ದಾಳಿಯಿಂದ ಗಾಯಗೊಂಡಿದೆ. ಶೆಟ್ಟಹಳ್ಳಿ ಲಕ್ಕಪಟ್ಟಣ ಅರಣ್ಯದಿಂದ ಹೊರಬಂದ ಹುಲಿಯು ಮೇಯುತ್ತಿದ್ದ ಹಸುವಿನ ಮೇಲೆ ದಾಳಿ ನಡೆಸಿದೆ. ವಿಷಯ ತಿಳಿಯುತ್ತಿದ್ದಂತೆ ಹುಣಸೂರು ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.


ಪ್ರತಿನಿತ್ಯ ಹುಲಿಯ ಉಪಟಳದಿಂದ ಬೇಸತ್ತಿರುವ ಗ್ರಾಮಸ್ಥರು ಹುಲಿಯನ್ನು ಸೆರೆ ಹಿಡಿಯಬೇಕು ಎಂದು ಒತ್ತಾಯಿಸಿ ಸ್ಥಳಕ್ಕೆ ಭೇಟಿ ನೀಡಿದ

ಪುಟ 2ಕ್ಕೆ





# ದ್ವೇಷ ಭಾಷಣಕ್ಕೆ ಅಂಕಿತ ಬೇಡ ರಾಜ್ಯಪಾಲರಿಗೆ ಈಶ್ವರಪ್ಪ ಮನವಿ





**ವಿಜಯಪುರ:** ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ಮಸೂದೆಗೆ ರಾಜ್ಯಪಾಲರು ಯಾವುದೇ ಕಾರಣಕ್ಕೂ ಅಂಕಿತ ಹಾಕಬಾರದು ಎಂದು ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಮನವಿ ಮಾಡಿದರು.

ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವಿಧೇಯಕದ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ಅಘೋಷಿತ ತುರ್ತು ಪರಿಸ್ಥಿತಿ ಹೇರಲು ಹವಣಿಸುತ್ತಿದೆ. ಹಿಂದೂ ನಾಯಕರನ್ನು, ಹಿಂದೂ ಸಂಘಟನೆಗಳನ್ನು ಜೈಲಿಗೆ ಕಳಿಸುವ ವ್ಯವಸ್ಥಿತ ಕಾರಣಕ್ಕಾಗಿ ಈ ಮಸೂದೆ ರೂಪಿಸಿದೆ ಎಂದು ಟೀಕಿಸಿದರು.

ಇಂದಿರಾ ಗಾಂಧಿ ತುರ್ತು ಪರಿಸ್ಥಿತಿ ಹೇರಿದ ಪರಿಣಾಮ ಅಂದು ದೇಶದಲ್ಲಿ


ಪುಟ 2ಕ್ಕೆ

# ಅಪಘಾತಕ್ಕೀಡಾದ ವ್ಯಕ್ತಿಯಿಂದ ಹಣ ದೋಚಿದ್ದ ಇಬ್ಬರ ಬಂಧನ

**ಮೈಸೂರು:** ಅಪಘಾತವಾಗಿ ಕೆಳಗೆ ಬಿದಿದ್ದ ವ್ಯಕ್ತಿಯ ಮೊಬೈಲ್‌ನಿಂದ 80,000 ಸಾವಿರ ರೂ. ಹಣ ಕದ್ದಿದ್ದ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ರಮೇಶ್, ಮನು ಬಂಧಿತ ಆರೋಪಿಗಳು.

ಮೈಸೂರು ತಾಲೂಕಿನ ಕಡಕೊಳ ಗ್ರಾಮದ ಇತ್ತೀಚೆಗೆ ಗಣೇಶ್ ಎಂಬವರು ಫ್ಯಾಕ್ಟರಿಯಲ್ಲಿ ಕೆಲಸ ಮುಗಿಸಿ ಮಧ್ಯರಾತ್ರಿ ಮನೆಗೆ ಬರುವಾಗ ಅಪಘಾತವಾಗಿತ್ತು. ಆಸ್ಪತ್ರೆಗೆ ಸೇರಿಸುವ ನೆಪದಲ್ಲಿ ಬಂದ ರಮೇಶ ಮತ್ತು ಮನು ಅವರು, ಗಣೇಶ್ ಮೊಬೈಲ್ ತೆಗೆದುಕೊಂಡು ಯುಪಿಐ ಮೂಲಕ 80 ಸಾವಿರ ರೂ. ಹಣ ವರ್ಗಾವಣೆ ಮಾಡಿಕೊಂಡು ಆಸ್ಪತ್ರೆಗೆ ಸೇರಿಸದೆ ಪರಾರಿ ಆಗಿದ್ದರು.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಗಣೇಶ್



ಸಹೋದರ ಅಂಕನಾಯಕ. ಗಣೇಶ್ ಅವರನ್ನು ಆಸ್ಪತ್ರೆಗೆ ಸೇರಿಸಿ ಸಿ.ಇ.ಎನ್ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದರು. ಹಣ ವರ್ಗಾವಣೆ ಮಾಹಿತಿ ಆಧರಿಸಿ ಮೈಸೂರಿನ ಮಹದೇವಪುರದ ನಿವಾಸಿಗಳಾದ ರಮೇಶ ಮತ್ತು ಮನು ಅವರನ್ನು ಬಂಧಿಸಿ ಜೈಲಿಗೆ

ಪುಟ 2ಕ್ಕೆ


# ಚಿನ್ನಸ್ವಾಮಿ: ಕ್ರಿಕೆಟ್‌ಗೆ ಅನುಮತಿ ನಿರಾಕರಣೆ

## ಡಿಕುನ್ಹಾ ಸಮಿತಿ ಶಿಫಾರಸು ಜಾರಿ ಮಾಡದ ಕೆಎಸ್‌ಸಿಎ: ಸೀಮಂತ್ ಕುಮಾರ್

**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಬುಧವಾರ ನಡೆಯಬೇಕಿದ್ದ ಸವಿಜಯ್ ಹಜಾರೆ ಟ್ರೋಫಿ, ಕ್ರಿಕೆಟ್ ಪಂದ್ಯಗಳನ್ನು ಆಯೋಜಿಸಲು ಅನುಮತಿ ನಿರಾಕರಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದರು.

ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಕಾಲ್ತುಳಿತದ ಹಿನ್ನೆಲೆಯಲ್ಲಿ ಶಿಫಾರಸು ಮಾಡಲಾದ ಸರಿಪಡಿಸುವ ಕ್ರಮಗಳನ್ನು ಜಾರಿಗೆ ತರಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ವಿಫಲವಾಗಿರುವ ಕಾರಣ ಅನುಮತಿ ನೀಡಿಲ್ಲ ಎಂದು ಹೇಳಿದರು.

ಪರಿಣಾಮವಾಗಿ ಬುಧವಾರ ನಿಗದಿಯಾಗಿದ್ದ ದೆಹಲಿ ಮತ್ತು ಆಂಧ್ರಪ್ರದೇಶ ನಡುವಿನ ವಿಜಯ್ ಹಜಾರೆ ಟ್ರೋಫಿ ಪಂದ್ಯವನ್ನು ಕ್ರೀಡಾಂಗಣದಲ್ಲಿ ನಡೆಸಲಾಗುವುದಿಲ್ಲ. ಸ್ಟಾರ್ ಕ್ರಿಕೆಟಿಗ ವಿರಾಟ್ ಕೊಹ್ಲಿ ದೆಹಲಿ ಪರವಾಗಿ ಪಂದ್ಯವನ್ನು ಆಡಲು ಈಗಾಗಲೇ ಬೆಂಗಳೂರಿಗೆ ಆಗ



ಮಿಸಿದ್ದಾರೆ.

ಪೊಲೀಸ್, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ಬೆಸ್ಕಾಮ್ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಅಧಿಕಾರಿಗಳನ್ನೊಳಗೊಂಡ ಸಮಿತಿಯು ಮಂಗಳವಾರ ಕ್ರೀಡಾಂಗಣವನ್ನು ಪರಿಶೀಲಿಸಿದ ನಂತರ ಅನುಮತಿಯನ್ನು ನಿರಾಕರಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಆಯುಕ್ತ ಎಂ ಮಹೇಶ್ವರ್ ರಾವ್

ಪುಟ 2ಕ್ಕೆ

### ಬಿಸಿಸಿಐ ಮೈದಾನಕ್ಕೆ ಸ್ಥಳಾಂತರ

**ಬೆಂಗಳೂರು:** ಬೆಂಗಳೂರಿನ ಹೊರವಲಯದಲ್ಲಿ ಬಿಸಿಸಿಐ ನಿರ್ಮಾಣ ಮಾಡಿರುವ ಸೆಂಟರ್ ಆಫ್ ಎಕ್ಸೆಲೆನ್ಸ್ ಮೈದಾನದಲ್ಲಿ ವಿರಾಟ್ ಕೊಹ್ಲಿ ಮೊದಲ ಬಾರಿಗೆ ದೆಹಲಿ ಪರ ಬುಧವಾರ ಕಣಕ್ಕೆ ಇಳಿಯಲಿದ್ದಾರೆ.

ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯಬೇಕಿದ್ದ ದೆಹಲಿ ಮತ್ತು ಆಂಧ್ರಪ್ರದೇಶ ನಡುವಿನ ವಿಜಯ್ ಹಜಾರೆ ಟೂರ್ನಿಯ ಪಂದ್ಯಕ್ಕೆ ಅನುಮತಿ ನೀಡಲು ಪೊಲೀಸರು ನಿರಾಕರಿಸಿರುವ ಹಿನ್ನೆಲೆಯಲ್ಲಿ ಕೆಂಪೇಗೌಡ ವಿಮಾನ ನಿಲ್ದಾಣದ ಸಮೀಪ ಇರುವ ಸೆಂಟರ್ ಆಫ್ ಎಕ್ಸಲೆನ್ಸ್ ಮೈದಾನಕ್ಕೆ ಸ್ಥಳಾಂತರ ಮಾಡಲಾಗಿದೆ. ಈ ಪಂದ್ಯಗಳ ವೀಕ್ಷಣೆಗೆ ಪ್ರೇಕ್ಷಕರಿಗೆ ಅನುಮತಿ ಇಲ್ಲ.

40 ಎಕರೆ ವಿಸ್ತೀರ್ಣದ ಕ್ಯಾಂಪಸ್‌ನಲ್ಲಿರುವ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ಮೂರು

ಪುಟ 2ಕ್ಕೆ

# ಧರ್ಮ ಸತ್ಯ-ಶಾಶ್ವತ: ವಿಧುಶೇಖರ ಭಾರತೀಶ್ರೀ

ಮಂಡ್ಯ : ಈ ಜಗತ್ತಿನ ಹುಟ್ಟುವಿಕೆಯ ಜೊತೆಯೇ ಧರ್ಮವು ಜನಿಸಿದೆ. ಹೀಗಾಗಿ ಧರ್ಮ ಕ್ಕೂ ಮತಕ್ಕೂ ಯಾವುದೇ ಸಂಬಂಧವಿಲ್ಲ ಧರ್ಮವು ಸತ್ಯವಾದುದು ಇದನ್ನು ನಿಷ್ಠೆಯಿಂದ ಅನುಸರಿಸುವುದರ ಮೂಲಕ ಮನುಷ್ಯ ಏಳಿಗೆಯನ್ನು, ಸಂಸ್ಕೃತಿಯನ್ನು ಜಾಗೃತಗೊಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದು ಜಗದ್ಗುರು ಶ್ರೀ ವಿದು ಶೇಖರ ಭಾರತಿ ಸ್ವಾಮಿಗಳು ಕರೆ ನೀಡಿದರು.

ಮಂಡ್ಯ ನಗರಕ್ಕೆ ಎರಡು ದಿನಗಳ ಭೇಟಿ ನೀಡಿ ನಗರದ ವಿದ್ಯಾಗಣಪತಿ ದೇವಾಲಯದಲ್ಲಿ ಹೊಯ್ಸಳ ಕರ್ನಾಟಕ ಸೇವಾ ಟ್ರಸ್ಟ್ ಮತ್ತು ಶ್ರೀ ಶಂಕರ ಸೇವಾಪ್ರತಿಷ್ಠಾನ ಆಯೋಜಿಸಿದ್ದ ಗುರು ವಂದನಾ ಕಾರ್ಯಕ್ರಮ ದಲ್ಲಿ ಭಾಗವಹಿಸಿ ನೆರೆದಿದ್ದ ಭಕ್ತಾದಿಗಳಿಗೆ ಆಶೀರ್ವಚನ ನೀಡಿದರು. ಧರ್ಮವು ಜನರ ಕಣ್ಣಿಗೆ ಗೋಚರಿಸುವುದಿಲ್ಲ ಆದರೆ ಅದರ ಫಲಗಳು ಜನರನ್ನು ತಲುಪುತ್ತವೆ. ಯಾರೋ ಟೀಕೆ ಮಾಡಿದಾಕ್ಷಣ ಧರ್ಮಕ್ಕೆ ಯಾವ ಹಾನಿಯು ಆಗಿವುದಿಲ್ಲ. ಅದು ಶಾಶ್ವತ. ಆದ್ದರಿಂದಲೇ 12 ನೆ ಶತಮಾನದಲ್ಲೇ ಭಗವಾನ್ ಶಂಕರರು ಧರ್ಮವನ್ನು ಪ್ರಚುರಪಡಿಸಲು ಅನೇಕ ಬಾರಿ ದೇಶ ಸಂಚಾರ ಮಾಡಿ ಜಾಗೃತಗೊಳಿಸಲು ದೇಶದ 4 ಕಡೆ ಶಕ್ತಿ ಪೀಠ ಗಳನ್ನು ಸ್ಥಾಪಿಸಿ ಧರ್ಮ



ವನ್ನು ಎತ್ತಿ ಹಿಡಿಯುವ ಮಹಾಕಾರ್ಯದಲ್ಲಿ ತೊಡಗಿಸಿಕೊಂಡರು. ಶಂಕರರು ಪ್ರತಿಪಾದಿಸಿದಂತೆ, ಆಸ್ತಿಕ ಪರಂಪರೆಯನ್ನು ಎತ್ತಿ ಹಿಡಿದು ಧರ್ಮ ವನ್ನುಳಿಸಿಕೊಳ್ಳಬೇಕು. ವ್ಯಕ್ತಿಯಿಂದ ಅವರವರ ವಿಶ್ಲೇಷಣೆ ಅನುಸಾರ ವಾಗಿ ಹುಟ್ಟಿಕೊಂಡಿರುವುದೇ ಮತ. ಮತಗಳನ್ನು ಯಾರು ಬೇಕಾದರೂ ಸ್ಥಾಪಿ ಸಬಹುದುಆದರೆ ಧರ್ಮವನ್ನ. ಯಾವರೀತಿ ಮಾತನಾಡಬೇಕು ಎಂಬುದನ್ನು ಕಳಿಸಿಕೊಟ್ಟಿದ್ದೆ ಧರ್ಮ. ಏನು ಮಾತನಾಡಿದರುವ್ವ. ತರ್ಕ ಬದ್ದವಾಗಿ ಮಾತನಾಡಬೇಕು. ಖುತರ್ಕವನ್ನು ಮಾಡಬಾರದು. ಶಾಸ್ತ್ರ ಆಧಾರಿತವಾಗಿ ಚರ್ಚಿಸಿ. ವಿತಂಡ ವಾದಕ್ಕೆ ಬೆಲೆಯಿಲ್ಲ. ಲೋಕದಲ್ಲಿ ಎಲ್ಲರೂ ಒಪ್ಪಲೇ ಬೇಕಾದ ವಿಷಯ ಎಂದರೆ ಯಾವುದೇ ಕಾರ್ಯದ ಹಿಂದೆ ಕಾರಣವೊಂದಿರುತ್ತದೆ. ಆತ್ಮವು ನಾನಾ ಶರೀರ ಗಳನ್ನು ಪ್ರವೇಶಿಸುತ್ತದೆ.

**ಮೊದಲ ಪುಟದಿಂದ**

## ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತ

ನಡೀತಿದೆ. ಪ್ರತಿ ನಿತ್ಯ ಕುರ್ಚಿ ಕಾದಾಟ ಬಿಟ್ಟರೆ ಅಭಿವೃದ್ಧಿಯ ಚರ್ಚೆಯೇ ಆಗುತ್ತಿಲ್ಲ ಎಂದು ಟೀಕಿಸಿದರು. ಈಗ ಕಾಂಗ್ರೆಸ್‌ನಲ್ಲಿ ಎಲ್ಲರೂ ಮುಖ್ಯಮಂತ್ರಿಗಳಾಗಬೇಕು ಅಥವಾ ಕೆಪಿಸಿಸಿ ಅಧ್ಯಕ್ಷರಾಗಬೇಕು. ಎಲ್ಲರಿಗೂ ಅಧಿಕಾರ ಬೇಕು. ಯಾರನ್ನೂ ಉಳಿಸಬೇಕು. ಯಾರನ್ನೂ ಇಳಿಸಬೇಕು, ಯಾರು ಕುರ್ಚಿ ಏರಬೇಕೆಂಬ ಚರ್ಚೆ ಕರ್ನಾಟಕದಲ್ಲಿ ನಡೆಯುತ್ತಿದೆ. ಅಧಿವೇಶನದಲ್ಲಿ ಉತ್ತರ ಕರ್ನಾಟಕಕ್ಕೂ ನ್ಯಾಯ ಕೊಡಲಿಲ್ಲ, ಬೆಂಗಳೂರಿಗೂ ನ್ಯಾಯ ಕೊಡಲ್ಲ. ಯಾರಿಗೂ ನೀವು ನ್ಯಾಯ ಕೊಡಲ್ಲ ಎಂದು ಟೀಕಿಸಿದರು.

## ಚಾ.ನಗರಕ್ಕೆ ಅಗ್ರ , ಕೊಡಗು ನಂ.2

ಸೆಂಟರ್ ಪರಿಚಯಿಸುವುದು ಸೇರಿದಂತೆ ಮಾನವ– ವನ್ಯಜೀವಿ ಸಂಘರ್ಷ ತಗ್ಗಿಸುವ ಹಲವಾರು ಕ್ರಮಗಳನ್ನು ಅರಣ್ಯ ಇಲಾಖೆ ಕೈಗೊಂಡಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಮಾಹಿತಿ ನೀಡಿದ್ದಾರೆ. ಮಾನವ–ವನ್ಯಜೀವಿಗಳ ಸಹಬಾಳ್ವೆಯನ್ನು ಪರಿಸರ ಮತ್ತು ಸಾಮಾಜಿಕ ಹಸ್ತಕ್ಷೇಪಗಳ ಮೂಲಕ ಪರಿಹರಿಸಲಾಗುತ್ತದೆ. ಇದನ್ನು ಸರಿಯಾಗಿ ಪರಿಹರಿಸದಿದ್ದರೆ ಪ್ರಾಣಿಗಳ ಪ್ರತೀಕಾರದ ಹತ್ಯೆಯ ಜೊತೆಗೆ ಮಾನವ ಜೀವಗಳ ನಷ್ಟವು ಮುಂದುವರಿಯುವ ಸಾಧ್ಯತೆಯಿದೆ ಎಂದು ವನ್ಯಜೀವಿ ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.

## ಪತ್ರದಲ್ಲಿ ಅಂಥದ್ದೇನಿದೆ?

ಹೇಳಿಕೆಯ ಉದ್ದೇಶ ಏನೆಂದರೆ, ಕೆಪಿಸಿಸಿ ನೇಮಕ ಮಾಡಿದವರು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿಲ್ಲ. ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಮತ್ತು ಸಂಬಂಧಿಸಿದವರು ಈ ಲೋಪಗಳತ್ತ ಸೂಕ್ತ ಗಮನ ನೀಡಿದ್ದರೆ ಅವುಗಳನ್ನು ತಪ್ಪಿಸಬಹುದಾಗಿತ್ತು. ಹಾಗಿದ್ದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಇನ್ನೂ 8 ರಿಂದ 10 ಸ್ಥಾನಗಳನ್ನು ಹೆಚ್ಚಾಗಿ ಗೆಲ್ಲುವ ಸಾಧ್ಯತೆ ಇತ್ತು. ಇದೇ ರೀತಿಯ ಲೋಪಗಳನ್ನು ಇತರ ರಾಜ್ಯಗಳಲ್ಲಿಯೂ ತಪ್ಪಿಸಿದ್ದರೆ, ಇನ್ನೂ 30 ರಿಂದ 40 ಸ್ಥಾನಗಳನ್ನು ಹೆಚ್ಚಾಗಿ ಗೆಲ್ಲಬಹುದಾಗಿತ್ತು. ಆ ಪರಿಸ್ಥಿತಿಯಲ್ಲಿ ನರೇಂದ್ರ ಮೋದಿ ಅವರು ಪ್ರಧಾನಮಂತ್ರಿ ಆಗುತ್ತಿರಲಿಲ್ಲ. ತಮ್ಮ ರಾಜಕೀಯ ಜೀವನ, ಕಾಂಗ್ರೆಸ್ ಪಕ್ಷದ ಮೇಲಿನ ನಿಷ್ಠೆ, ಸಚಿವನಾಗಿ ಮಾಡಿದ ಕೆಲಸಗಳು ಸೇರಿ ತಮ್ಮ ರಾಜಕೀಯ ಸಾಧನೆ ಬಗ್ಗೆಯೂ ಪತ್ರದಲ್ಲಿ ರಾಜಣ್ಣ ಉಲ್ಲೇಖಿಸಿದ್ದಾರೆ. ಸತ್ಯಾಸತ್ಯತೆಯನ್ನು ನಿಮ್ಮ ಮುಂದಿಡುವ ಸಲುವಾಗಿ ಈ ಪತ್ರ ಬರೆದಿದ್ದೇನೆ. ಜೊತೆಗೆ, ನನ್ನ ಮಾತುಗಳನ್ನು ತಪ್ಪಾಗಿ ಅರ್ಥೈಸಿ, ತಪ್ಪು ರೀತಿಯಲ್ಲಿ ನಿಮ್ಮ ಗಮನಕ್ಕೆ ತಂದವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ವಿನಂತಿಸುತ್ತೇನೆ ಎಂದು ಒತ್ತಾಯಿಸಿದ್ದಾರೆ.

## 'ಭಾವಿ ಮುಖ್ಯಮಂತ್ರಿ' ಭಾಗಿ

ಘೋಷಿಸುತ್ತಿದೆ. ಇಂದಿಗೂ ಅದನ್ನೇ ಮಾಡುತ್ತಿದೆ. ರಾಜ್ಯದ ಹಲವು ನಾಯಕರು ಸಹ ಇದರಲ್ಲಿ ಭಾಗಿ ಆಗಿದ್ದಾರೆ ಎಂದು ಆರೋಪಿಸಿದರು.

## ಕ್ರಿಕೆಟ್‌ಗೆ ಅನುಮತಿ ನಿರಾಕರಣೆ

ತಿಳಿಸಿದ್ದಾರೆ. ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಜೂನ್ 11ರಂದು ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದಲ್ಲಿ ಇಬ್ಬರು ಅಪ್ರಾಪ್ತರು ಸೇರಿದಂತೆ 11 ಜನರು ಸಾವನ್ನಪ್ಪಿದರು ಮತ್ತು ಹಲವಾರು ಜನರು ಗಾಯ ಗೊಂಡಿದ್ದರು. ಅನಂತರ, ಕ್ರೀಡಾಂಗಣದಲ್ಲಿ ಪಂದ್ಯಗ ಳನ್ನು ಸ್ಥಗಿತಗೊಳಿಸಲಾಯಿತು. ತರುವಾಯ, ನ್ಯಾಯ ಮೂರ್ತಿ ಮೈಕೆಲ್ ಡಿ'ಕುನ್ಹಾ ಸಮಿತಿಯು 17 ಸರಿಪಡಿಸುವ ಕ್ರಮಗಳನ್ನು ಒಳಗೊಂಡಂತೆ ಹಲವು ಶಿಫಾರಸುಗಳನ್ನು ಮಾಡಿತ್ತು.

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಚಿನ್ನಸ್ವಾಮಿ ಕ್ರೀಡಾಂ ಗಣದಲ್ಲಿ ಕ್ರಿಕೆಟ್ ಪಂದ್ಯಗಳನ್ನು ನಡೆಸಲು ಅನುಮೋದನೆ ಕೋರಿ ರಾಜ್ಯ ಸರ್ಕಾರವನ್ನು ಸಂಪರ್ಕಿಸಿತ್ತು. ವಿಜಯ್ ಹಜಾರೆ ಟ್ರೋಫಿ ಪಂದ್ಯಗಳು ಮತ್ತು ಮುಂಬರುವ ಇಂಡಿ ಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಪಂದ್ಯಗಳಿಗೆ ಅನುಮತಿ ಕೋರಲಾಗಿದೆ. ಕೆಎಸ್‌ಸಿಎ ಆಡಳಿತ ಮಂಡಳಿ ನೂತನ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಅವರು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಗೃಹ ಸಚಿವರನ್ನು ಭೇಟಿ ಮಾಡಿ ಪಂದ್ಯಗಳಿಗೆ ಅವಕಾಶ ನೀಡುವಂತೆ ಮನವಿ ಮಾಡಿದ್ದರು. ಆಯುಕ್ತ ಸೀಮಂತ್ ಕುಮಾರ್ ಸಿಂಗ್ ನೇತೃತ್ವದ ತಂಡವು ಇಂದು ಕ್ರೀಡಾಂಗಣದ ಪರಿಶೀಲನೆ ನಡೆಸಲು ನಿರ್ಧರಿಸಿ, ಭದ್ರತಾ ವ್ಯವಸ್ಥೆಗಳು ಮತ್ತು ಒಟ್ಟಾರೆ ಸಿದ್ಧತೆಯನ್ನು ಪರಿಶೀಲಿಸಿದೆ. ಪರಿಶೀಲನೆ ಪೂರ್ಣಗೊಳ್ಳುವವರೆಗೆ ಮತ್ತು ಆಯೋಗದ ಶಿಫಾರಸುಗಳನ್ನು ಸರ್ಕಾರ ಜಾರಿಗೆ ತರುವವರೆಗೆ, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯಗಳನ್ನು ಸ್ಥಗಿತಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಧರ್ಮ ಸತ್ಯ–ಶಾಶ್ವತ:

ಆತ್ಮಕ್ಕೆ ಸಾವಿಲ್ಲ. ಜಗತ್ತಿನಲ್ಲಿ ಎಲ್ಲವನ್ನು ತಿಳಿಯಲಾಗುವುದಿಲ್ಲ ಕೆಲವು ರಹಸ್ಯವಾಗಿರುತ್ತವೆ ಅದನ್ನು ಹುಡುಕುವ ಪ್ರಯತ್ನವೇ ಸಂಶೋಧನೆ. ವಿಜ್ಞಾನಿಗಳಿಗೂ ಅನೇಕ ಬಾರಿ ಇದರ ರಹಸ್ಯ ಗೋಚರವಾಗುವುದಿಲ್ಲ.ಅದನ್ನೇ ದೇವರು ಅಥವಾ ಅಗೋಚರ ಶಕ್ತಿ ಅದನ್ನು ಮೊರೆಹೋಗುವುದೇ ಮನುಜ ಧರ್ಮ ಎಂದರು.

ಯಾರೋ ಟೀಕೆ ಮಾಡಿದಾಕ್ಷಣ ಧರ್ಮ ದ ಶ್ರೇಷ್ಠತೆ ಕಡಿಮೆಯಾಗುವುದಿಲ್ಲ. ಟಿಕೆಗಳು ವ್ಯಕ್ತಿಗಳ ಅರಿವಿನ ಕೊರತೆಯನ್ನು ತೋರುತ್ತದೆ. ನಂಬಿಕೆಗಳನ್ನು ಹೊಂದಿ ಮೂಢ ನಂಭಿಕೆಯನ್ನುತೊರೆದು ಕಾಯಕದಲ್ಲಿ ಶ್ರದ್ದೆ, ಪ್ರಯತ್ನಶೀಲತೆಯಿಂದ ಒಳ್ಳೆಯ ಫಲಾ ಫಲಗಳು ದೊರೆತು ವ್ಯಕ್ತಿ ಸುಖಿಯಾಗುತ್ತಾನೆ ಎಂದ ಶ್ರೀ ಗಳು ಭಾರತದ ಸನಾತನ ಧರ್ಮದ ಪ್ರತಿಪಾದನೆಯತ್ತ ಎಲ್ಲರೂ ಕಾರ್ಯೋನ್ಮುಖರಾಗಬೇಕು ಎಂದು ಕರೆ ನೀಡಿದರು. ಮಂಡ್ಯಕ್ಕೆ ಆಗಮಿಸಿದ ಶ್ರೀ ಗಳನ್ನು ಅಪಾರ ಸಂಖ್ಯೆಯ ಭಕ್ತಾ ಧಿಗಳು ವೈಭವದಿಂದ ಸ್ವಾಗತಿಸಿ ಬರ ಮಾಡಿಕೊಂಡರು. ಜಿಲ್ಲಾಧಿಕಾರಿ ಕುಮಾರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಶ್ರೀ ಗಳ ಆಶೀರ್ವಾದ ಪಡೆದರು. ನೆಹರು ನಗರದ ಶ್ರೀ ಶಂಕರ ಮಠದಲ್ಲಿ ಶ್ರೀಗಳು ಚಂದ್ರಮೌಳೇಶ್ವರ ನಿಗೆ ವಿಶೇಷ ಪೂಜೆ ಸಲ್ಲಿಸಿದರು. ಶ್ರೀ ಗಳು ಭಕ್ತಾದಿ ಗಳಿಗೆ ಫಲ, ಮಂತ್ರಾಕ್ಷತೆ ನೀಡಿ ಆಶೀ ರ್ವದಿಸಿದರು.


**ಪುರಸಭೆ ಕಾರ್ಯಾಲಯ, ಹೆಚ್.ಡಿ.ಕೋಟೆ, ಮೈಸೂರು ಜಿಲ್ಲೆ**
**E-Mail ID: itstaff_ulb_hdkote@yahoo.com**
**Phone(O)/Fax: 08228-255327**
**ನಂ:ಪು.ಕಾ.ಹೆ.ಕೋ/ಆರೋಗ್ಯ ಶಾಖೆ/ಸಿ.ಆರ್ 07/2025–26 ದಿ: 22.12.2025**

**ಟೆಂಡರ್ ಪ್ರಕಟಣೆ**

ಹೆಚ್.ಡಿ.ಕೋಟೆ ಪುರಸಭಾ ಅನುದಾನದಡಿ ನಿಯಮಗಳ ಅನ್ವಯ, 15ನೇ ಹಣಕಾಸು, ಎಸ್.ಎಫ್.ಸಿ 2025–26ನೇ ಸಾಲು ಹಾಗೂ ಪುರಸಭಾ ನಿಧಿ ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಅರ್ಹ ಸಂಸ್ಥೆಗಳಿಂದ ಕೆ.ಡ್ಲ್ಯೂ.ಯು–1 ನಿಯಮಗಳನ್ವಯ ಮತ್ತು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು https://kppp.karnataka.gov.in ಪೋರ್ಟಲ್ ಮುಖಾಂತರ ಈ ಕೆಳಕಂಡ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಸಂಸ್ಥೆಯವರು/ಗುತ್ತಿಗೆದಾರರು https://kppp.karnataka.gov.in ನಿಂದ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ಗಳನ್ನು ಸಲ್ಲಿಸಬಹುದು. 1) ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸುವ ಕಡೆಯ ದಿ: 05.01.2026 ಸಂಜೆ 5.30 ಗಂಟೆಯವರೆಗೆ. 2) ಟೆಂಡರ್ ತೆರೆಯುವ ದಿ: 07.01.2026 ಬೆಳಿಗ್ಗೆ 11.00 ಗಂಟೆಗೆ ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

| ಕ್ರ. ಸಂ | ಕಾಮಗಾರಿಯ ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) | ಇ.ಎಂ.ಡಿ. ಮೊತ್ತ (ರೂ. ಗಳಲ್ಲಿ) |
|---|---|---|---|
| 1. | DMA/2025-26/SE6157/ CALL-2 | 2.04 | 5100.00 |
| 2. | DMA/2025-26/SE6936 | 5.11 | 10200.00 |
| 3. | DMA/2025-26/IND5802 | 32.85 | 67500.00 |

**ಸೂಚನೆ:** ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಮತ್ತು ಇತರೆ ಬದಲಾವಣೆಗಳಿದ್ದಲ್ಲಿ ಹಾಗೂ ಹೆಚ್ಚಿನ ವಿವರಗಳಿಗೆ ಗುತ್ತಿಗೆದಾರರು https://kppp.karnataka.gov.in/ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಹೆಚ್.ಡಿಕೋಟೆ

DIPR/DDMYS/1418/KSMCA/807/2025-26


# ಜಿಲ್ಲಾ, ಕೃಷಿ ತರಬೇತಿ ಕೇಂದ್ರದಲ್ಲಿ ರಾಷ್ಟ್ರೀಯ ರೈತರ ದಿನಾಚರಣೆ

ಮೈಸೂರು: ರೈತರಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಮಾಡಬೇಕು ಹಾಗೂ ಸಮರ್ಪಕವಾಗಿ ನೀರು ನಿರ್ವಹಣೆ ಬಗ್ಗೆ ಅರಿವು ಮೂಡಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಎಚ್.ರವಿ ಸಲಹೆ ಮಾಡಿದರು.

ಕೃಷಿ ಇಲಾಖೆ, ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ [ಆತ್ಮ], ಕೃಷಿ ತಂತ್ರಜ್ಞರ ಸಂಸ್ಥೆ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ಸಾವಯವ ಕೃಷಿ ಸಂಶೋಧನಾ ಕೇಂದ್ರ ಮತ್ತು ವಿಸ್ತರಣಾ ಶಿಕ್ಷಣ ಘಟಕ, ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ, ತೋಟಗಾರಿಕೆ ಮಹಾವಿದ್ಯಾಲಯ ಸಂಯುಕ್ತ ಆಶ್ರಯದಲ್ಲಿ ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಮಂಗಳವಾರ ಏರ್ಪಡಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಹಾಗೂ ನೈಸರ್ಗಿಕ ಕೃಷಿ ಕುರಿತು ರೈತರು– ವಿಜ್ಞಾನಿಗಳೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ರೈತರ ಸ್ಥಿತಿಗತಿಗಳ ಬಗ್ಗೆ ಆಡಳಿತ ವರ್ಗ, ರಾಜ ಕಾರಣಿಗಳು, ಅಧಿಕಾರಿಗಳು ಗಮನಹರಿಸಬೇಕು. ಕೃಷಿ ಕ್ಷೇತ್ರದ ಸಮಸ್ಯೆಗಳು, ಯಾಂತ್ರೀಕರಣ ಮಾಡಲು ಬೇಕಾದ ಸವಲತ್ತು, ರೈತರ ಆರ್ಥಿಕ



ಸಬಲತೆ, ಖರ್ಚು ಕಡಿಮೆ ಮಾಡಿ, ಆದಾಯ ಹೆಚ್ಚಿಸುವುದು, ಮಾರುಕಟ್ಟೆ ವ್ಯವಸ್ಥೆ ಬಗ್ಗೆ ಬೆಳಕು ಚೆಲ್ಲಬೇಕು ಎಂದು ಹೇಳಿದರು.

ಎಂಜಿನಿಯರ್‌ಗಳು ಕೃಷಿ ಕ್ಷೇತ್ರಕ್ಕೆ ಬಂದು ಸಾಧನೆ ಮಾಡುತ್ತಿದ್ದಾರೆ. ಆದರೆ ಕೃಷಿಯಲ್ಲಿ ತಾಂತ್ರಿಕ ಜ್ಞಾನ ಪಡೆದವರು ವ್ಯವಸಾಯ ಮಾಡುತ್ತಿಲ್ಲ. ನೈಸರ್ಗಿಕ ಕೃಷಿ ತೋಟಗಾರಿಕೆ ಬೆಳೆಗಳಲ್ಲಿ ಯಶಸ್ಸು ಕಂಡಿದ್ದರೂ ಇತರೆ ಬೆಳೆಗಳಲ್ಲಿ ಆ ರೀತಿಯಾಗುತ್ತಿಲ್ಲ. ಈ ಬಗ್ಗೆ ಕೂಡ ಗಮನಹರಿಸಬೇಕು. ಚೌಧರಿ ಚರಣ್‌ಸಿಂಗ್ ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಿ, ನಂತರ ಉಪ ಪ್ರಧಾನಿಯಾಗಿ, ಅಲ್ಪಕಾಲ ಪ್ರಧಾನಿಯೂ ಆಗಿ ರೈತರ ಬಗ್ಗೆ ಮಾಡಿರುವ ಹಲವಾರು ಸುಧಾರಣಾ ಕ್ರಮಗಳಿಂದಾಗಿ ಪ್ರತಿ ವರ್ಷ ಅವರ ಜನ್ಮದಿನವಾದ ಡಿ.23 ರಂದು ರಾಷ್ಟ್ರೀಯ ರೈತರ ದಿನ ಆಚರಿಸಲಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕೆ.ಎಸ್.ಶಿವಕುಮಾರ್ ಮಾತನಾಡಿ, ರೈತರು ಪ್ರತಿನಿತ್ಯ ಸಂಕಷ್ಟ ಎದುರಿಸುತ್ತಾರೆ. ಕೆಲವೊಮ್ಮೆ ಪ್ರಕೃತಿಯೇ ಅವರ ವಿರುದ್ಧ ಇರುತ್ತದೆ. ಬೆಳೆ ರೋಗಗಳು ಕೂಡ ಕಾಡುತ್ತವೆ. ಪರಿಸ್ಥಿತಿ ಈ ರೀತಿ ಇರುವಾದ ಚೀನಾದಲ್ಲಿ ಇರುವಂತೆ ಸಹಕಾರಿ ಕೃಷಿ ವ್ಯವಸ್ಥೆ ಜಾರಿಗೆ ಬಂದಲ್ಲಿ ಅನುಕೂಲವಾಗಬಹುದು ಎಂದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ರಾಜ್ಯ ನಿರ್ದೇಶಕ ಕೆ.ಆರ್. ನಟರಾಜ ಮುಖ್ಯಅತಿಥಿಗಳಾಗಿದ್ದರು. ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ನಿರ್ದೇಶಕ ಕೆ.ನಾಗರಾಜ, ಆತ್ಮಾ ಯೋಜನೆ ಉಪ ನಿರ್ದೇಶಕ ಸಿ.ಸತೀಶ, ಧನಂಜಯ ಇದ್ದರು. ಕೃಷಿ ತಂತ್ರಜ್ಞರ ಸಂಸ್ಥೆ ಕಾರ್ಯದರ್ಶಿ ಕೆ.ಆರ್.ರವೀಂದ್ರ ಸ್ವಾಗತಿಸಿ, ಪ್ರಾಸ್ತಾವಿಕ ಭಾಷಣ ಮಾಡಿದರು. ಎಚ್.ಬಿ.ಮಧುಲತಾ ಕಾರ್ಯಕ್ರಮ ನಿರೂಪಿಸಿದರು.

# ಸ್ತಬ್ದ ಚಿತ್ರಗಳೊಂದಿಗೆ ಮೆರವಣಿಗೆಯ ಸೊಬಗು, ರೇಷ್ಮೆ ನಾಡ ಕನ್ನಡ ಹಬ್ಬ

**ಕನ್ನಡ ತಾಯಿ ಭುವನೇಶ್ವರಿಯ ಭವ್ಯ ಮೆರವಣಿಗೆ** | **40ಕ್ಕೂ ಹೆಚ್ಚು ಕಲಾ ತಂಡಗಳು**

ರಾಮನಗರ: ಜಿಲ್ಲಾ ಕೇಂದ್ರ ರಾಮನಗರದಲ್ಲಿ ಮತ್ತೊಂದು ಇತಿಹಾಸ ಸೃಷ್ಟಿಯಾಗಿದೆ. ಬಹುಶಃ ರಾಜ್ಯದ ಯಾವ ನಗರಸಭೆಯೂ ಆಚರಿಸದಷ್ಟು ದೊಡ್ಡ ಮಟ್ಟದಲ್ಲಿ ರಾಮನಗರ ನಗರಸಭೆ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ನಗರದ ಇತಿಹಾಸದ ಪುಟಗಳಲ್ಲಿ ದಾಖಲಾಗಿದೆ.

### ಭವ್ಯವಾದ ಮೆರವಣಿಗೆ

ಕನ್ನಡ ತಾಯಿ ಭುವನೇಶ್ವರಿ ಮಾತೆಯ ಮೆರವಣಿಗೆ ಯಲ್ಲಿ 40ಕ್ಕೂ ಹೆಚ್ಚು ಕಲಾತಂಡಗಳು, ನಗರಸಭೆಯ ಸೇವೆಯನ್ನು ಪ್ರತಿಬಿಂಬಿಸುವ ಸ್ಥಬ್ದ ಚಿತ್ರಗಳು, ಕನ್ನಡ ಬಾವುಟ ಹಿಡಿದು ಕನ್ನಡಾಂಬೆಯನ್ನು ಮೆರೆಸಿದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ನಗರದ ಮಿನಿ ವಿಧಾನಸೌಧದಿಂದ ಜಿಲ್ಲಾ ಕ್ರೀಡಾಂಗಣದ ವರೆಗೆ ಸಾಗುವಾಗ ಸಾವಿರಾರು ಮಂದಿ ನಾಗರೀಕರು ಮೆರವಣಿಗೆಯ ಸೊಬಗನ್ನು ಕಣ್ತುಂಬಿಕೊಂಡರು. ಭುವನೇಶ್ವರಿ ತಾಯಿಗೆ ಪುಷ್ಪ ಮಳೆಗೈದು ತಮ್ಮ ಭಕ್ತಿ ಸಮರ್ಪಿಸಿಕೊಂಡರು. ಮೈಸೂರು ನಗಾರಿ, ಉತ್ತರ ಕನ್ನಡ ಜಿಲ್ಲೆಯ ಡಮಾಮಿ ನೃತ್ಯ, ಚಾಮರಾಜನಗರದ ಸೋಲಿಗರ ನೃತ್ಯ, ಕೋಲಾರದ ಮರಗಾಲು ಮತ್ತು ಗಾರುಡಿಗೊಂಬೆ, ಹಾಸನದ ಚಟ್ಟಿಮೇಳ, ಮಹಿಳಾ ಕೋಲಾಟ, ಮಂಡ್ಯ ಜಿಲ್ಲೆಯ ಕಾಡುಗೊಲ್ಲರ ಕೋಲಾಟ, ತುಮಕೂರು ಜಿಲ್ಲೆಯ ಮಣೇವು ನೃತ್ಯ, ಶಿವಮೊಗ್ಗದ ಹೋಳಿನೃತ್ಯ, ಧಾರವಾಡದ ಜಗ್ಗಲಿಗೆ ಮೇಳ, ಶಿರಾದ ನಾಶಿಕ್ ಡೋಲು, ಬೆಳಗಾವಿಯ ಕರಡಿ ಮಜಲು, ಕೊಡಗಿನ ಜೇನುಕುರುಬರ ನೃತ್ಯ, ಬಳ್ಳಾರಿಯ ಲೆಂಗಿನ್ ನೃತ್ಯ, ಕಲ್ಬುರ್ಗಿಯ ಲಂಬಾಣಿ ಮಹಿಳೆಯರ ಬೂರ್ಮ ನೃತ್ಯ ಜತೆಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ಪೂಜಾ ಕುಣಿತ, ಡೊಳ್ಳು, ವೀರಗಾಸೆ, ಪಟ, ಸೋಮನ ಕುಣಿತ, ಚಿಲಿಪಿಲಿ ಗೊಂಬೆ, ಕೋಳಿ ನೃತ್ಯ ಮುಂತಾದ ಕಲಾ ತಂಡಗಳು ಮೆರವಣಿಗೆಯ ಸೊಬಗನ್ನು ಹೆಚ್ಚಿಸಿದವು.

### ಸ್ತಬ್ಧಚಿತ್ರಗಳ ಮೆರುಗು

ನಗರಸಭೆಯ ಕಂದಾಯ, ಎಂಜಿನಿಯರಿಂಗ್, ಆರೋಗ್ಯ ಮುಂತಾದ ವಿಭಾಗಗಳಲ್ಲಿ ಪ್ರಮುಖವಾಗಿ ಜಾರಿಯಲ್ಲಿರುವ ಕಾರ್ಯಕ್ರಮಗಳನ್ನು ಪ್ರತಿಬಿಂಬಿಸುವ ಸ್ತಬ್ದಚಿತ್ರಗಳು ಜನರ ಗಮನ ಸೆಳೆಯಿತು. ನಗರದ ಸ್ವಚ್ಛತೆಯನ್ನು ಕಾಪಾಡುವ ಪೌರ ಕಾರ್ಮಿಕರನ್ನು ರಿಯಲ್ ಹೀರೊಗಳು ಎಂದು ಸಾರುವ ಸ್ತಬ್ದ ಚಿತ್ರ ಪೌರ ಕಾರ್ಮಿಕರಿಗೆ ಸಂದ ಗೌರವವಾಗಿತ್ತು.

### ಬೆಳ್ಳಿರಥದಲ್ಲಿ ಲಿಂಗಪ್ಪ ಮೆರವಣಿಗೆ:

ಪೌರ ಸನ್ಮಾನಕ್ಕೆ ಭಾಜನರಾದ ಮಾಜಿ ಶಾಸಕ ಸಿ. ಎಂ.ಲಿಂಗಪ್ಪರವನ್ನು ಬೆಳ್ಳಿ ರಥದಲ್ಲಿ ಕೂರಿಸಿ ಅದ್ದೂರಿ ಮೆರವಣಿಗೆ ನಡೆಸಲಾಯಿತು.

### ಕಂಗೊಳಸಿದ ನಗರ!

ನಗರದ ಪ್ರಮುಖ ರಸ್ತೆಗಳು ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಸಿತು. ಮಿನಿ ದಸರೆಯಂತೆ ರೇಷ್ಮೆ ನಗರ ರಾಮನಗರ ಮದುವಣಿಗಿತ್ತಿಯಂತೆ ಸಿಂಗಾರಗೊಂಡಿತ್ತು.

### ಮನಸೂರೆಗೊಂಡ ಸಂಗೀತ ರಸಸಂಜೆ

ರೇಷ್ಮೆನಾಡ ಕನ್ನಡ ಹಬ್ಬ ಎಂದು ನಾಮಾಂಕಿತಗೊಂಡಿದ್ದ ಕನ್ನಡ ರಾಜ್ಯೋತ್ಸವವದ ಅಂಗವಾಗಿ ನಗರಸಭೆ ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿತ್ತು. ಗುರುಕಿರಣ್, ರಾಜೇಶ್ ಕೃಷ್ಣನ್, ಅನುರಾಧ ಭಟ್, ಅನುಪಮ ಭಟ್, ಮಂಗ್ಲಿ ಮುಂತಾದ ಖ್ಯಾತ ಗಾಯಕರು ನಡೆಸಿಕೊಟ್ಟ ರಸಮಂಜರಿ ಕಾರ್ಯಕ್ರಮವನ್ನು ನಡುಗುವ ಚಳಿಯಲ್ಲೇ ಮಧ್ಯರಾತ್ರಿವರೆಗೆ ನಾಗರೀಕರು ವೀಕ್ಷಿಸಿದರು.





## ರೇಷ್ಮೆ ನಾಡ ಕನ್ನಡ ಹಬ್ಬ: ಜಿಲ್ಲಾ ಕ್ರೀಡಾಂಗಣದಲ್ಲಿ ಕನ್ನಡದ ಕಲರವ

### ಪೌರ ಸನ್ಮಾನ: ಸಿ.ಎಂ.ಲಿಂಗಪ್ಪ ಆದರ್ಶ ರಾಜಕರಣಿ – ಗಣ್ಯರ ಅಭಿಮತ

ರಾಮನಗರ: ಮಾಜಿ ಶಾಸಕ ಸಿ.ಎಂ.ಲಿಂಗಪ್ಪ ಆದರ್ಶ ರಾಜಕರಣಿ, ಅವರಿಗೆ ಸಲ್ಲಿಸುತ್ತಿರುವ ನಾಗರಿಕ ಸನ್ಮಾನ ನನ್ನನ್ನು ಇಲ್ಲಿಗೆ ಕರೆತಂದಿತು ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್.ಮಂಜುನಾಥ್ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಲ್ಲಿನ ನಗರಸಭೆ ಆಯೋಜಿಸಿದ್ದ ರೇಷ್ಮೆ ನಾಡ ಕನ್ನಡ ಹಬ್ಬದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸಿ.ಎಂ.ಲಿಂಗಪ್ಪ ಅವರು ಪ್ರಾಮಾಣಿಕ ರಾಜ ಕರಣಿಗಳಲ್ಲಿ ಒಬ್ಬರು. ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿದವರು. ಸಿ.ಎಂ.ಲಿಂಗಪ್ಪ ರಾಜಕಾರಣಿ ಆಗಿರದೆ ರಾಷ್ಟ್ರಕಾರಣಿ ಆಗಿದ್ದವರು. ರಾಷ್ಟ್ರಕಾರಣಿ ಆದವರು ಮುಂದಿನ ಪೀಳಿಗೆಗೆ ಶಾಶ್ವತ ಕಾರ್ಯಕ್ರಮಗಳನ್ನು ನೀಡುವವರು. ಹೀಗಾಗಿ ಸಿ.ಎಂ.ಲಿಂಗಪ್ಪರವರು ನಿಜವಾದ ರಾಷ್ಟ್ರಕಾರಣಿ ಎಂದು ಬಣ್ಣಿಸಿದರು.

#### ನನ್ನದು ಅನನ್ಯ ಸಾಧನೆ ಅಲ್ಲ – ಸಿ.ಎಂ.ಲಿಂಗಪ್ಪ!

ರಾಮನಗರ ನಗರಸಭೆ ನೀಡಿದ ಪೌರ ಸನ್ಮಾನವನ್ನು ಸ್ವೀಕರಿಸಿದ ಮಾಜಿ ಶಾಸಕ ಸಿ. ಎಂ.ಲಿಂಗಪ್ಪ ತಮಗೆ ನೀಡಿದ ಸ್ಮರಣಿಕೆಯನ್ನು ನಗರಸಭೆಗೆ ಹಿಂದುರಿಗಿಸಿ, ಸಾರ್ವಜನಿಕ ಜೀವನದಲ್ಲಿ ಇದ್ದಷ್ಟು ದಿನವೂ ಪ್ರಾಮಾಣಿಕ ಮತ್ತು ಪಾರದರ್ಶಕವಾಗಿ ಕೆಲಸ ಮಾಡಿದ ತೃಪ್ತಿ ನನಗಿದೆ. ಬೇರೆಯವರು ಮಾಡದ ಸಾಧನೆಯನ್ನೇನೂ ನಾನು ಮಾಡಿಲ್ಲ. ಆದ್ದರಿಂದ ಪೌರ ಸನ್ಮಾನದೊಂದಿಗೆ ನೀಡಿರುವ ಸ್ಮರಣಿಕೆಯನ್ನು ನಗರಸಭೆಯಲ್ಲಿಯೇ ಇಟ್ಟುಕೊಳ್ಳುವಂತೆ ಹೇಳಿ ಮಾಜಿ ಶಾಸಕ ಸಿ.ಎಂ.ಲಿಂಗಪ್ಪ ವಾಪಸ್ ನೀಡಿದರು. ಸಾಮಾನ್ಯರಲ್ಲಿ ಸಾಮಾನ್ಯನಾಗಿ ನಿರ್ವೆಚನೆಯಿಂದ ಸೇವೆ ಸಲ್ಲಿಸುವ ಕೆಲಸ ಮಾಡಿದ್ದೇನೆ. ಹಾಗಾಗಿ ಸನ್ಮಾನಕ್ಕೆ ಧ್ಯೋತಕವಾಗಿರುವ ಸ್ಮರಣಿಕೆಯನ್ನು ಹಿಂಪಡೆದು ನಗರಸಭೆಯಲ್ಲಿಯೇ ಇಟ್ಟುಕೊಳ್ಳಲಿ. ನನ್ನ ಮನಸ್ಸಿಗೂ ಸಮಾಧಾನ ಆಗುತ್ತದೆ ಎಂದರು.

ನನ್ನ ಅಧಿಕಾರದ ಅವಧಿಯಲ್ಲಿ ಬಡವರಿಗೆ ನಿವೇಶನ, ಸೂರು ಕಲ್ಪಿಸಿದೆ. 3 ಸಾವಿರ ಗೇಣಿ ದಾರರಿಗೆ ಗೇಣಿ ಒದಗಿಸಿಕೊಟ್ಟು ನೂರಕ್ಕೆ ನೂರರಷ್ಟು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿದ ತೃಪ್ತಿಯಿದೆ. ನಾನೆಂದೂ ಗೌರವವನ್ನು ಮಾಡಿಸಿಕೊಂಡವನಲ್ಲ. ಅಭಿನಂದನೆಗೆ ಅರ್ಹವಾಗುವ ಕೆಲಸ ಮಾಡಿದ್ದರೆ ಅಭಿನಂದನೆ ಸ್ವೀಕರಿಸುತ್ತಿದ್ದೆ. ಕರ್ತವ್ಯ ಮಾಡಿದ್ದೇನೆ ಅಷ್ಟೆ. ಅಭಿನಂದನೆಗೆ ಅರ್ಹವಾಗುವ ಕೆಲಸ ಮಾಡಿಲ್ಲ ಎಂದು ಹೇಳಿದರು. ರಾಮನಗರ ಕ್ಷೇತ್ರ ಶಾಸಕ ಇಕ್ಬಾಲ್ ಹುಸೇನ್ ಜನಪರ ಕಾರ್ಯಗಳ ಮೂಲಕ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಭವಿಷ್ಯದಲ್ಲಿ ಅವರಿಗೂ ಪೌರ ಸನ್ಮಾನ ಮಾಡುವ ದಿನಗಳು ಬರಲಿ ಎಂದು ಸಿ.ಎಂ.ಲಿಂಗಪ್ಪ ಆಶಿಸಿದರು.

#### ಸಿ.ಎಂ.ಲಿಂಗಪ್ಪರನ್ನು ಶ್ಲಾಘಿಸಿದ ಹೆಚ್. ಎಂ.ರೇವಣ್ಣ:

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಾಜ್ಯಾಧ್ಯಕ್ಷ ಎಚ್.ಎಂ.ರೇವಣ್ಣ ಮಾತನಾಡಿ, ನಾನು ಮತ್ತು ಸಿ.ಎಂ.ಲಿಂಗಪ್ಪ ಸ್ನೇಹಿತರಷ್ಟೇ ಅಲ್ಲ ಸಹೋದರರಂತೆ ಇದ್ದೇವೆ. 75ರ ದಶಕದಲ್ಲಿ ನಾವು ಪಂಚ ಪಾಂಡವರಂತೆ ಜಿಲ್ಲೆಯಲ್ಲಿ ಕೆಲಸ ಮಾಡಿದವರು. ಮಾಜಿ ಶಾಸಕ ಸಿ. ಎಂ.ಲಿಂಗಪ್ಪ ಧರ್ಮರಾಯ, ನಾನು ಭೀಮ, ಡಿ.ಕೆ.ಶಿವಕುರ್ಮಾ ಅರ್ಜುನ, ಮುನಿನರಸಿಂಹಯ್ಯ ನಕುಲರ ರೀತಿಯಲ್ಲಿ ಕೆಲಸ ಮಾಡಿದೆವು. ಲಿಂಗಪ್ಪಅವರು ಮಾಡಿರುವ ಕೆಲಸಕ್ಕೆ ಸಲ್ಲಿಸಿರುವ ಗೌರವ ಶ್ಲಾಘನೀಯ ಎಂದು ಹೇಳಿದರು.

#### ಕೆಂಗಲ್ ಹನುಮಂತಯ್ಯ ಪ್ರಶಸ್ತಿ ಪ್ರದಾನ:

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ 17 ಮಂದಿಗೆ ಕೆಂಗಲ್ ಹನುಮಂತಯ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ಶಾಸಕ ಇಕ್ಬಾಲ್ ಹುಸೇನ್ ಅಧ್ಯಕ್ಷತೆ ವಹಿಸಿದ್ದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ರಾಜು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಾಣಕಲ್ ನಟರಾಜ್, ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ (ಶಶಿ), ಆಯುಕ್ತರಾದ ಜಯಣ್ಣ, ಛಲವಾದಿ ಮಹಾ ಸಭಾ ಅಧ್ಯಕ್ಷೆ ವಾಣಿ ಶಿವರಾಂ, ಹಿಂದುಳಿದ ಸಮುದಾಯಗಳ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಚಂದ್ರಸಾಗರ್ ಮತ್ತಿತರರು ಉಪಸ್ಥಿತರಿದ್ದರು.

#### ಶಾಸಕರಾಗಲು ಕೆ.ಶೇಷಾದ್ರಿ ಅರ್ಹರು!

**ರೇಷ್ಮೆನಾಡ ಕನ್ನಡ ಹಬ್ಬದ ನೇತೃತ್ವವಹಿಸಿದ್ದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಶಾಸಕರಾಗಲು ಎಲ್ಲ ಅರ್ಹತೆಯನ್ನು ಪಡೆದಿದ್ದಾರೆ ಎಂದು ಬಹುತೇಕ ನಾಗರೀಕರು ಪ್ರತಿಕ್ರಿಯಿಸಿದ್ದಾರೆ. ಇ–ಖಾತೆ ಸೃಜನೆ, ರಸ್ತೆಗಳ ಡಾಂಬರೀಕರಣ, ನೀರು ಸರಬರಾಜು, ನಗರಸಭೆಯ ಆಡಳಿತ ಯಂತ್ರಕ್ಕೆ ಚುರುಕು, ಹೀಗೆ ಸಾರ್ವಜನಿಕರಲ್ಲಿ ನಗರಸಭೆಯ ಬಗ್ಗೆ ಇದ್ದ ಅಸಮಾಧಾನವನ್ನು ಹಂತ ಹಂತವಾಗಿ ನಿವಾರಿಸುತ್ತಿರುವ ಕೆ. ಶೇಷಾದ್ರಿ ಅವರ ಅಹರ್ನಿಷಿ ಶ್ರಮಕ್ಕೆ ನಗರದ ನಾಗರೀಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಜನರ ಬಗ್ಗೆ ಅಪಾರ ಕಾಳಜಿ ಇರಿಸಿಕೊಂಡಿರುವ ಕೆ.ಶೇಷಾದ್ರಿ ಅವರಿಗೆ ಮುಂದಿನ ದಿನಗಳಲ್ಲಿ ಶಾಸಕರಾಗುವ ಅವಕಾಶವು ದೊರೆಯಲಿ ಎಂದು ನಾಗರೀಕರು ಆಶಿಸಿದ್ದಾರೆ.**

**ಮೊದಲ ಪುಟದಿಂದ**

## ಬಾಯಿ ಮುಚ್ಚಿಸಲು ಷಡ್ಯಂತ್ರ

ಕಾಂಗ್ರೆಸ್ ವಿರುದ್ಧ ಯಾರೂ ಮಾತನಾಡಬಾರದು. ಸೋಷಿಯಲ್ ಮೀಡಿಯಾದಲ್ಲಿ ಬರೆಯಬಾರದು. ಇದು ಅವರ ವ್ಯವಸ್ಥಿತ ಷಡ್ಯಂತ್ರ. ಕಾಂಗ್ರೆಸ್ ಸರ್ಕಾರ ಎಲ್ಲದರಲ್ಲೂ ವಿಫಲವಾಗಿದೆ. ಕುರ್ಚಿ ಕಾದಾಟದಲ್ಲಿ ನಿರತರಾಗಿದ್ದಾರೆ. ವಿಷಯವನ್ನು ವಿಷಯಾಂತರ ಮಾಡಲು ಹಲವಾರು ಅಸ್ತ್ರಗಳನ್ನು ಬಳಸುತ್ತಿದ್ದಾರೆ. ಇದರಲ್ಲಿ ದ್ವೇಷ ಭಾಷಣ ತಡೆ ಕಾಯ್ದೆ ಕೂಡ ಒಂದು. ರಾಜ್ಯದ ಜನರ ಗಮನ ಬೇರೆ ಕಡೆ ತಿರುಗಿಸಲು ನಡೆಸುತ್ತಿರುವ ಷಡ್ಯಂತ್ರ ಎಂದು ಆರೋಪಿಸಿದರು.

## ಆರ್‌ಎಫ್‌ಒಗೆ ರೈತರ ಘೇರಾವ್

ಆರ್.ಎಫ್.ಓ ಸುಬ್ರಹ್ಮಣ್ಯ ಅವರ ಜೀಪಿಗೆ ಗಾಯಗೊಂಡಿರುವ ಹಸುವನ್ನು ಕಟ್ಟಿ ಘೇರಾವು ಹಾಕಿ ಪ್ರತಿಭಟನೆ ನಡೆಸಿದರು.

## ಸಿದ್ದುಗೆ ಜೈ, ಡಿಕೆಶಿಗೆ ಬೈಬೈ!

ಸಂದರ್ಭದಲ್ಲಿ ರಾಜಣ್ಣ ಅವರ ಈ ಪತ್ರ ರಾಜ್ಯ ರಾಜಕೀಯದಲ್ಲಿ ಮಹತ್ವ ಪಡೆದುಕೊಂಡಿದೆ.

## ಅಪಘಾತಕ್ಕೀಡಾದ ವ್ಯಕ್ತಿಯಿಂದ ಹಣ ದೋಚಿದ್ದ ಇಬ್ಬರ ಬಂಧನ

ಕಳುಹಿಸಿದ್ದಾರೆ. ಬಂಧಿತರಿಂದ 80 ಸಾವಿರ ಹಣ ಹಾಗೂ ಎರಡು ಮೊಬೈಲ್ ವಶಕ್ಕೆ ಪಡೆಯಲಾಗಿದೆ


## ದ್ವೇಷ ಭಾಷಣಕ್ಕೆ ಅಂಕಿತ ಬೇಡ

ಕಾಂಗ್ರೆಸ್ ನೆಲಕಚ್ಚಿತು. ಈಗ ಹಿಂದೂ ನಾಯಕರನ್ನು ಹತ್ತಿಕ್ಕಲು ತಂದಿರುವ ಕರಾಳ ಶಾಸನದಿಂದ ರಾಜ್ಯದಲ್ಲಿ ಕಾಂಗ್ರೆಸ್ ನೆಲ ಕಚ್ಚಲಿದೆ ಎಂದರು. ಕಾಂಗ್ರೆಸ್ ನಾಯಕತ್ವ ದುರ್ಬಲಗೊಂಡು ದುಸ್ಥಿತಿಗೆ ತಲುಪಿದೆ. ಸಿ.ಎಂ. ಸ್ಥಾನ ಬದಲಾವಣೆ ವಿಷಯದಲ್ಲಿ ಹೈಕಮಾಂಡ್ ತೀರ್ಮಾನ ಅಂತಿಮ ಎಂದು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಹಾಗಾದರೆ, ಎಐಸಿಸಿ ಅಧ್ಯಕ್ಷರು ಹೈಕಮಾಂಡ್ ಅಲ್ಲವೇ? ಗಾಂಧಿ ಕುಟುಂಬಕ್ಕೆ ಇಡೀ ಕಾಂಗ್ರೆಸ್ ಪಕ್ಷವನ್ನು ಒತ್ತೆಯಾಗಿರಿಸಿದ್ದೀರಾ? ಎಂದು ಪ್ರಶ್ನಿಸಿದರು. ಒಕ್ಕಲಿಗ ಸಮಾಜದ ಶ್ರೀಗಳು ಡಿ.ಕೆ. ಶಿವಕುಮಾರ್ ಪರವಾಗಿ, ಹಾಲುಮತ ಸ್ವಾಮೀಜಿಗಳು ಸಿದ್ಧರಾಮಯ್ಯ ಪರವಾಗಿ ಧ್ವನಿ ಎತ್ತುತ್ತಿದ್ದಾರೆ. ಅತ್ತ ಶಾಸಕರ ಗುಂಪುಗಾರಿಕೆ ಸಹ ವ್ಯಾಪಕವಾಗಿದೆ, ಇದರಿಂದ ಕಾರ್ಯಕರ್ತರಿಗೆ ಅನುಮಾನ ಇದ್ದರೆ, ಅಧಿಕಾರಿ ವರ್ಗ ಮಾತ್ರ ಆರಾಮಾಗಿದ್ದಾರೆ ಎಂದರು.

## ಬಿಸಿಸಿಐ ಮೈದಾನಕ್ಕೆ ಸ್ಥಳಾಂತರ

ಮೈದಾನಗಳನ್ನು ನಿರ್ಮಾಣ ಮಾಡಲಾಗಿದೆ. ಪ್ರಥಮ ದರ್ಜೆ ಕ್ರಿಕೆಟ್ ಪಂದ್ಯ ಆಯೋಜಿಸಲು ಐಸಿಸಿಯ ನಿಯಮಗಳ ಪ್ರಕಾರ ಈ ಮೈದಾನವನ್ನು ನಿರ್ಮಿಸಲಾಗಿದೆ. 2024ರಲ್ಲಿ ಬಿಸಿಸಿಐ ಅಧ್ಯಕ್ಷ ರೋಜರ್ ಬಿನ್ನಿ ಮತ್ತು ಕಾರ್ಯದರ್ಶಿಯಾಗಿದ್ದ ಜಯ್ ಶಾ ಸೆಂಟರ್ ಆಫ್ ಎಕ್ಸಲೆನ್ಸ್ ಕ್ಯಾಂಪಸ್ ಉದ್ಘಾಟಿಸಿದ್ದರು.

## ಡಿ.26ಕ್ಕೆ ಅಹಿಂದ ಒಕ್ಕೂಟದ ವಾರ್ಷಿಕೋತ್ಸವ



ಮೈಸೂರು: ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟದ ಪ್ರಥಮ ವರ್ಷದ ಕನ್ನಡ ರಾಜ್ಯೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಡಿ.26 ರ ಬೆಳಗ್ಗೆ 8.30 ರಿಂದ ಸಂಜೆ 5.30 ರವರೆಗೆ ನಗರದ ಪುರಭವನದಲ್ಲಿ ಜರುಗಲಿದೆ ಎಂದು ರಾಜ್ಯಾಧ್ಯಕ್ಷ ದ್ಯಾವಪ್ಪ ನಾಯಕ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತ ನಾಡಿ, ಬೆಳಗ್ಗೆ 8.30ಕ್ಕೆ ಶಾಸಕ ತನ್ವೀರ್‌ಸೇಠ್ ಧ್ವಜಾರೋಹಣ ನೆರವೇರಿಸುವರು, 9ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ, ವಿವಿಧ ಸ್ಪರ್ಧೆ ಆರಂಭವಾಗಲಿವೆ. 11ಕ್ಕೆ ವೇದಿಕೆ ಕಾರ್ಯಕ್ರಮ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಉದ್ಘಾಟಿಸುವರು. ಶಾಸಕ ಕೆ. ಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು, ಶಾಸಕ ಜಿ.ಡಿ. ಹರೀಶ್‌ಗೌಡ ತಾಯಿ ಭುವನೇಶ್ವರಿ ಮೂರ್ತಿಗೆ ಪುಷ್ಪಾರ್ಚನೆ ಮಾಡುವರು, ಎಚ್.ವಿ.ರಾಜೀವ್ ಭುವನೇಶ್ವರಿ ವರ್ಣಚಿತ್ರ ಅನಾವರಣಗೊಳಿಸುವರು, ಡಾ.ಎ.ಪಿ. ನಾಗೇಶ್ ವಿವಿಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸುವರು. ಈ ವೇಳೆ 100 ಮಂದಿ ಮನೆಗೆಲಸದ ಮಹಿಳೆಯರಿಗೆ ಸೀರೆ, ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ ನಡೆಯಲಿದೆ ಎಂದು ಮಾಹಿತಿ ನೀಡಿದರು. ಎಸ್.ರಾಜೇಶ್, ಬಿ.ಜಿ. ಲೋಕೇಶ್, ನಾಗರಾಜು, ಡಾ.ಶಾಂತರಾಜೇ ಅರಸ್, ಆರ್. ಕೆ.ರವಿ, ಮಹೇಶ್, ಮೀನಾಕ್ಷಿ, ಲಕ್ಷ್ಮಿ, ಸರಸ್ವತಿ ಹಾಗೂ ಇನ್ನಿತರರು ಇದ್ದರು.

# ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ



ಕೆ.ಆರ್.ಪೇಟೆ ತಾಲ್ಲೂಕಿನ ಎಲ್ಲಾ ಜನರು 5 ವರ್ಷದೊಳಗಿನ ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಸಮಾಜಕ್ಕೆ ಆರೋಗ್ಯವಂತ ಪ್ರಜೆಗಳನ್ನು ನೀಡು ವಂತೆ ಶಾಸಕ ಎಚ್.ಟಿ.ಮಂಜು ಕರೆ ನೀಡಿದರು.

ಪಟ್ಟಣದ ಶ್ರೀಮತಿ ದುಂಡುಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಆರೋಗ್ಯ ಇಲಾಖೆಯಿಂದ ಆಯೋಜಿಸಿದ್ದ ಪಲ್ಸ್ ಪೋಲಿಯೋ ಲಸಿಕಾ ಆಂದೋಲನಕ್ಕೆ ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಮೂಲಕ ಚಾಲನೆ ನೀಡಿದರು. ಪೋಲಿಯೋ ಮಾರಕ ಕಾಯಿಲೆಯಿಂದ ನಮ್ಮ ಮಕ್ಕಳನ್ನು ರಕ್ಷಿಸಿಕೊಳ್ಳಲು ದೇಶಾದ್ಯಂತ ಲಸಿಕೆ ಕಾರ್ಯಕ್ರಮ ನಡೆಯುತ್ತಿದೆ. ಆರೋಗ್ಯವಂತ ಮಕ್ಕಳು ದೇಶದ ಸಂಪತ್ತು. ಹೀಗಾಗಿ ಪೋಷಕರು ಇಂದಿನಿಂದ ಗ್ರಾಮೀಣ ಪ್ರದೇಶದಲ್ಲಿ ಮೂರು ದಿನಗಳ ಕಾಲ ಮತ್ತು ಕೆ.ಆರ್.ಪೇಟೆ ಪಟ್ಟಣದಲ್ಲಿ ನಾಲ್ಕು ದಿನಗಳ ಕಾಲ ನಡೆಯಲಿರುವ ಪೋಲಿಯೋ ಹನಿ ಹಾಕುವ ಸ್ಥಳಕ್ಕೆ ತಮ್ಮ ಐದು ವರ್ಷದ ಮಕ್ಕಳನ್ನು ಕರೆತಂದು ಲಸಿಕೆ ಹಾಕಿಸಬೇಕು. ಈ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು ಎಂದು ಮನವಿ ಮಾಡಿದರು. ಈ ವೇಳೆ ತಾಲೂಕು ಆಡಳಿತ ವೈದ್ಯಾಧಿಕಾರಿ ಡಾ.ಅಜಿತ್, ತಾಲೂಕು ಆಸ್ಪತ್ರೆ ಆಡಳಿತ ವೈದ್ಯೆ ಡಾ.ಮಂಜುಳಾ, ಆರೋಗ್ಯಾಧಿಕಾರಿ ಶೀಳನೆರೆ ಸತೀಶ್, ಔಷಧ ವಿಭಾಗದ ಅಧಿಕಾರಿಗಳಾದ ಸತೀಶ್ ಬಾಬು, ಅಬ್ದುಲ್ ಗಫಾರ್‌ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ಮತ್ತು ವೈದ್ಯರು ಉಪಸ್ಥಿತರಿದ್ದರು.

# ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 14 ಲಕ್ಷ ರೂ ಕಳ್ಳತನ



ಗುಂಡ್ಲುಪೇಟೆ:ತಾಲ್ಲೂಕಿನ ತೆರಕಣಾಂಬಿ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡುಗೂರು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿಟ್ಟಿದ ಸುಮಾರು 14 ಲಕ್ಷದ 12,000 ರೂ.ಗಳು ಕಳ್ಳತನ ವಾಗಿರುತ್ತದೆ ಎಂದು ಸಂಘದ ಕಾರ್ಯದರ್ಶಿಯಾದ ಚಂದ್ರಶೇಖರಮೂರ್ತಿಯು ದಿನಾಂಕ 17.12.25 ರಂದು ತೆರಕಣಾಂಬಿ ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದರು.

ಈ ಮೇರೆಗೆ ಠಾಣಾ ಮೊ ನಂ 127/2025 ರಲ್ಲಿ ಪ್ರಕರಣವನ್ನು ದಾಖಲಾಸಿಕೊಂಡು, ನಂತರ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸ್ ವರಿಷ್ಠ ಅಧಿಕಾರಿ ಡಾ. ಕವಿತಾ ಮೇಡಂ ಮತ್ತು ಮಾನ್ಯ ಉಪ ಪೊಲೀಸ್ ವರಿಷ್ಠ ಅಧಿಕಾರಿ ಶಶಿಧರ್ ಹಾಗೂ ಚಾಮರಾಜನಗರ ಉಪ ವಿಭಾಗದ ಡಿವೈಎಸ್ಪಿ ಸ್ನೇಹ ರಾಜ್ ರವರ ಮಾರ್ಗದರ್ಶನದಲ್ಲಿ ಬೇಗೂರು ಪ್ರಭಾರ ವೃತ್ತಾ ನಿರೀಕ್ಷಕ ರಘು ನೇತೃತ್ವದಲ್ಲಿ ತೆರಕಣಾಂಬಿ ಪೊಲೀಸ್ ಠಾಣಾ ಉಪ ನಿರೀಕ್ಷಕ ಮಹೇಶ್ ತಂಡ ತನಿಖೆಯನ್ನು ಕೈಗೊಂಡು ಮೂಡುಗೂರು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಚಂದ್ರಶೇಖರ ಮೂರ್ತಿರವರು ನೀಡಿದ ದೂರಿನಲ್ಲಿ 14.12 ಲಕ್ಷ ಕಳ್ಳತನವಾಗಿದೆ ಎಂದಿದ್ದರೂ ಆದರೇ ನಿಜವಾಗಿ ಈತ ರೈತರಿಂದ ಕಟ್ಟಿಸಿಕೊಂಡಿರುವ ಹಣವೇ 8.92 ಲಕ್ಷ ರೂಪಾಯಿಗಳು ಮಾತ್ರ ಉಳಿದ 5.10 ಲಕ್ಷ ಹಣವನ್ನು ಈ ಚಂದ್ರಶೇಖರ ಮೂರ್ತಿಯು ಸಾಲ ಪಡೆದ ರೈತರೊಂದಿಗೆ ಹೊಂದಾಣಿಕೆ ಮಾಡಿಕೊಂಡು ಹಣವನ್ನು ಪಡೆಯದೆ ರಸೀದಿಗಳನ್ನು ನೀಡಿರುತ್ತಾರೆ, ನಂತರ ಸಂಘದ ನಿಯಮದ ಪ್ರಕಾರ ರೈತರಿಂದ ಪಡೆದ 14. 12 ಲಕ್ಷ ಹಣವನ್ನು ನಿಗದಿತ ಸಮಯಕ್ಕೆ ಬ್ಯಾಂಕಿಗೆ ಜಮೆ ಮಾಡಬೇಕಾಗಿತ್ತು ಆದರೇ ಈ ಚಂದ್ರಶೇಖರ ಮೂರ್ತಿ ರೈತರೊಂದಿಗೆ ಹೊಂದಾಣಿಕೆ ಮಾಡಿಕೊಂಡು ಸುಳ್ಳು ರಶೀದಿಯನ್ನು ನೀಡಿದ 5.10 ಲಕ್ಷ ಹಣವನ್ನು ಹೊಂದಿಸಲು ಸಾಧ್ಯವಾಗದ ಪರಿಸ್ಥಿತಿಯಲ್ಲಿ ತನ್ನ ಆರ್ಥಿಕ ಸಂಕಷ್ಟದಿಂದಾಗಿ ರೈತರಿಂದ ಪಡೆದು ಕಚೇರಿಯಲ್ಲಿಟ್ಟಿದ್ದ 8 ಲಕ್ಷದ 92,000 ಗಳನ್ನು ತಾನೇ ದಿನಾಂಕ 16.12.25 ರಂದು ಕಳ್ಳತನ ಮಾಡಿಕೊಂಡು ಹೋಗಿ ಈ ಹಣವನ್ನು ಮನೆಯಲ್ಲಿ ಇಟ್ಟಿರುತ್ತೇನೆ ಎಂದು ಒಪ್ಪಿಕೊಂಡ ಮೇಲೆ ತನಿಖೆ ತಂಡ ಮನೆಗೆ ಹೋಗಿ ನೋಡಲಾಗಿ ಈತ ಕದ್ದಿರುವ 8.92000 ಲಕ್ಷ ರೂ. ಮನೆಯಲ್ಲಿತ್ತು ಈ ಹಣವನ್ನು ಪೊಲೀಸರ ವಶಕ್ಕೆ ಪಡೆದುಕೊಳ್ಳಲಾಗಿದೆ. ನಂತರ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿಯಾದ ಚಂದ್ರಶೇಖರ್ ಮೂರ್ತಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು ನ್ಯಾಯಾಲಯದ ಆದೇಶದಂತೆ ಜಿಲ್ಲಾ ಕಾರಾಗೃಹಕ್ಕೆ ಕಳಿಸಲಾಗಿದೆ. ಈ ಪ್ರಕರಣದ ತನಿಖೆಯಲ್ಲಿ ಭಾಗವಹಿಸಿದ ಸಿಬ್ಬಂದಿಗಳು ರಾಜು, ಕಿಶೋರ್, ರಾಜೇಂದ್ರ, ರಾಜಶೇಖರ್, ಬಂಗಾರ ನಾಯಕ ಹಾಗೂ ತನಿಖಾ ಸಹಾಯಕರಾದ ಪುಟ್ಟರಾಜು, ಸಿದ್ದರಾಮು. ತನಿಖೆಯಲ್ಲಿ ಭಾಗಿಯಾಗಿದ್ದರು.

# ಭೂಮಿ ಮಾರಿ ಬೀದಿ ಪಾಲಾಗದಿರಿ

## ಡಾ.ನಿಶ್ಚಲಾನಂದನಾಥಸ್ವಾಮೀಜಿ ಕರೆ । ರೈತ ದಿನಾಚರಣೆ



ಕೆ.ಆರ್.ಪೇಟೆ, ರೈತರು ತಮ್ಮ ಭೂಮಿಯನ್ನು ಮಾರಾಟ ಮಾಡದೇ, ಉಳಿಸಿಕೊಂಡರೆ ಕೆಲವೇ ವರ್ಷಗಳಲ್ಲಿ ರೈತರ ಭೂಮಿಗೆ ಬಂಗಾರಕ್ಕಿಂತಲೂ ಹೆಚ್ಚು ಬೆಲೆ ಸಿಗಲಿದೆ. ಹಾಗಾಗಿ ಯಾವುದೇ ರೈತರು ಭೂಮಿಯನ್ನು ಮಾರಾಟ ಮಾಡಿ ಬೀದಿ ಪಾಲಾಗಬೇಡಿ. ಕೃಷಿ ನಷ್ಟದ ಕ್ಷೇತ್ರವಲ್ಲ. ಕಷ್ಟಪಟ್ಟು ಸಮಗ್ರ ಕೃಷಿ ಅಳವಡಿಸಿಕೊಂಡರೆ ಯಾವುದೇ ಕಾರಣಕ್ಕೂ ಭೂಮಿಯಲ್ಲಿ ನಷ್ಟ ಉಂಟಾಗುವುದಿಲ್ಲ ಎಂದು ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥಸ್ವಾಮೀಜಿ ಹೇಳಿದರು.

ಕೆ ಆರ್ ಪೇಟೆ ತಾಲ್ಲೂಕಿನ ಕಸಬಾ ಹೋಬಳಿ ಲಕ್ಷ್ಮೀಪುರ ಗ್ರಾಮದಲ್ಲಿ ಕೃಷಿಕ ಸಮಾಜ ಹಾಗೂ ಆಕಾಶವಾಣಿ ಮೈಸೂರು ಇದರ ಸಹಯೋಗದಲ್ಲಿ ಆಯೋಜಿಸಿದ್ದ ರೈತ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಸರ್ಕಾರಗಳ ರೈತ ವಿರೋಧಿ ನೀತಿಗಳಿಂದ ಮುಂದಿನ ತಲೆ ಮಾರಿಗೆ ರೈತವರ್ಗವನ್ನು ಹುಡುಕುವಂತಹ ಸ್ಥಿತಿ ನಿರ್ಮಾಣವಾಗುತ್ತಿದೆ. ಕೃಷಿಗೆ ಸಾಕಷ್ಟು ಅನುದಾನ ಕೊಡಲಾಗುತ್ತಿದೆ. ಆದರೆ ಆ ಅನುದಾನ ಎಲ್ಲಿ ಹೋಗುತ್ತಿದೆ ಎಂಬುದನ್ನು ಹುಡುಕಬೇಕಾಗಿದೆ. ಇಂದು ಬಂಡವಾಳಶಾಹಿಗಳು ರೈತನಾಗುವ ಯುವ ಪೀಳಿಗೆಯನ್ನು ಟೀಕಿಸುತ್ತಿದ್ದಾರೆ. ಇದರಿಂದ ಹೆಣ್ಣು ಕೊಡಲು ಯಾರು ಮುಂದೆ ಬರುತ್ತಿಲ್ಲ. ಇದನ್ನು ಅರ್ಥಮಾಡಿಕೊಂಡು ಮುಂದಿನ ದಿನಗಳಲ್ಲಿ ಜಾಗೃತಿಯನ್ನು ಮೂಡಿಸಲು ಸಂಕಲ್ಪ ಮಾಡಿದ್ದೇವೆ ಎಂದು ಹೇಳಿದರು.

ರಾಜ್ಯ ರೈತ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ನಂದಿನಿ ಜಯರಾಂ ಮಾತನಾಡಿ ಯಾವುದೆ ಒಂದು ಕೃಷಿ ಕುಟುಂಬ ರೈತ ಮಹಿಳೆಯಿಲ್ಲದೆ ತನ್ನ ಸಂಪೂರ್ಣ ಕೃಷಿ ಬದುಕನ್ನು ನಡೆಸಲು ಸಾಧ್ಯವಿಲ್ಲ. ಕೃಷಿಯ ಬೆನ್ನೆಲುಬೆ ಮಹಿಳೆ. ಇಂತಹ ಕುಟುಂಬದವರು ಕೂಡಾ ಒಬ್ಬ ವಿದ್ಯಾವಂತ ರೈತ ಮಗನಿಗೆ ತಮ್ಮ ಮಗಳನ್ನು ಮದುವೆ ಮಾಡಿಕೊಡುವುದಿಲ್ಲ ಎಂದರೆ ನಾವೆಲ್ಲಾ ಎಂತಹ ಸಂದಿಗ್ಧತೆಯಲ್ಲಿದ್ದೇವೆ ಎಂದು ಅರ್ಥಮಾಡಿಕೊಳ್ಳಬೇಕು. ಕೃಷಿಯ ಬದುಕನ್ನು ನಾಶಮಾಡಲು ಹೊರಟಿರುವ ಸರಕಾರಗಳು ಇಂತಹ ವಾತಾವರಣವನ್ನು ಸೃಷ್ಟಿಸಿವೆ. ನಾವೆಲ್ಲರೂ ಕೂಡಾ ಕೇವಲ ಆಚರಣೆಯಲ್ಲಿ ಕಾಲ ಕಳೆಯುತ್ತಿದ್ದೇವೆ. ರೈತನು ಇಂದಿನ ಪರಿಸ್ಥಿತಿಯಲ್ಲಿ ಇರುವ ಭೂಮಿಯನ್ನು ಕಳೆದುಕೊಂಡರೆ ಮತ್ತೆ ಭೂ ಮಾಲೀಕನಾಗಲು ಸಾಧ್ಯವಿಲ್ಲ. ಆದ್ದರಿಂದ ಯಾರೊಬ್ಬರು ಕೂಡಾ ಇರುವ ನಿಮ್ಮ ಪೂರ್ವಿಕರ ಜಮೀನನ್ನು ಮಾರಾಟ ಮಾಡದೆ ಉಳಿಸಿಕೊಂಡು ಕೃಷಿ ಬದುಕಿಗೆ ಅರ್ಥವನ್ನು ಕೊಡಿ ಎಂದು ನಂದಿನಿ ಜಯರಾಂ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಂಡ್ಯ ಜಿಲ್ಲಾ ಸಂಪೂರ್ಣ ಸಾವಯವ ಕೃಷಿ ಉತ್ಪಾದಕರ ಸಂಘದ ಅಧ್ಯಕ್ಷ ಮಳವಳ್ಳಿ ಮಹೇಶ್ ಮಾತನಾಡಿ ಈ ದೇಶದಲ್ಲಿ ಅತ್ಯಂತ ಹೆಚ್ಚು ಅಪಾಯಕಾರಿ ಜೀವನವನ್ನು ನಡೆಸುತ್ತಿರುವವರು ರೈತರು. ನಮ್ಮ ಪೂರ್ವಿಕರು ಯಾವುದೆ ರೀತಿಯ ಸವಾಲುಗಳನ್ನಾದರು ಕೂಡಾ ಎದುರಿಸುತ್ತಿದ್ದರು. ಇದಕ್ಕೆ ಕಾರಣ ವಿಷಮುಕ್ತ ಆಹಾರವನ್ನು ಬೆಳೆಯುತ್ತಿದ್ದರು. ನಮ್ಮ ನಡುವೆ ಸಾವಿರಾರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಆದರೆ ಇದರಲ್ಲಿ ಒಬ್ಬನೆ ಒಬ್ಬ ಸಾವಯವ ಕೃಷಿಕ ಆತ್ಮಹತ್ಯೆ ಮಾಡಿಕೊಂಡಿಲ್ಲ. ಇದನ್ನು ನಾವೆಲ್ಲರೂ ಅರ್ಥಮಾಡಿಕೊಳ್ಳಬೇಕು. ಪ್ರತಿ ನಿಮಿಷಕ್ಕೊಬ್ಬ ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದರೂ ಪಂಚೇಂದ್ರೀಯಗಳೇ ಇಲ್ಲದ ದಪ್ಪ ಚರ್ಮದ ಈ ಸರಕಾರಗಳಿಗೆ ರೈತರ ಕಷ್ಟ ಅರ್ಥವಾಗುತ್ತಿಲ್ಲ. ವಿಶ್ವಕ್ಕೆ ಅನ್ನ ಕೊಡುವ ರೈತನ ದಿನಾಚರಣೆಯನ್ನು ಸರಕಾರಗಳು ರಾಷ್ಟ್ರೀಯ ಹಬ್ಬವನ್ನಾಗಿ ಆಚರಣೆ ಮಾಡಬೇಕು ಎಂದು ಅಭಿಪ್ರಾಯಪಟ್ಟರು.

> **ಕೃಷಿ ಪಂಪಸೆಟ್ ಖಾಸಗೀಕರಣ ಕೈ ಬಿಡಬೇಕು. ಅಕ್ರಮ ಸಕ್ರಮ ಯೋಜನೆಯನ್ನು ಮತ್ತೆ ಜಾರಿಗೆ ತರಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವರ್ಷಪೂರ್ತಿ ಭತ್ತ, ರಾಗಿ, ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಬೇಕು. ಎಂಎಸ್ಪಿ ಅಡಿಯಲ್ಲಿ ಬೆಂಬಲ ಬೆಲೆ ಘೋಷಿಸಬೇಕು. ಸ್ಮಾರ್ಟ್ ಮೀಟರ್ ಯೋಜನೆ ಕೈ ಬಿಡಬೇಕು. ಎಪಿಎಂಸಿ ಕಾಯಿದೆ ತಿದ್ದುಪಡಿ ರದ್ದಾಗಬೇಕು**
> ▸▸ **ಮರುವನಹಳ್ಳಿ ಶಂಕರ್**

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನುರಾರು ರೈತರು, ರೈತ ಮಹಿಳೆಯರು ಮೆರವಣಿಗೆ ಮೂಲಕ ಆಗಮಿಸಿದರು. ಕೋಲಾಟ ಸೇರಿದಂತೆ ವಿವಿಧ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು.

ಮೈಸೂರು ಆಕಾಶವಾಣಿಯ ಕಾರ್ಯಕ್ರಮ ನಿರ್ವಾಹಕ ಕೇಶವಮೂರ್ತಿ ತಮ್ಮ ಅಭಿಪ್ರಾಯಗಳನ್ನು ನೆರೆದಿದ್ದ ರೈತರೊಂದಿಗೆ ಸಂವಾದ ನಡೆಸಿ ಹಲವು ಪರಿಹಾರಗಳನ್ನು ತಿಳಿಸಿಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿಕ ಸಮಾಜದ ಅಧ್ಯಕ್ಷ ನಾಟನಹಳ್ಳಿ ಗಂಗಾಧರ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ಆರ್.ಟಿ.ಓ ಮಲ್ಲಿಕಾರ್ಜುನ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಜಾನಕೀರಾಂ, ಪಿ.ಎಲ್.ಡಿ. ಬ್ಯಾಂಕ್ ಮಾಜಿ ಅಧ್ಯಕ್ಷ ಎ.ಎಸ್.ರಮೇಶ್, ಎ.ಆರ್.ರಘು, ಹೆತ್ತಗೋನಹಳ್ಳಿ ನಾರಾಯಣಗೌಡ, ಟಿಎಪಿಸಿಎಂಎಸ್ ಮೋಹನ್, ಕರವೇ ಮಂಡ್ಯ ಜಿಲ್ಲಾಧ್ಯಕ್ಷ ಹೊನ್ನೇನಹಳ್ಳಿ ವೇಣು, ಚಿಕ್ಕೋನಹಳ್ಳಿ ಸಿ.ಬಿ.ಚೇತನ್‌ಕುಮಾರ್, ರೈತ ಮುಖಂಡರಾದ ಮರುವನಹಳ್ಳಿ ಶಂಕರ್, ಸುಬ್ಬೇಗೌಡ, ಪ್ರಮೀಳಾ ವರದರಾಜೇಗೌಡ, ಬಿ.ಸಿ.ಪ್ರೇಮಾನಾಗರಾಜು, ಗ್ಯಾರಂಟಿ ಸಮಿತಿ ಸದಸ್ಯೆ ಶಿವಮ್ಮ, ತಾಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ . ಮಧು



# ಕೆ.ಆರ್.ಆಸ್ಪತ್ರೆಆವರಣದಲ್ಲಿನಾಲ್ವಡಿ ಪ್ರತಿ ವರ್ಣಚಿತ್ರ ಅನಾವರಣ

ಮೈಸೂರು: ಮೈಸೂರಿನ ಕೆ.ಆರ್ ಆಸ್ಪತ್ರೆಯ ಸಂಸ್ಥಾಪಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ವರ್ಣ ಚಿತ್ರ ಅನಾವರಣಗೊಂಡಿದೆ. ಆಸ್ಪತ್ರೆ ಆವರಣದಲ್ಲಿ ವರ್ಣ ಚಿತ್ರವು 8 ಅಡಿ ಉದ್ದ ಹಾಗೂ 6 ಅಡಿ ಅಗಲದಿಂದ ಕೂಡಿದ್ದು, ಸುತ್ತಲೂ ಎಲ್‌ಇಡಿ ಲೈಟ್ ಅಳವಿಡಿಸಿರುವ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ವರ್ಣ ಚಿತ್ರವನ್ನು ರಾಜವಂಶಸ್ಥೆ ಪ್ರಮೋದ ದೇವಿ ಒಡೆಯರ್ ಮಂಗಳವಾರ ಅನಾವರಣಗೊಳಿಸಿದರು.


ನಂತರ ಮಾತನಾಡಿದ ಅವರು, ಇತ್ತೀಚೆಗೆ ಮೈಸೂರು ಮೆಡಿಕಲ್ ಕಾಲೇಜಿನ ಡೀನ್ ಡಾ.ಕೆ.ಆರ್.ದಾಕ್ಷಾಯಣಿ ಮತ್ತು ವೈದ್ಯಕೀಯ ಅಧೀಕ್ಷಕಿ ಡಾ.ಹೆಚ್.ಪಿ.ಶೋಭ ಅವರು ಆಸ್ಪತ್ರೆ ಆವರಣದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ವರ್ಣ ಚಿತ್ರವನ್ನು ಅನಾವರಣಗೊಳಿಸುವಂತೆ ಆಹ್ವಾನಿಸಿದರು. ಆಸ್ಪತ್ರೆಯೊಂದಿಗೆ ಕುಟುಂಬಕ್ಕೆ ಭಾವನಾತ್ಮ ಬಾಂದವ್ಯ ಇರುವುದರಿಂದ ಹಾಗೂ ಪೂರ್ವಜರ ಕೆಲಸಗಳನ್ನು ಮುಂದುವರೆಸುವ ಉದ್ದೇಶದಿಂದ ಸಂತೋಷದಿಂದ ಇಂದು ಅನಾವರಣಗೊಳಿಸಿದ್ದೇನೆ ಎಂದರು.

ಮೈಸೂರು ಸೇರಿದಂತೆ ಅಕ್ಕಪಕ್ಕದ ಜಿಲ್ಲೆಗಳ ಬಡ ರೋಗಿಗಳಿಗೆ ಕೆ.ಆರ್.ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆ ನೀಡುತ್ತಿದ್ದಾರೆ. ಕೆಲವು ಬಾರಿ ದೂರುಗಳು ಕೇಳಿ ಬರುತ್ತಿವೆ. ಅದನ್ನು ನಿವಾರಿಸಿ, ಮತ್ತಷ್ಟು ಉತ್ತಮ ಸೇವೆ ನೀಡಿ ಎಂದ ಅವರು, ಜನ ಪ್ರತಿನಿಧಿಗಳು ಈ ಬಗ್ಗೆ ಗಮಹರಿಸಿ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಮತ್ತು ಶಾಸಕ ಕೆ.ಹರೀಶ್‌ಗೌಡರಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಸಕ ಕೆ.ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಆಸ್ಪತ್ರೆ ಡೀನ್ ಡಾ.ಕೆ.ಆರ್.ದಾಕ್ಷಾಯಣಿ ಮತ್ತು ವೈದ್ಯಕೀಯ ಅಧೀಕ್ಷಕಿ ಡಾ. ಹೆಚ್.ಪಿ.ಶೋಭ, ಆಡಳಿತ ಮಂಡಳಿ ಸದಸ್ಯರಾದ ಡಾ.ಕೆ.ಮಹದೇವ್, ತನುಜಾ ಮಹೇಶ್, ಡಾ.ಸುನೀಲ್, ಆಡಳಿತಾಧಿಕಾರಿ ವಿ.ಆರ್. ಮಹೇಶ್, ಪ್ರಾಂಶುಪಾಲ ಡಾ.ಕೆ.ಸತೀಶ್, ಆರ್ಥಿಕ ಸಲಹೆಗಾರರಾದ ಎನ್.ನೂತನಶ್ರೀ, ಚೆಲುವಾಂಬ ಆಸ್ಪತೆ ಅಧೀಕ್ಷಕಿ ಆರ್.ಸುಧಾ, ಆರ್‌ಎಂಓ ಡಾ.ನಯಾಜ್ ಪಾಷ ಮತ್ತಿತರರು ಉಪಸ್ಥಿತರಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ಹಿಯರಿಂಗ್ ಹಾರಿಜಾನ್ಸ್ 2025 ಎರಡು ದಿನಗಳ ಸಮ್ಮೇಳನ

# ಶ್ರವಣ ಆರೋಗ್ಯ ಕ್ಷೇತ್ರದಲ್ಲಿ ಪ್ರಗತಿ, ಸವಾಲುಗಳ ಚರ್ಚೆ




ಮೈಸೂರು: ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ, ಇಂಡಿಯನ್ ಸ್ಪೀಚ್?ಲ್ಯಾಂಗ್ವೇಜ್ ಅಂಡ್ ಹಿಯರಿಂಗ್ ಅಸೋಸಿಯೇಷನ್‌ನ ಮೈಸೂರು ಶಾಖೆ ಸಹಯೋಗದಲ್ಲಿ ಆಯಿಷ್ ಆವರಣದಲ್ಲಿ "ಹಿಯರಿಂಗ್ ಹಾರಿಜಾನ್ಸ್ 2025" ಎಂಬ ಎರಡು ದಿನಗಳ ಆರ್‌ಸಿಐ?ಅನುಮೋದಿತ ರಾಷ್ಟ್ರೀಯ ಸಮ್ಮೇಳನವನ್ನು ನಡೆಸಿತು.

ದೇಶದ ವಿವಿಧ ಭಾಗಗಳಿಂದ ಆಗಮಿಸಿದ 200ಕ್ಕೂ ಹೆಚ್ಚು ವೃತ್ತಿಪರರು ಮತ್ತು ವಿದ್ಯಾರ್ಥಿಗಳು ಶ್ರವಣ ಆರೋಗ್ಯ ರಕ್ಷಣೆಯಲ್ಲಿನ ಇತ್ತೀಚಿನ ಬೆಳವಣಿಗೆಗಳು, ಸವಾಲುಗಳು ಮತ್ತು ಭವಿಷ್ಯದ ದಿಕ್ಕುಗಳ ಕುರಿತು ಗಂಭೀರ ಚರ್ಚೆ ನಡೆಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಆಡಿಯಾಲಜಿ ತಜ್ಞ ಡಾ.ಕಲ್ಯಾಣಿ ಮಾಂಡ್ಕೆ ಮಾತನಾಡಿ, ದೇಶದಲ್ಲಿ ಶ್ರವಣ ಆರೈಕೆ ಕ್ಷೇತ್ರವು ಕಳೆದ ದಶಕಗಳಲ್ಲಿ ಕಂಡಿರುವ ವಿಕಸನವನ್ನು ವಿವರಿಸಿ, ನೈತಿಕತೆ ಹಾಗೂ ಸಾಕ್ಷ್ಯಾಧಾರಿತ ಚಿಕಿತ್ಸಾ ಪದ್ಧತಿಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವ ಅಗತ್ಯವಿದೆ ಎಂದು ತಿಳಿಸಿದರು. ಅತಿಥಿಯಾದ ವಿಶ್ವ ಆರೋಗ್ಯ ಸಂಸ್ಥೆಯ ಡಾ.ಬಿ.ಮೊಹಮ್ಮದ್ ಅಶೀಲ್ ಶ್ರವಣವು ಪರಿಣಾಮಕಾರಿ ಸಂವಹನದ ಮೂಲಾಧಾರವಾಗಿದ್ದು, ಮಕ್ಕಳ ಭಾಷಾ ಮತ್ತು ಮಾತು ಬೆಳವಣಿಗೆಯಿಂದ ಹಿಡಿದು ವಯಸ್ಕರು ಹಾಗೂ ಹಿರಿಯ ನಾಗರಿಕರ ಸಾಮಾಜಿಕ ಭಾಗವಹಿಸು ವಿಕೆವರೆಗೆ ಶ್ರವಣ ಸಾಧನಗಳು ಜೀವನಪೂರ್ತಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು. ಆಯಿಷ್ ನಿರ್ದೇಶಕಿ ಡಾ. ಎಂ.ಪುಷ್ಪಾವತಿ ಮಾತನಾಡಿ, ಶ್ರವಣ ಸಾಧನ ಅಳವಡಿಕೆಯೊಂದಿಗೆ ಚಿಕಿತ್ಸೆ ಪೂರ್ಣಗೊಳ್ಳುವುದಿಲ್ಲ, ವಿಶೇಷವಾಗಿ ಮಕ್ಕಳಲ್ಲಿ ಸಾಧನ ಅಳವಡಿಕೆಯ ನಂತರದ ವಾಕ್?ಭಾಷಾ ಚಿಕಿತ್ಸೆ ಮತ್ತು ವ್ಯವಸ್ಥಿತ ಶ್ರವಣ ಪುನರ್ವಸತಿ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು. ಇದರಿಂದಲೇ ಮಕ್ಕಳಲ್ಲಿ ಪರಿಣಾಮಕಾರಿ ಭಾಷಾ, ಸಂವಹನ ಮತ್ತು ಶೈಕ್ಷಣಿಕ ಕೌಶಲಗಳ ಬೆಳವಣಿಗೆ ಸಾಧ್ಯವಾಗುತ್ತದೆ ಎಂದು ಹೇಳಿದರು. ಸಮ್ಮೇಳನದ ಸಂಯೋಜಕ ಡಾ.ಎಂ.ಎಂ.ಸಂದೀಪ್ ಮತ್ತು ಡಾ.ಎನ್.ಎನ್.ದೇವಿ ಮಾತನಾಡಿದರು.

# ಜ.9ಕ್ಕೆ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ

ಮೈಸೂರು: ರೋಟರಿ ಮೈಸೂರು ಉತ್ತರ ಹಾಗೂ ಕದಂಬ ರಂಗ ವೇದಿಕೆವತಿಯಿಂದ ಜ.9ರಂದು ಸಂಜೆ 6ಕ್ಕೆ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿರ?ಸ್ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ ಮಾಡಲಿರುವುದಾಗಿ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ಬಾರಿ ಶ್ರೀಮತಿ ಹರಿಪ್ರಸಾದ್, ಸುಬ್ಬನರಸಿಂಹ, ಕೃಷ್ಣ ಜನಮನ ಹಾಗೂ ದಿನೇಶ್ ಚಮ್ಮಾಳಿಗೆ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಈ ಎಲ್ಲರೂ ಸಹಾ ರಂಗಭೂಮಿಗೆ ಸಾಕಷ್ಟು ಕೊಡುಗೆ ನೀಡಿ ಸಕ್ರಿಯರಾಗಿದ್ದಾರೆ. ಪ್ರಗತಿಪರ ಚಿಂತಕ ಪ್ರೊ.ಕಾಳೇಗೌಡ ನಾಗವಾರ ಪ್ರಶಸ್ತಿ ಪ್ರದಾನ ಮಾಡುವರು. ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ಅತಿಥಿಗಳಾಗಿರುವರೆಂದರು. ಎಂ.ಚಂದ್ರಶೇಖರ್, ಎ.ಪಿ.ವಿರೂಪಾಕ್ಷ, ಅಶ್ವಥ್ ಕದಂಬ, ಡಿ.ತಿಪ್ಪಣ್ಣ ಹಾಗೂ ಯು.ಎಸ್.ರಾಮಣ್ಣ ಹಾಜರಿದ್ದರು.



## ಮಡವಿನಕೋಡಿ ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆಚುನಾವಣೆ

# ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಜಯಭೇರಿ



ಕೆ ಆರ್ ಪೇಟೆ ತಾಲ್ಲೂಕಿನ ಬೂಕನಕೆರೆ ಹೋಬಳಿ ಮಡವಿನಕೋಡಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಆಡಳಿತ ಮಂಡಳಿಯ ನೂತನ ನಿರ್ದೇಶಕ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮನ್ಮುಲ್ ನಿರ್ದೇಶಕ ಎಂ ಬಿ ಹರೀಶ್ ಹಾಗೂ ಡಾಲು ರವಿ ಬಣವು ಭರ್ಜರಿ ಗೆಲುವು ಸಾಧಿಸಿದೆ.

ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು 9 ಸ್ಥಾನಗಳಲ್ಲಿ ಜಯಭೇರಿ ಬಾರಿಸಿ ಸಂಘದ ಆಡಳಿತ ಮಂಡಳಿಯ ಚುಕ್ಕಾಣಿ ಹಿಡಿದಿದೆ.ಬಿಜೆಪಿ ಜೆಡಿಎಸ್ ಮೈತ್ರಿ ಕೂಟ 2 ಸ್ಥಾನವನ್ನು ಗಳಿಸಿ ತೃಪ್ತಿ ಪಡಬೇಕಾಯಿತು. ಮನ್ಮುಲ್ ನಿರ್ದೇಶಕ ಎಂ ಬಿ ಹರೀಶ್ ಟಿಎಪಿಸಿಎಂಎಸ್ ನಿರ್ದೇಶಕ ಎಂ ಪಿ ಲೋಕೇಶ್, ಕಾಂಗ್ರೆಸ್ ಮುಖಂಡ ಕಾಂತರಾಜು ಹಾಗೂ ತಾ.ಪಂ.ಮಾಜಿ ಸದಸ್ಯ ಮಾಧವಪ್ರಸಾದ್ (ಸುದಣ್ಣ) ಅವರು ಸಂಘದ ಆಡಳಿತ ಮಂಡಳಿಯ ನೂತನ ನಿರ್ದೇಶಕರಾಗಿ ಆಯ್ಕೆಯಾದ ಸಾಮಾನ್ಯ ಕ್ಷೇತ್ರದಿಂದ ಅರವಿಂದ ಜಗದೀಶ್, ಮಂಜುನಾಥ್, ಮಹಿಳಾ ಮೀಸಲು ಕ್ಷೇತ್ರದಿಂದ ವಿನೋದ, ಶಿಲ್ಪ, ಹಿಂದುಳಿದ ವರ್ಗ ಎ ಗಣೇಶ್, ಮನೋಹರ್, ಪರಿ ಶಿಷ್ಟ ಜಾತಿ ಚಂದ್ರಶೇಖರ, ಪರಿಶಿಷ್ಟ ಪಂಗಡ ಮಹಾಲಿಂಗ ನಾಯ್ಕ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಬಳಿಕ ಮಾತನಾಡಿದ ಮನ್ಮುಲ್ ನಿರ್ದೇಶಕ ಎಂ ಬಿ ಹರೀಶ್ ನನ್ನ ಹುಟ್ಟೂರು ಮಡವಿನಕೋಡಿ ಗ್ರಾಮದಲ್ಲಿ ಯಾವುದೇ ಕಾರಣಕ್ಕೂ ಡೈರಿ ಚುನಾವಣೆ ನಡೆಯಬಾರದು ಅಂತ ಅಂದುಕೊಂಡಿದ್ದೆವು. ಯಾಕೆಂದರೆ ಒಂದೇ ಊರಿನಲ್ಲಿ ಚುನಾವಣೆ ಘರ್ಷಣೆಗೆ ಅವಕಾಶ ನೀಡಬಾರದು. ಆದರೆ ಅನಿವಾರ್ಯ ಚುನಾವಣೆ ಎದುರಾಗಿ ಫಲಿತಾಂಶ ಪ್ರಕಟಗೊಂಡಿದೆ.ಸೋತವರೂ ನಮ್ಮವರೇ ಗೆದ್ದವರೂ ಸಹ ನಮ್ಮವರೇ ಆದ್ದರಿಂದ ಚುನಾವಣೆ ಮುಗಿದಿದೆ.ಇನ್ನೂ ಮುಂದೆ ಸಂಘವನ್ನು ಅಭಿವೃದ್ಧಿ ಪಡಿಸುವ ಕಡೆ ಹೆಜ್ಜೆ ಹಾಕೋಣ.ಸಂಘವು ಮಡವಿನಕೋಡಿ ಗ್ರಾಮದ ಸರ್ವಜನಾಂಗದ ಆಸ್ತಿ.ನಾವೆಲ್ಲರೂ ಸೇರಿ ಸಂಘದ ಸರ್ವಾಂಗೀಣ ಅಭಿವೃದ್ಧಿಗೆ ಕೈಜೋಡಿಸಬೇಕು.ಸಂಘಕ್ಕೆ ಉತ್ತಮ ಗುಣಮಟ್ಟದ ಹಾಲನ್ನು ಸರಬರಾಜು ಮಾಡುವ ಮೂಲಕ ಸಂಘವನ್ನು ತಾಲ್ಲೂಕಿನಲ್ಲಿಯೇ ಮಾದರಿ ಡೈರಿ ಎಂಬ ಕೀರ್ತಿಗೆ ಭಾಜನರಾಗಬೇಕೆಂಬುದು ನನ್ನ ಅಭಿಲಾಷೆಯಾಗಿದೆ.ಇಂದು ನಡೆದ ಚುನಾವಣೆಯಲ್ಲಿ ನಮ್ಮ ತಂಡ ಗೆಲ್ಲಲು ಶ್ರಮಿಸಿದ ಎಲ್ಲರಿಗೂ ಅನಂತ ಅನಂತ ಧನ್ಯವಾದಗಳನ್ನು ಅರ್ಪಿಸುತ್ತೇನೆ. ನನ್ನ ಉಸಿರು ಇರುವತನಕ ನನ್ನ ಗ್ರಾಮಕ್ಕೆ ಯಾವುದೇ ರೀತಿಯ ಚ್ಯುತಿ ಬಾರದಂತೆ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಸದಸ್ಯ ಹರೀಶ್, ಜಯರಾಂ,ವಿ ಎಸ್ ಎಸ ಎನ್ ಮಾಜಿ ಅಧ್ಯಕ್ಷ ದೀಪು,ಮಹೇಶ್, ನಾಗೇಶ್, ಮದನ್, ಮಾಸ್ಟರ್ ದೀಪು, ದಿನೇಶ್, ರವಿಕುಮಾರ್,ಮರಿಯಪ್ಪ,ಡಿಶ್ ಮಹೇಶ್, ಪ್ರವೀಣ್ ಕುಮಾರ್,ಮಾರಿಗುಡಿ ಚಂದ್ರೇಗೌಡ,ಭೈರ ನಾಯ್ಕ,ಗೌಸ್ ಖಾನ್,ಉಮರ್,ರಾಜೇಂದ್ರ ಸೇರಿದಂತೆ ಇತರರು ಹಾಜರಿದ್ದರು.

## ಡಿ.26ರಿಂದ ಅಂತಾರಾಷ್ಟ್ರೀಯ ಸಮ್ಮೇಳನ

ಮೈಸೂರು: ಕಾವೇರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಡಾ. ಚಂದ್ರಶೇಖರ್ ಕಾವೇರಿ ಆಯುರ್ವೇದ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದ ವತಿಯಿಂದ ಡಿ. 26 ಮತ್ತು 27 ರಂದು ಚಾಮುಂಡಿಬೆಟ್ಟದ ತಪ್ಪಲಿನ ಎಸ್‌ಡಿಎಂಐಎಂಡಿ ಕ್ಯಾಂಪಸ್‌ನಲ್ಲಿ ಪೌಷ್ಠಿಕ ಆಹಾರ ಜೀವನ ಶೈಲಿಯ ಅಭ್ಯಾಸ ಮತ್ತು ಸುಸ್ಥಿರ ಆರೋಗ್ಯ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಆಯೋಜಿಸಲಾಗಿದೆ ಎಂದು ಕಾವೇರಿ ಸಮೂಹ ಸಂಸ್ಥೆಯ ಅಧ್ಯಕ್ಷ ಡಾ.ಜಿ.ಆರ್.ಚಂದ್ರಶೇಖರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಡಿ. 26 ರ ಸಂಜೆ 5ಕ್ಕೆ ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರ ಸಾನಿಧ್ಯದಲ್ಲಿ ಉದ್ಘಾಟನೆಗೊಳ್ಳಲಿದೆ. ಮಾಜಿ ಸಚಿವ ಡಾ.ಸಿ.ಎನ್. ಅಶ್ವಥ್ ನಾರಾಯಣ, ಪ್ರೊ. ನಾರಾಯಣ ಎಸ್. ಜಾಧವ್, ಶಾಸಕ ಜಿ.ಟಿ. ದೇವೇಗೌಡ, ವಿಪಿನ್ ಸಿಂಗ್ ಅತಿಥಿಗಳಾಗಿರುವರು. ಡಾ.ಬಿ.ಸಿ. ಭಗವಾನ್ ಅಧ್ಯಕ್ಷತೆ ವಹಿಸುವರು, ಡಾ.ವಿ. ಪ್ರಕಾಶ್ ಪ್ರಾಸ್ತಾವಿಕ ಭಾಷಣ ಮಾಡುವರೆಂದರು.

ಡಿ. 27 ರ ಮಧ್ಯಾಹ್ನ 3ಕ್ಕೆ ಶಿವರಾತ್ರಿ ದೇಶಿಕೇಂದ್ರ ಶ್ರೀಗಳ ಸಾನ್ನಿಧ್ಯದಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು, ಡಾ.ಡಿ. ವೀರೇಂದ್ರ ಹೆಗ್ಗಡೆ, ಸಚಿವ ಡಾ.ಎಚ್.ಸಿ. ಮಹದೇವಪ್ಪ, ಶಾಸಕ ಟಿ.ಎಸ್. ಶ್ರೀವತ್ಸ, ಡಾ. ವಿಜಯೇಂದ್ರ ಎಸ್. ಮೂರ್ತಿ ಅತಿಥಿಗಳಾಗಿರುವರು. ತಾವು ಅಧ್ಯಕ್ಷತೆ ವಹಿಸಲಿದ್ದು, ಡಾ.ಎನ್.ಆಂಜನೇಯ ಮೂರ್ತಿ ಅವರಿಗೆ ಕಾವೇರಿ ಆಯುರ್ವೇದ ಗುರು ತಿಲಕ, ಡಾ. ಜಗದೀಶ್ ವಿಷ್ಣುಯಾಜಿರಿಗೆ ಕಾವೇರಿ ಆಯುರ್ವೇದ ವೈದ್ಯಶ್ರೇಷ್ಠ ಜೀವಮಾನ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ವಿವರಿಸಿದರು. ಅಮೆರಿಕಾ, ಬ್ರಿಟನ್, ಆಸ್ಟ್ರೇಲಿಯಾ ಹಾಗೂ ದೇಶದ ವಿವಿಧ ಭಾಗಗಳಿಂದ ತಜ್ಞರು ಆಗಮಿಸಿ ಜೀವನ ಶೈಲಿ ಹಾಗೂ ಆರೋಪ ಪರಿಸ್ಥಿತಿ, ಆಹಾರ ಪದ್ಧತಿ, ಸುಸ್ಥಿರ ಆರೋಗ್ಯ ಮೊದಲಾದ ವಿಷಯ ಕುರಿತು ಬೆಳಕು ಚೆಲ್ಲಲಿದ್ದಾರೆಂದರು. ಡಾ.ಎನ್.ಕೃಷ್ಣಪ್ರಸಾದ್, ಡಾ.ಎನ್.ವಿ.ಕೃಷ್ಣ ಮೂರ್ತಿ, ಡಾ. ರಾಮಚಂದ್ರ, ಡಾ.ವಿ. ಪೂರ್ಣಿಮಾ ಇದ್ದರು.

## ಕೇಂದ್ರೀಯ ವಿವಿ ಸ್ನಾತಕೋತ್ತರ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು: ಕಲ್ಬುರ್ಗಿಯಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ 2026–27 ನೇ ಸಾಲಿಗಾಗಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆ ಬರೆಯುವುದಕ್ಕೆ ನೋಂದಣಿ ಆರಂಭವಾಗಿದೆ ಎಂದು ಡೀನ್ ಎನ್.ಸತ್ಯನಾರಾಯಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಯಾವುದೇ ಸಂಬಂಧಪಟ್ಟ ಪದವಿ ಪಡೆದಿರುವವರು ತಮ್ಮ ಇಚ್ಛೆಯ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಇದು ಆನ್‌ಲೈನ್ ಮಾದರಿಯದ್ದಾಗಿದ್ದು, ಜ. 15 ರ ರಾತ್ರಿ 11.50 ರವರೆಗೆ ಅವಕಾಶವಿದೆ. ತಮ್ಮದು ರಾಜ್ಯದ ಏಕೈಕ ಕೇಂದ್ರೀಯ ವಿವಿ ಆಗಿದೆ. ಆದರೂ ರಾಜ್ಯದ ವಿದ್ಯಾರ್ಥಿಗಳು ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನ ಪಡೆಯುತ್ತಿಲ್ಲ. ಪ್ರವೇಶಾಗಿ ಹೇಗೆ ಇರುತ್ತದೆ ಎಂಬ ಮಾಹಿತಿ ಕೊರತೆ ಇದಕ್ಕೆ ಕಾರಣವಾಗಿರಲೂ ಬಹುದಾಗಿದೆ. ಈ ನಡುವೆ ನೆರೆ ರಾಜ್ಯದ ವಿದ್ಯಾರ್ಥಿಗಳಷ್ಟೇ ಅಲ್ಲ, ದೂರದ ಕಾಶ್ಮೀರದಿಂದಲೂ ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕಾಗಿ ಇಲ್ಲಿಗೆ ಬರುತ್ತಿದ್ದಾರೆ. ಹೀಗಾಗಿ ಇಲ್ಲಿನವರು ಸಹಾ ಅನುಕೂಲ ಪಡೆಯಬೇಕೆಂದು ಕೋರಿದರು.

ವಿವಿಧ ವಿಷಯಗಳ ಎಂಎ, ಎಂಎಸ್ಸಿ, ಎಂಕಾಂ, ಎಂಬಿಎ, ಸಮಾಜ ಕಾರ್ಯ, ಎಂಸಿಎ, ಎಲ್‌ಎಲ್‌ಎಂ ಮೊದಲಾದ ಸುಮಾರು 35 ವಿವಿಧ ಕೋರ್ಸ್‌ಗಳಿದ್ದು, ಇದು ಕೇಂದ್ರೀಯ ವಿವಿ ಆಗಿರುವ ಕಾರಣ ಎಲ್ಲೆಡೆ ಹೆಚ್ಚಿನ ಮಾನ್ಯತೆ ಇದೆ ಎಂದು ವಿವರಿಸಿದರು. ಅಲ್ಲದೆ, ಹೆಚ್ಚಿನ ಮಾಹಿತಿಗೆ ಹೆಲ್ಪ್‌ಲೈನ್ ದೂ.ಸಂ.011 40759000 ಅಥವಾ 011 69227700ನ್ನು ಸಂಪರ್ಕಿಸಬಹುದಾಗಿದೆ ಎಂದು ಸಲಹೆ ನೀಡಿದರು.

## ಸರ್ಕಾರಿ, ಅನುದಾನಿತ ನೌಕರರಿಗೆ ಹಳೆಯ ನಿಶ್ಚಿತ ಪಿಂಚಣಿ ಜಾರಿಗೊಳಿಸಿ

**ಕೆ.ವಿ.ಮಲ್ಲೇಶ್ ಹೇಳಿಕೆ**

ಮೈಸೂರು: ಸರ್ಕಾರಿ ಹಾಗೂ ಅನುದಾನಿತ ನೌಕರರಿಗೆ ಹಳೆಯ ನಿಶ್ಚಿತ ಪಿಂಚಣಿಯನ್ನು ಜಾರಿಗೊಳಿಸುವಂತೆ ಅನಿಕೇತನ ಸೇವಾ ಟ್ರಸ್ಟ್ ಅಧ್ಯಕ್ಷ ಹಾಗೂ ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಮನವಿ ಮಾಡಿದರು.



ಈ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರಿ ನೌಕರರ ಪೈಕಿ 2006ರಿಂದೀಚೆಗೆ ನೇಮಕಗೊಂಡ ನೌಕರರಿಗೂ ಸರ್ಕಾರದ ಸವಲತ್ತು ಸಮಾನವಾಗಿ ನೀಡುವ ಮೂಲಕ ಸಮಸಮಾಜದ ಪರಿಕಲ್ಪನೆಯನ್ನು ಸಾಕಾರಗೊಳಿಸಬೇಕಿದೆ. ಬಡ ಹಾಗೂ ಮಧ್ಯಮ ವರ್ಗದ ಪರ ದನಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಈ ನಿಟ್ಟಿನಲ್ಲಿ ಗಮನ ಹರಿಸುವ ಮುಖೇನನೊಂದ ನೌಕರರ ಬಾಳಿಗೆ ನೆಮ್ಮದಿ ಹರಿಸಬೇಕಿದೆ. ಸರ್ಕಾರಿ ಹಾಗೂ ಅನುದಾನಿತ ನೌಕರರಿಗೆ ಹಳೆಯ ನಿಶ್ಚಿತ ಪಿಂಚಣಿಯನ್ನು ಜಾರಿಗೊಳಿಸುವ ಮೂಲಕ ನೌಕರರ ಅಂತ್ಯ ಕಾಲದ ಬದುಕಿಗೆ ಭದ್ರತೆ ಒದಗಿಸಬೇಕಿದೆ.

ಛತ್ತೀಸಗಡ, ಹಿಮಾಚಲ ಪ್ರದೇಶ, ತೆಲಂಗಾಣ ಮತ್ತು ಪಂಜಾಬ್, ಆಂಧ್ರಪ್ರದೇಶ ರಾಜ್ಯಗಳು ಹಳೆ ಪಿಂಚಣಿ ಯೋಜನೆಯನ್ನು ಜಾರಿ ಮಾಡಿವೆ. ರಾಜಸ್ಥಾನ ಮತ್ತು ಜಾರ್ಖಂಡ್ ರಾಜ್ಯಗಳು ಹಳೆ ಪಿಂಚಣಿ ಯೋಜನೆ ಜಾರಿ ಮಾಡುವುದಾಗಿ ಘೋಷಿಸಿವೆ. ಕೇಂದ್ರ ಸರ್ಕಾರವು ಯುಪಿಎಸ್ ಅಥವಾ ಎನ್‌ಪಿಎಸ್ ಯೋಜನೆಗಳನ್ನು ಆಯ್ಕೆ ಮಾಡಿಕೊಳ್ಳಲು ನೌಕರರಿಗೆ ಅವಕಾಶ ನೀಡಿದೆ. ರಾಜ್ಯದಲ್ಲೂ ಇದೇ ರೀತಿ ಅವಕಾಶ ನೀಡುವ ಮೂಲಕ ನೌಕರರ ಹಿತ ಕಾಯುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುನ್ನುಡಿ ಬರೆಯಬೇಕಿದೆ ಎಂದು ತಿಳಿಸಿದ್ದಾರೆ.

ಹೋರಾಟದ ಸಂದರ್ಭದಲ್ಲಿ ಮುಂಚೂಣಿಯಲ್ಲಿದ್ದ ಸಿದ್ದಯ್ಯ ಹಿರೇಮಠ ವಿಷ ಸೇವಿಸಿ ಪ್ರಾಣ ಕಳೆದುಕೊಂಡಾಗ, ಧರಣಿಯಲ್ಲಿದ್ದವರು ಬಹಳ ಆತಂಕಕ್ಕೆ ಒಳಗಾದ ನಮಗೆ ವಿಧಾನಪರಿಷತ್ ಸದಸ್ಯ ಪುಟ್ಟಣ್ಣ, ಇಂದಿನ ಡಿಸಿಎಂ ಡಿ.ಕೆ. ಶಿವಕುಮಾರ್ ವೇದಿಕೆಯಲ್ಲಿ ಧರಣಿ ವಾಪಸ್ಸು ಪಡೆಯುವ ಸೂಚನೆ ಮತ್ತು ಮುಂದೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಹಳೆಯ ನಿಶ್ಚಿತ ಪಿಂಚಣಿಯನ್ನು ಜಾರಿಗೊಳಿಸಲಾಗುವ ಭರವಸೆ ನೀಡಿದ್ದರು. ಇದೀಗ ಅದು ಅನುಷ್ಠಾನಕ್ಕೆ ಬರಬೇಕಿದೆ ಎಂದು ಮನವಿ ಮಾಡಿದ್ದಾರೆ.

## ಪತ್ನಿ ಆತ್ಮಹತ್ಯೆ: ಪತಿಗೆ ಜೈಲು ಶಿಕ್ಷೆ

ಮೈಸೂರು: ವರದಕ್ಷಿಣೆ ಕಿರುಕುಳ ನೀಡಿ ಪತ್ನಿಯ ಸಾವಿಗೆ ಕಾರಣವಾಗಿದ್ದ ಪತಿಗೆ ಜೈಲು ಶಿಕ್ಷೆ ವಿಧಿಸಿ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆದೇಶ ಹೊರಡಿಸಿದೆ.

ನಂಜನಗೂಡು ತಾಲೂಕಿನ ದೇವಿರಮ್ಮನಹಳ್ಳಿ ನಿವಾಸಿ ಚೈತ್ರಾನಂದ ಶಿಕ್ಷೆಗೆ ಗುರಿಯಾದ ಅಪರಾಧಿ. ನಂಜನಗೂಡಿನಲ್ಲಿ ವ್ಯಾಪಾರಿಯಾಗಿದ್ದ ಚೈತ್ರಾನಂದ, ಸೌಮ್ಯಾಶ್ರೀ ಅವರನ್ನು ಪ್ರೀತಿಸಿ ಮದುವೆಯಾಗಿದ್ದ. ಮದುವೆಯಾದ ನಂತರ ಆರೋಪಿ ಮೃತ ಸೌಮ್ಯಶ್ರೀಗೆ ನಿಮ್ಮ ತವರು ಮನೆಯಿಂದ ಏನು ವರದಕ್ಷಿಣೆ ಕೊಟ್ಟಿಲ್ಲ. ಹೊಸಮನೆ ಕಟ್ಟಿಸಿ ಸಾಲ ಆಗಿದೆ, ಹೊಸದಾಗಿ ಬಟ್ಟೆ ಅಂಗಡಿ ಮಾಡಬೇಕು, ಇದಕ್ಕಾಗಿ ತವರು ಮನೆಯಿಂದ ಹಣ ತರುವಂತೆ ಮಾನಸಿಕ ಮತ್ತು ದೈಹಿಕವಾಗಿ ಹಿಂಸೆ ನೀಡುತ್ತಿದ್ದ.

ನಂತರ 100ಗ್ರಾಂ ಚಿನ್ನದ ವಡವೆಗಳನ್ನು ವರದಕ್ಷಿಣೆ ರೂಪದಲ್ಲಿ ನೀಡಿದ್ದರೂ ಬಟ್ಟೆ ಅಂಗಡಿ ತೆರೆಯಲು ಹಣ ಸಾಲುವುದಿಲ್ಲವೆಂದು ಪೀಡಿಸಿದ್ದ. ನಿಮ್ಮಪ್ಪನ ಹೆಸರಿನಲ್ಲಿರುವ ಜಮೀನು ಮಾರಿ 10 ಲಕ್ಷ ರೂ. ಹೊಂದಿಸಿ ಕೊಡು ಎಂದು ಒತ್ತಾಯಿಸಿದ್ದ.

ಇದರಿಂದ ಮನನೊಂದಿದ್ದ ಸೌಮ್ಯಾಶ್ರೀ 2016ರ ಡಿಸೆಂಬರ್ 27ರಂದು ಬೆಳಗ್ಗೆ 9.30ಕ್ಕೆ ಮನೆಯ ಸೀಲಿಂಗ್ ಫ್ಯಾನ್‌ಗೆ ಸೀರೆಯಿಂದ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದ ಆಗಿನ ಇನ್ಸ್‌ಪೆಕ್ಟರ್ ಮಹಮ್ಮದ್ ಸುಜೀತಾ ಅವರು ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ವಿಚಾರಣೆ ನಡೆಸಿದ ಮೈಸೂರಿನ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಕೆ.ಎನ್.ರೂಪಾ ಅವರು, ಬಿಎನ್‌ಎಸ್ 498(ಎ) ಅಪರಾಧಕ್ಕೆ ಆರೋಪಿಗೆ 2 ವರ್ಷ ಕಠಿಣ ಶಿಕ್ಷೆ ಮತ್ತು 25 ಸಾವಿರ ರೂ. ವಿಧಿಸಿದ್ದು, ಬಿಎನ್‌ಎಸ್ 304(ಬಿ) ಅಪರಾಧಕ್ಕೆ 10 ವರ್ಷ ಕಠಿಣ ಶಿಕ್ಷೆ ಮತ್ತು 1 ಲಕ್ಷ ರೂ. ದಂಡ, ವರದಕ್ಷಿಣೆ ನಿಷೇಧ ಕಾಯ್ದೆ ಅಪರಾಧಕ್ಕೆ 6 ತಿಂಗಳ ಕಠಿಣ ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ಶಿಕ್ಷೆಯನ್ನು ಏಕಕಾಲದಲ್ಲಿ ಅನುಭವಿಸುವಂತೆ ತೀರ್ಪು ನೀಡಿದ್ದಾರೆ. ಸರ್ಕಾರಿ ಅಭಿಯೋಜಕರಾಗಿ ಯೋಗೇಶ್ವರ ಬಿ.ಇ. ವಾದ ಮಂಡಿಸಿದ್ದರು.

## ಅಟಲ್ ಪುರಸ್ಕಾರಕ್ಕೆ ಆಗಮಿಸಲು ಕರೆ

ಮೈಸೂರು: ದಿ.ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮದಿನದ ಅಂಗವಾಗಿ ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದವತಿಯಿಂದ ಭಾರತೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ.ಗೋವಿಂದನ್ ರಂಗರಾಜನ್, ದೇವರಾಜ ಅರಸು ಅಕಾಡೆಮಿಯ ಅಧ್ಯಕ್ಷ ಡಾ.ಎಸ್ ಚಂದ್ರಶೇಖರ ಶೆಟ್ಟಿ ಮತ್ತು "ಬೇಸ್" ಹಾಗೂ ""ಪ್ರಯೋಗ" ಸಂಸ್ಥೆಗಳ ಸಂಸ್ಥಾಪಕ ಡಾ.ಎಚ್.ಎಸ್. ನಾಗರಾಜುರಿಗೆ "ಅಟಲ್ ಪುರಸ್ಕಾರ" ನೀಡಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ಶೈಕ್ಷಣಿಕ ಆಸಕ್ತಿಯಿರುವ ಸರ್ವರೂ ಭಾಗವಹಿಸಬೇಕೆಂದು ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ಎಂ. ಕೃಷ್ಣಗೌಡ ತಿಳಿಸಿದರು.

ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಾಜಿ ಉಪಮುಖ್ಯಮಂತ್ರಿ, ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದ ಸ್ಥಾಪಕ ಡಾ.ಸಿ.ಎನ್.ಅಶ್ವತ್ಥನಾರಾಯಣ ನೇತೃತ್ವದಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ 'ಶಿಕ್ಷಣ, ಆಡಳಿತ, ಕೌಶಲ್ಯಾಭಿವೃದ್ಧಿ ಮತ್ತು ನಾಯಕತ್ವ ಕ್ಷೇತ್ರಗಳಲ್ಲಿನ ಅನನ್ಯ ಸಾಧನೆ ಗುರುತಿಸಿ ಈ ಪ್ರಶಸ್ತಿ ನೀಡಲಾಗುತ್ತಿದೆ. ಭಾರತಕ್ಕೆ ಶ್ರೇಷ್ಠ ನಾಯಕತ್ವ ನೀಡಿದ ವಾಜಪೇಯಿರನ್ನು ಈ ಮೂಲಕ ಸ್ಮರಿಸಿಕೊಳ್ಳಲಾಗುತ್ತದೆ. ಅವರ ಜನ್ಮದಿನವಾದ ಡಿ.25ರಂದು ಬೆಂಗಳೂರು ನಗರದ ಸೆಂಟ್ರಲ್ ಕಾಲೇಜು ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಹಮ್ಮಿಕೊಂಡಿರುವ ಸುಶಾಸನ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಉದ್ಘಾಟನಾ ಭಾಷಣ ಮಾಡಲಿದ್ದು, ಸಂಸದ ಬಸವರಾಜ ಬೊಮ್ಮಾಯಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ಎಂ.ಕೃಷ್ಣಗೌಡ ಅಧ್ಯಕ್ಷತೆ ವಹಿಸಲಿದ್ದೇನೆಂದರು.




ಇನ್ನಿತರೆ ವಿಚಾರಗಳ ಕುರಿತು ವಿಚಾರ ಸಂಕಿರಣ ನಡೆಯಲಿದ್ದು, ಹೆಚ್ಚಿನ ಮಂದಿ ಮೈಸೂರಿನಿಂದಲೂ ಆಗಮಿಸುವಂತೆ ಕೋರಿದರು. ಮಹಾನಗರಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ, ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ರವಿ ಇನ್ನಿತರರು ಉಪಸ್ಥಿತರಿದ್ದರು.

# ರೈತರಿಗೆ ಯಾವುದೇ ಭಾಗ್ಯಗಳ ಕೊಡದ ಸರ್ಕಾರಗಳು: ರಾಜಯೋಗೀಂದ್ರ ಸ್ವಾಮೀಜಿ

### ವಿಶ್ವ ರೈತ ದಿನಾಚರಣೆಯಲ್ಲಿ ಚನ್ನಮ್ಮನ ಕಿತ್ತೂರು ರಾಜಗುರು ಸಂಸ್ಥಾನ ಮಠದ ಪೀಠಾಧಿಪತಿ ಬೇಸರ

ಮೈಸೂರು: ರೈತನಿಗೆ ಅತ್ಯಂತ ಕಷ್ಟಕಾಲ ಬಂದಿದೆ. ರೈತನಿಗೆ ಯಾವುದೇ ಭಾಗ್ಯ ಕೊಡುವ ಕೆಲಸವನ್ನು ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ಮಾಡುತ್ತಿಲ್ಲವಾಗಿವೆ ಎಂದು ಚನ್ನಮ್ಮನ ಕಿತ್ತೂರು ರಾಜಗುರು ಸಂಸ್ಥಾನ ಮಠದ ಪೀಠಾಧಿಪತಿ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿ ಹೇಳಿದರು.

ಕರ್ನಾಟಕ ರಾಜ್ಯ ರೈತ ಸಂಘಗಳ ಮಹಾ ಒಕ್ಕೂಟದಿಂದ ಮೈಸೂರು ವೈದ್ಯಕೀಯ ಕಾಲೇಜು ಅಮೃತೋತ್ಸವ ಸಭಾಂಗಣದಲ್ಲಿ ಆಯೋಜಿಸಿದ್ದ ವಿಶ್ವ ರೈತ ದಿನಾಚರಣೆ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು. ರೈತರಿಗೆ ಜಾತಿ, ಮತ, ಪಂಥವಿಲ್ಲ. ರೈತ ಬೆಳೆ ಬೆಳೆಯದಿದ್ದರೆ ದೇಶದ ಮೇಲೆ ಪರಿಣಾಮ ಬೀರಲಿದೆ. ಮನುಷ್ಯರಿಗಷ್ಟೇ ಅಲ್ಲದೆ ಸಕಲಜೀವರಾಶಿಗೂ ಅನ್ನ ನೀಡುವವವರು ರೈತನಾಗಿದ್ದಾನೆ. ಕೃಷಿಯ ಗೊಬ್ಬರ, ಬಿತ್ತನೆ ಬೀಜ ವರ್ಷದಿಂದ ವರ್ಷಕ್ಕೆ ಹೆಚ್ಚಳ ಆಗುತ್ತದೆ. ಆದರೆ, ಆತನ ಬೆಳೆಗೆ ಬೆಲೆ ಸಿಗುವ ಕೆಲಸ ಆಗುತ್ತಿಲ್ಲ. ರೈತನನ್ನು ಉಳಿಸಿ ಬೆಳೆಸುವ ಕೆಲಸ ಬೇಕಿದೆ. ನಮ್ಮದು ಕೃಷಿ ಮತ್ತು ಋಷಿ ಸಂಸ್ಕೃತಿಯಾಗಿದೆ. ಋಷಿಗಿಂತಲೂ ಶ್ರೇಷ್ಠ ಸಂಸ್ಕೃತಿ ಕೃಷಿಯಾಗಿದೆ. ಕಬ್ಬಿನ ಹೋರಾಟ, ಕಾವೇರಿ ಹೋರಾಟಕ್ಕೆ ಇರುವ ಒಗ್ಗಟ್ಟು ಎಲ್ಲದ್ದಕ್ಕೂ ಮೂಡಲಿ ಎಂದು ಆಶಿಸಿದರು.

ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷರಾದ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಈಗಿನ ಸರ್ಕಾರ ಯಾರಿಂದಲೂ ಸಂಪೂರ್ಣ ಕೃಷಿ ಸಾಲ ಮನ್ನಾ ಮಾಡಲು ಆಗಲ್ಲ ಎನ್ನುತ್ತಿವೆ. ಕೃಷಿ ಭೂಮಿಯ ಉಳಿವಿಗಾಗಿ ಮಾಡಿ ಎನ್ನುವುದು ನಮ್ಮ ಹಕ್ಕೊತ್ತಾಯ. ರೈತರ ಸಮಸ್ಯೆ ಆಲಿಸದ ಸರ್ಕಾರಗಳಿಗೆ ಪಂಚೇಂದ್ರಿಯಗಳು ಇಲ್ಲದಂತೆ ಆಗಿದೆ. ಚುನಾವಣಾ ಪೂರ್ವ ಮಾತು ಕೊಟ್ಟು ತಪ್ಪಿದ ಕಾರಣಕ್ಕೆ ರೈತರ ಕಾರ್ಯಕ್ರಮಗಳಿಗೆ ಜನಪ್ರತಿನಿಧಿಗಳು ಬರಲು ಆಗುತ್ತಿಲ್ಲ. ಕೃಷಿ ಪಂಪಸೆಟ್ ಖಾಸಗೀಕರಣ ಮಾಡಲು ಹೊರಟಿವೆ. ಇದನ್ನು ಬಿಡಬೇಕು. ಅಕ್ರಮ ಸಕ್ರಮ ಮತ್ತೆ ಜಾರಿಗೆ ತರಬೇಕು. ವರ್ಷಪೂರ್ತಿ ಭತ್ತ, ರಾಗಿ, ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಬೇಕು. ಎಂಎಸ್ ಪಿ ಅಡಿಯಲ್ಲಿ ಬೆಂಬಲ ಬೆಲೆ ಘೋಷಿಸಬೇಕು. ಮಧ್ಯವರ್ತಿಗಳ ಪರವಾಗಿ ಇರುವ ಸರ್ಕಾರಗಳು ನಮ್ಮ ಮನವಿಗೆ ಸ್ಪಂದಿಸುತ್ತಿಲ್ಲ. ಗ್ರಾಪಂ ಮಟ್ಟದಲ್ಲಿ ಖರೀದಿ ಕೇಂದ್ರ ತೆರೆಯಲಿ ಎಂದರು.





> ರಾಜಕಾರಣಿಗಳು ರೈತರ ಕಾರ್ಯಕ್ರಮಕ್ಕೆ ಹೋದರೆ ರೈತರು ಸಾಲ ಮನ್ನಾ ಮಾಡಿ ಅಂತಾರೆ, ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ಕೊಡಿ ಎಂದು ಕೇಳುತ್ತಾರೆ. ಈ ಕಾರಣಕ್ಕಾಗಿ ರಾಜಕಾರಣಿ(ಯಧುವೀರ್)ಗಳು ರೈತರ ಯಾವುದೇ ಕಾರ್ಯಕ್ರಮಗಳಿಗೂ ಬರುವುದಿಲ್ಲ. ನಾವು ಇನ್ನು ಮುಂದೆ ಅವರನ್ನು ಕರೆಯುವುದೂ ಇಲ್ಲ.
>
> –ಇಂಗಲಗುಪ್ಪೆ ಕೃಷ್ಣೇಗೌಡ ಕರ್ನಾಟಕ ರಾಜ್ಯ ರೈತಸಂಘ(ರೈತಬಣ) ಅಧ್ಯಕ್ಷ

ಮುಂದಿನ ತಲೆ ಮಾರಿಗೆ ರೈತವರ್ಗವನ್ನು ಹುಡುಕುವ ಸ್ಥಿತಿ ನಿರ್ಮಾಣ ಆಗುತ್ತಿದೆ. ರೈತ ಮುಖಂಡರ ಮುಖವಾಡ ಹಾಕಿಕೊಂಡು ಯುವ ಪಿಳಿಗೆಯನ್ನು ಟೀಕಿಸುತ್ತಿದ್ದಿರಿ. ನಿಮ್ಮ ಇಲ್ಲಿಯವರೆಗಿನ ಹೋರಾಟವಾದರೂ ಎನೂ? ಸರ್ಕಾರದ ಅಡಿಯಾಳಾಗಿ ಕೆಲಸ ಮಾಡುತ್ತಿರುವುದರಿಂದ ನಾವು ಹೋರಾಟಕ್ಕಿಳಿದಿದ್ದೇವೆ. ರೈತನ ನಾಯಕರೆನಿಸಿಕೊಂಡವರು ಅವರ ಆದಾಯವನ್ನು ಘೋಷಣೆ ಮಾಡಿಕೊಳ್ಳಲಿ. ಅದನ್ನು ಬಿಟ್ಟು ಹಣ, ಅಧಿಕಾರಕ್ಕೆ ಸಂಘಟನೆ ಹೆಸರಿನಲ್ಲಿರುವವರಿಗೆ ನೀವೇ ತಕ್ಕಪಾಠ ಕಲಿಸಿ ಎಂದರು.

ರೈತಮುಖಂಡ ಬಸನಗೌಡ ಪಾಟೀಲ ಮಾತನಾಡಿ, ಕೋಣಕ್ಕಿರುವ ದಪ್ಪ ಚರ್ಮದ ಸರ್ಕಾರಗಳಿಂದಾಗಿ ರೈತರು ನಿರಂತರವಾಗಿ ಹೋರಾಟ ಮಾಡಬೇಕಿದೆ. ನಮ್ಮ ಬೆಳೆಗೆ ಬೆಲೆ ತೆಗೆದುಕೊಳ್ಳಲು ಹೋರಾಟ ಮಾಡಬೇಕಾದ ಸ್ಥಿತಿಯಿದೆ. ರೈತ ಸಂಘಟನೆಗಳನ್ನು ಪ್ರತಿಬಾರಿ ರಾಜಕಾರಣಿಗಳು ದುರ್ಬಲ ಮಾಡುತ್ತಾ ಬರುತ್ತಿದ್ದಾರೆ. ಕಬ್ಬಿನ ಬೆಲೆ ಹೋರಾಟದಲ್ಲಿ ಉತ್ತರ ಶಕ್ತಿ ಎನೆಂಬುದು ರಾಜ್ಯಕ್ಕೆ ತೋರಿಸಿದ್ದೇವೆ. ಸರ್ಕಾರವನ್ನು ಬೀಳಿಸಲು ಉತ್ತರ ಕರ್ನಾಟಕದವರಿಗೆ ಆ ಶಕ್ತಿಯಿದೆ. ಕೃಷಿಕರ ಹಿತಕ್ಕೆ ಕೃಷಿ ಪರಿಷತ್ ರಚನೆ ಆಗಬೇಕು. ಕೃಷಿಗೆ ಪ್ರತ್ಯೇಕ ಬಜೆಟ್ ಮಂಡಿಸಬೇಕು. ರೈತರಿಗೆ ಮೀಸಲಾತಿ ಕೊಡಬೇಕೆಂದರು.

ನಗರದ ಕೋಟೆ ಆಂಜನೇಯ ಸ್ವಾಮಿ ದೇವಾಲಯದಿಂದ ಜೆ.ಕೆ.ಮೈದಾನದವರೆಗೆ ಎತ್ತಿನಗಾಡಿ, ವೀರಗಾಸೆ ಕುಣಿತ, ಬೊಂಬೆ ಕುಣಿತ ಮೊದಲಾದ ಕಲಾತಂಡಗಳ ಮೆರವಣಿಗೆ ಗಮನ ಸೆಳೆಯಿತು. ಮಹಾ ಒಕ್ಕೂಟದ ಪದಾಧಿಕಾರಿಗಳಾದ ಬೀರಪ್ಪ ದೇಶನೂರು, ನಾಸೀರ್ ಭಗವಾನ್, ಪಿ.ಎಂ.ರವಿಕುಮಾರ್, ದಾದಾ ಮೆಹಬೂಬ ಸಾಬ ನವಲಗುಂದ, ಸುರೇಶ್ ಮೂಲಿಮನಿ, ಮಹಾದೇವಿ ಹೂವಿನಗೋಳ, ಈರಣ್ಣ ಅಂಗಡಿ, ಗಣೇಶ್ ಇಳಿಗೆರೆ, ಹೇಮಾ ಕಾಜಗಾರ, ಕೆಆರ್‌ಎಸ್ ರಾಮೇಗೌಡ, ಮಂಡ್ಯ ಜಿಲ್ಲೆಯ ಹೆಸರಾಂತ ಪೈಲ್ವಾನ್ ಮುಕುಂದ, ದೇವರಾಜು, ಶೌಕತ್, ಬೆಂಗಳೂರು ಕೃಷ್ಣ, ಹನುಮಂತಪ್ಪ, ಕಮಲ್, ಶಿವಮೂರ್ತಿ, ರಘುನಾಥ್, ಮಲ್ಲಿಕಾರ್ಜುನ, ಬಿ. ಅಶೋಕ್ ದಾಸೇಗೌಡ, ಮಾಜಿ ಸೈನಿಕರಾದ ದಿವಾಕರ ಕೆ.ಪಿ., ಬಸವರಾಜು, ರವಿಕುಮಾರ್, ಡಿ.ಹೆಚ್.ನವಲಗುಂದ ಇತರರು ಇದ್ದರು.

## ಮದ್ದಯ್ಯನಹುಂಡಿ ಬಳಿ ಚಿರತೆ ಸೆರೆ



ಗುಂಡ್ಲುಪೇಟೆ: ತಾಲ್ಲೂಕಿನ ಮದ್ದಯ್ಯನಹುಂಡಿ ಗ್ರಾಮದ ಶಾಂತರಾಜಪ್ಪ ಎಂಬುವವರ ಜಮೀನಿನಲ್ಲಿ ಚಿರತೆ ಸೆರೆಗೆ ಇರಿಸಲಾಗಿದ್ದ ಬೋನ್‌ಗೆ ಸುಮಾರು 2 ರಿಂದ 3 ವರ್ಷದ ಗಂಡು ಚಿರತೆ ಸೆರೆಯಾಗಿರುವ ಘಟನೆ ನಡೆದಿದೆ. ಸೆರೆಯಾದ ಚಿರತೆಯನ್ನು ಮೂಲಹೊಳೆ ಕಾಡಿನ ಒಳಗೆ ಬಿಡಲಾಗಿದೆ ಎಂದು ಮದ್ದೂರು ವಲಯಾಧಿಕಾರಿ ಪುನೀತ್ ತಿಳಿಸಿದರು, ಚಿರತೆ ಸೇರೆಯಿಂದ ಗ್ರಾಮಸ್ಥರು ನಿಟ್ಟುಸಿರು ಬಿಟ್ಟಿದ್ದಾರೆ.

## ಚಾಮರಾಜನಗರದ ಜಮೀನೊಂದರಲ್ಲಿ ಇರಿಸಿದ್ದ ಸಿಸಿಟಿವಿಯಲ್ಲಿ ಹುಲಿಯ ಹೆಜ್ಜೆ ಗುರುತು ಪತ್ತೆ : ಹುಲಿ ಸೆರೆಹಿಡಿಯಲು ಹೆಚ್ಚಿದ ಒತ್ತಡ

ಚಾಮರಾಜನಗರ, ತಾಲೂಕಿನ ನಂಜೇದೇವನಪುರದಲ್ಲಿ 5 ಹುಲಿ ಪ್ರತ್ಯಕ್ಷ ಸಂಬಂಧ ಒಂದೆಡೆ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಆದರೆ, ಹುಲಿ ಓಡಾಟ ಸಿಸಿಟಿವಿಯಲ್ಲಿ ಮತ್ತೆ ಸೆರೆಯಾಗಿದ್ದು, ಜಮೀನಿನ ಸಮೀಪವೇ ಹೆಜ್ಜೆಗುರುತುಗಳು ಮೂಡಿವೆ.

ಸೋಮವಾರ ಕರಿಕಲ್ಲು ಕ್ವಾರಿ ಸಮೀಪ 5 ಹುಲಿಗಳು ಬೀಡು ಬಿಟ್ಟಿದ್ದು, ಅರಣ್ಯ ಸಿಬ್ಬಂದಿಯ ಡ್ರೋನ್ ಕ್ಯಾಮರಾದಲ್ಲಿ ಸೆರೆಯಾಗಿತ್ತು. ರಾತ್ರಿ ರೈತ ಕುಮಾರಸ್ವಾಮಿ ಎಂಬವರ ಜಮೀನಿಗೆ ಅಳವಡಿಸಿದ್ದ ಸಿಸಿಟಿವಿಯಲ್ಲಿ ತಾಯಿ ಹುಲಿ ಓಡಾಡಿರುವ ದೃಶ್ಯ ಸೆರೆಯಾಗಿದೆ.

ಸಿಸಿಟಿವಿ ದೃಶ್ಯ ಒಂದೆಡೆಯಾದರೆ, ಜಮೀನುಗಳ ಸಮೀಪ ಹುಲಿ ಹೆಜ್ಜೆ ಗುರುತು ಸಹ ಮೂಡಿವೆ. ಇದರಿಂದಾಗಿ ಆತಂಕಕ್ಕೆ ಒಳಗಾಗಿರುವ ಗ್ರಾಮಸ್ಥರು ಅರಣ್ಯ ಇಲಾಖೆಯು ಶೀಘ್ರವೇ ಹುಲಿಗಳನ್ನು ಸೆರೆ ಹಿಡಿಯಬೇಕೆಂದು ಒತ್ತಾಯಿಸಿದ್ದಾರೆ.



**ಸಚಿವ ಕೆ. ವೆಂಕಟೇಶ್ ಅಧ್ಯಕ್ಷತೆಯಲ್ಲಿ ತುರ್ತು ಸಭೆ**

ಹುಲಿಗಳ ಉಪಟಳ ಹೆಚ್ಚುತ್ತಿದ್ದಂತೆ ಮಾನವ ಮತ್ತು ಪ್ರಾಣಿ ಸಂಘರ್ಷ ತಡೆಗೆ ಇಂದು ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸಭೆ ನಡೆಸಿದ್ದಾರೆ. ಬಂಡೀಪುರ, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಕಾವೇರಿ ಮತ್ತು ಮಲೆ ಮಹದೇಶ್ವರ ವನ್ಯಜೀವಿಧಾಮದ ಅಧಿಕಾರಿಗಳ ಜೊತೆ ಸಮಗ್ರವಾಗಿ ಚರ್ಚಿಸಿದರು. ಅರಣ್ಯ ಸಿಬ್ಬಂದಿಗೆ ಕೂಂಬಿಂಗ್‌ಗೆ ಎದುರಾಗಿರುವ ಸಮಸ್ಯೆ, ನುರಿತ ಪಶು ವೈದ್ಯರು, ಕೂಂಬಿಂಗ್‌ಗೆ ಬೇಕಾದ ಉಪಕರಣಗಳು ಹಾಗೂ ಹೆಚ್ಚಿನ ಆನೆಗಳ ಬೇಡಿಕೆ ಸೇರಿದಂತೆ ಹುಲಿಗಳನ್ನು ಸೆರೆ ಹಿಡಿಯಬೇಕಾ ಇಲ್ಲವೇ ಕಾಡಿಗೆ ಅಟ್ಟಬೇಕಾ ಎಂಬ ಬಗ್ಗೆ ಸುದೀರ್ಘವಾಗಿ ಚರ್ಚೆ ನಡೆಸಿದರು. ಸಭೆಗೂ ಮುನ್ನ ಸಚಿವ ಕೆ.ವೆಂಕಟೇಶ್ ಮಾಧ್ಯಮದವರೊಂದಿಗೆ ಮಾತನಾಡಿ ಐದು ಹುಲಿಗಳು ಕಾಣಿಸಿಕೊಂಡಿವೆ. ಹಾಗಾಗಿ, ಅಧಿಕಾರಿಗಳೊಂದಿಗೆ ಸಭೆ ನಡೆಸಲು ನಾನು ಬಂದಿದ್ದೇನೆ. ಅಧಿಕಾರಿಗಳು ಏನ್ ಹೇಳ್ತಾರೆ ಕೇಳ್ತೀನಿ. ರೈತರಿಗೆ, ಜನರಿಗೆ ರಕ್ಷಣೆ ಕೊಡೋದು ನಮ್ಮ ಕರ್ತವ್ಯ. ನುರಿತ ತಜ್ಞರು, ಅರಣ್ಯ ಇಲಾಖೆ ಅಧಿಕಾರಿಗಳಿಂದ ಮೊದಲು ಮಾಹಿತಿ ಪಡೆಯುತ್ತೇನೆ. ನಮ್ಮ ಸಲಹೆಯನ್ನು ಅವರಿಗೆ ಕೊಡುತ್ತೇನೆ. ಸೂಕ್ತ ಕ್ರಮಕ್ಕೆ ಸೂಚಿಸುತ್ತೇನೆ'ಎಂದು ತಿಳಿಸಿದರು.

## ಪಿಆರ್‌ಕೆ ಅಲಯನ್ಸ್ ಸ್ಟ್ರೈಕರ್ಸ್‌ಗೆ ಗೆಲುವು

ಮೈಸೂರು: ಅಂತಾರಾಷ್ಟ್ರೀಯ ಲಿಂಗಾಯತ್ ಯೂತ್ ಫೋರಂ (ಐಲೈಫ್) ವತಿಯಿಂದ ಭಾನುವಾರ ನಗರದ ಕಾಫಿ ಬೋರ್ಡ್‌ನಲ್ಲಿ ನಡೆದ ಐದನೇ ಆವೃತ್ತಿಯ ಐಪಿಎಲ್ (ಐಲೈಫ್ ಪ್ರೀಮಿಯರ್ ಲೀಗ್ 5.0) ನಲ್ಲಿ ಪಿಆರ್ಕೆ ಅಲಯನ್ಸ್ ಸ್ಟ್ರೈಕರ್ಸ್ ತಂಡ ಜಯ ಸಾಧಿಸಿತು.



ಇದಕ್ಕೂ ಮುನ್ನ ನಡೆದ ಲೀಗ್ ಹಂತದ ಪಂದ್ಯಗಳಲ್ಲಿ ಯಾವ ಪಂದ್ಯಗಳಲ್ಲೂ ಸೋಲು ಕಾಣದ ಪಿಆರ್ಕೆ ಅಲಯನ್ಸ್ ಸ್ಟ್ರೈಕರ್ಸ್ ತಂಡ ಫೈನಲ್ಸ್ ನಲ್ಲಿ ಶೈವ ಸಿಪಾಯಿ ಬುಲ್ಸ್ ವಿರುದ್ಧ 11ರನ್ಗಳ ಅಂತರದಲ್ಲಿ ಜಯ ಸಾಧಿಸಿತು. ಆರು ಓವರ್ ಮ್ಯಾಚ್ನ ಫೈನಲ್ನಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಅಲಯನ್ಸ್ ಸ್ಟ್ರೈಕರ್ಸ್ ತಂಡ 53 ರನ್ಗಳ ಗುರಿ ನೀಡಿತು. ನಂತರ ಬೌಲಿಂಗ್ ಮಾಡಿದ ಶೈವ ಸಿಪಾಯಿ ಬುಲ್ಸ್ ತಂಡ ಸೋಲನುಭವಿಸಿತು. ಮಾನಸಗಂಗೋತ್ರಿಯ ಕಂಪ್ಯೂಟರ್ ಸೈನ್ಸ್ ವಿಭಾಗದ ಹಿರಿಯ ಪ್ರಾಧ್ಯಾಪಕ ಹಾಗೂ ಎಂಐಟಿ ಮೈಸೂರಿನ ಗವರ್ನಿಂಗ್ ಕೌನ್ಸಿಲ್ನ ಛೇರ್ಮನ್ ಪ್ರೊ.ಡಿ.ಎಸ್.ಗುರು ವಿಜೇತ ತಂಡಕ್ಕೆ ಟ್ರೋಫಿ ವಿತರಿಸಿದರು. ಮ್ಯಾನ್ ಆಫ್ ದಿ ಮ್ಯಾಚ್ ಆಗಿ ರಾಜು ಹೊರಹೊಮ್ಮಿದರೆ, ಮ್ಯಾನ್ ಆಫ್ ದಿ ಸೀರೀಸ್ ಆಗಿ ಸತೀಶ್ ಪ್ರಶಸ್ತಿ ಪಡೆದರು. ಇಬ್ಬರೂ ವಿಜೇತ ತಂಡದವರೇ ಆಗಿದ್ದು ವಿಶೇಷ,

ಐಪಿಎಲ್ನ ಮುಖ್ಯ ಪ್ರಾಯೋಜಕರಾದ ಬಸವೇಶ್ವರ ಸ್ವೀಟ್ಸ್‌ನ ನವೀನ್, ವಿಜೇತ ತಂಡದ ಮಾಲೀಕರಾದ ಬಿ.ಎಸ್.ಪ್ರಶಾಂತ್, ರವಿಕಿರಣ್, ಅಂತಾರಾಷ್ಟ್ರೀಯ ಲಿಂಗಾಯತ್ ಯೂತ್ ಫೋರಂನ ಅಧ್ಯಕ್ಷ ಕೆ.ಎಚ್.ಕಿರಣ್, ಉಪಾಧ್ಯಕ್ಷರಾದ ಚಾಮರಾಜನಗರ ಮಹೇಶ್, ಮಾಜಿ ಅಧ್ಯಕ್ಷರಾದ ವೀರೇಶ್, ಮಹದೇವ ಪ್ರಸಾದ್, ಧರ್ಮ ಪ್ರಸಾದ್, ವಿಜೇತತಂಡದ ಪಿಆರ್ ಕೆ ಅಲಯನ್ಸ್ ಸ್ಟ್ರೈಕರ್ಸ್ ತಂಡದ ಸಂತೋಷ್ (ಕ್ಯಾಪ್ಟನ್), ಪದಾಧಿಕಾರಿಗಳು, ಸದಸ್ಯರು, ಸದಸ್ಯರ ಕುಟುಂಬದವರು ಉಪಸ್ಥಿತರಿದ್ದರು. ಭಾನುವಾರ ಬೆಳಿಗ್ಗೆಯಿಂದ ಸಂಜೆಯವರೆಗೂ ಲೀಗ್ ಹಂತದ ಪಂದ್ಯಗಳು, ಸೆಮಿ ಫೈನಲ್ಸ್ ಹಾಗೂ ಫೈನಲ್ಸ್ ಪಂದ್ಯಗಳು ನಡೆದವು.

**ಪಿ.ಕೆ.ರಾಮಕೃಷ್ಣ ಅಭಿಮತ**

## ಪೋಲಿಯೋ ನಿರ್ಮೂಲನೆಯಲ್ಲಿ ರೋಟರಿ ಸೇವೆ ಅನನ್ಯ

ಚಾಮರಾಜನಗರ: ಅಂಧತ್ವ, ಪೋಲಿಯೋ ನಿರ್ಮೂಲನೆಯಲ್ಲಿ ರೋಟರಿ ಸೇವೆ ಅನನ್ಯವಾಗಿದೆ ಎಂದು ರೋಟರಿ ಸಂಸ್ಥೆಯ ಜಿಲ್ಲಾ ಗೌರ್ನರ್ ಪಿ.ಕೆ.ರಾಮಕೃಷ್ಣ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರೋಟರಿ ಜಿಲ್ಲೆಯ 3181 92 ಕ್ಲಬ್‌ಗಳಿವೆ. ಪ್ರತಿಕ್ಲಬ್‌ಗೆ ಅಧಿಕೃತ ಜಿಲ್ಲಾ ಗೌರ್ನರ್ ಭೇಟಿ ಕಾರ್ಯಕ್ರಮ ಇರುತ್ತದೆ. ಈ ದಿನ ಚಾಮರಾಜನಗರ ಕ್ಲಬ್‌ಗೆ ನಾನೂ ಭೇಟಿ ನೀಡಿದ್ದೇನೆ. ಮೊದಲ ಬಾರಿಗೆ ರೋಟರಿ ಡಯಾಲಿಸಸ್ ಸೆಂಟರ್ ಗೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದೇನೆ ಎಂದರು. ಪ್ರತಿ ತಿಂಗಳು ರೋಟರಿ ಸಂಸ್ಥೆಯ ಉಚಿತ ಕಣ್ಣಿನ ತಪಾಸಣೆ ಶಿಬಿರ ಅಯೋಜನೆ ಮಾಡುತ್ತಾರೆ ಸಾವಿರಾರು ಮಂದಿ ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸಿದ್ದಾರೆ. ಚಾಮರಾಜನಗರ ಕ್ಲಬ್ ರೋಟರಿ ಫೌಂಡೇಶನ್‌ಗೆ ಡೊನೇಟ್ ಮಾಡುತ್ತದೆ. ಪೋಲಿಯೋ ಕಾರ್ಯಕ್ರಮ ಮಾಡಿದ್ದಾರೆ. ರೋಟರಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪೋಲಿಯೋ ನಿಯಂತ್ರಣ ಮಾಡುವ ಕೆಲಸ ಮಾಡುತ್ತಿದೆ. ಚಾಮರಾಜನಗರ ಕ್ಲಬ್ ಕೂಡ ಉತ್ತಮ ಸೇವಾ ಕಾರ್ಯಕ್ರಮ ಗಳನ್ನು ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ರೋಟರಿ ಮಾಜಿ ಜಿಲ್ಲಾ ಗೌರ್ನರ್ ಡಾ.ನಾಗಾರ್ಜುನ ಮಾತನಾಡಿ, ಮೊಟ್ಟಮೊದಲ ಬಾರಿಗೆ ರೋಟರಿ ಸಂಸ್ಥೆಯು ಪೋಲಿಯೋ ನಿರ್ಮೂಲನೆ ಕನಸು ಕಂಡಿತು. ಇಡೀ ವಿಶ್ವದಲ್ಲೇ ಪೋಲಿಯೋ ನಿರ್ಮೂಲನೆ ಮಾಡುವ ಕನಸನ್ನು ರೋಟರಿ ಸಂಸ್ಥೆ ಕಂಡಿದೆ. ಮುಂದಿನದಿನಗಳಲ್ಲಿ ಚಾಮರಾಜನಗರದಲ್ಲೂ ಕೂಡ ರೋಟರಿ ಕಣ್ಣಿನ ಆಸ್ಪತ್ರೆ ತೆರೆಯುವ ಕನಸು ಕಂಡಿದೆ. ಅಲ್ಲದೆ ರೋಟರಿ ಅಧ್ಯಕ್ಷರಾದ ಚಂದ್ರಶೇಖರ್ ಅವರ ಅವಧಿಯಲ್ಲಿ ಕೃತಕ ಕಾಲು ಜೋಡಣೆ ಕಾರ್ಯಕ್ರಮ ಮಾಡುವ ಆಶಯ ಹೊಂದಿದ್ದಾರೆ. ಸ್ವಾವಲಂಬಿ ಶ್ರೀ ಯೋಜನೆ ಮೂಲಕ ಬಡ ಮಹಿಳೆಯ ರಿಗೆ ಆಟೋ ತರಬೇತಿ ನೀಡಿ, ಕಡಿಮೆ ಅಭ್ಯರ್ಥಿಗಳು ಬಂದರೆ ಮೈಸೂರಿನಲ್ಲಿ ತರಬೇತಿ ನೀಡ ಲಾಗುತ್ತದೆ, 20 ಕ್ಕೂ ಹೆಚ್ಚು ಅಭ್ಯರ್ಥಿಗಳು ಬಂದರೆ ಚಾ.ನಗರದಲ್ಲಿ ತರಬೇತಿ ಕೊಡಿಸಲಾಗುವುದು ಎಂದರು. ರೋಟರಿ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ಜ.15 ರಿಂದ ಇಲ್ಲಿಯ ತನಕ 118 ಕಾರ್ಯಕ್ರಮ ಮಾಡಲಾಗಿದೆ. ಇನ್ನೂ 6 ತಿಂಗಳೊಳಗೆ ಹೆಚ್ಚಿನ ಸೇವಾ ಕಾರ್ಯ ಮಾಡುವ ಗುರಿಯಿಟ್ಟು ಕೊಳ್ಳಲಾಗಿದೆ ಎಂದರು. ಗೋಷ್ಠಿಯಲ್ಲಿ ಸಹಾಯಕ ಗೌರ್ನರ್ ಡಿ.ಎಸ್.ಗಿರೀಶ್, ಸಂಸ್ಥಾಪಕ ಸದಸ್ಯ ಸಿ.ವಿ.ಶ್ರೀನಿವಾಸ್ ಶೆಟ್ಟಿ, ಕಾರ್ಯದರ್ಶಿ ಸಿದ್ದರಾಜು, ಮುಂದಿನ ಸಾಲಿನ ಅಧ್ಯಕ್ಷ ಅಬ್ದುಲ್ ಅಜೀಜ್ ದೀನಾ ಹಾಜರಿದ್ದರು.



# ವಸತಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಿ: ಜಿಲ್ಲಾಧಿಕಾರಿ ಡಾ.ಕುಮಾರ ಸಲಹೆ



**ಮಂಡ್ಯ:** ಜಿಲ್ಲೆಯಲ್ಲಿರುವ ವಸತಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಹೊತ್ತು ನೀಡಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ/ ಡಾ:ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಇಂದಿರಾ ಗಾಂಧಿ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುತ್ತಿರುವ ಕಟ್ಟಡಗಳ ಪ್ರಗತಿಯ ಬಗ್ಗೆ ಮತ್ತು ವಸತಿ ಶಾಲೆಗಳಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಡಾ:ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಇಂದಿರಾ ಗಾಂಧಿ ವಸತಿ ಶಾಲೆಗಳು ಸೇರಿದಂತೆ ಒಟ್ಟು 43 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಎಲ್ಲಾ ವಸತಿ ಶಾಲೆಗಳಲ್ಲೂ ಕುಡಿಯುವ ನೀರು, ಆಹಾರ, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ವಿದ್ಯಾರ್ಥಿಗಳಿಗೆ ಒದಗಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ನೀಡಲಾಗುವ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಮಂಜುಳಾ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ವಸತಿ ಶಾಲೆಗಳ ಫಲಿತಾಂಶ ವೃದ್ಧಿಗೆ ಕ್ರಮ

ಜಿಲ್ಲೆಯ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಫಲಿತಾಂಶ ವೃದ್ಧಿಸಲು ವಿಶೇಷ ತರಗತಿ ಹಾಗೂ ಕಿರು ಪರೀಕ್ಷೆಗಳನ್ನು ಆಯೋಜಿಸಿ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ಹೇಳಿದರು.

ಈಗಾಗಲೇ ವಸತಿ ಶಾಲೆ ನಿರ್ಮಾಣಕ್ಕಾಗಿ ಕೈಗೊಂಡಿರುವ ಕಾಮಗಾರಿಗಳನ್ನು ಪ್ರಾರಂಭಿಸಿ ನಿಗದಿತ ಅವಧಿಯೊಳಗೆ ಕಾಮಗಾರಿಗಳು ಪೂರ್ಣಗೊಳಿಸಿ. ಅಧಿಕಾರಿಗಳು ಕಾಮಗಾರಿಗಳನ್ನು ಪರಿಶೀಲಿಸಿ ತ್ವರಿತವಾಗಿ ಕಾಮಗಾರಿಗಳು ಪೂರ್ಣಗೊಳ್ಳುವಂತೆ ಮುತುವರ್ಜಿ ವಹಿಸಿ ಕಾರ್ಯ ನಿರ್ವಹಿಸಿ ಎಂದು ಸೂಚಿಸಿದರು.

ಜಿಲ್ಲೆಯ ವಸತಿ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳ ಪಟ್ಟಿಯನ್ನು ಸಿದ್ಧಪಡಿಸಿ. ಸದರಿ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರಕ್ಕೆ ಮನವಿ ಸಲ್ಲಿಕೆ ಮಾಡಿ ಎಂದು ತಿಳಿಸಿದರು.

# ಕರೆನ್ಸಿ ನೋಟುಗಳಿಂದ ಗಾಂಧೀಜಿ ಚಿತ್ರ ತೆಗೆದುಹಾಕಲು ಕೇಂದ್ರ ಸರ್ಕಾರ ಮುಂದು: ಸಿಪಿಎಂ ಸಂಸದ ಜಾನ್ ಬ್ರಿಟಾಸ್



**ನವದೆಹಲಿ:** ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಎರಡು ದಶಕಗಳಷ್ಟು ಹಳೆಯ ನರೇಗಾ ಯೋಜನೆ ಬದಲಿಗೆ ಜಿ ರಾಮ್ ಜಿ ಮಸೂದೆಯನ್ನು ಮಂಡಿಸಿ ಅದಕ್ಕೆ ರಾಷ್ಟ್ರಪತಿಗಳ ಅಂಕಿತ ಸಹ ಸಿಕ್ಕಿದೆ. ಈ ಬಗ್ಗೆ ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಸಿಪಿಎಂ ರಾಜ್ಯಸಭಾ ಸಂಸದ ಜಾನ್ ಬ್ರಿಟಾಸ್, ಕೇಂದ್ರವು ಈಗ ಕರೆನ್ಸಿ ನೋಟುಗಳಿಂದ ಮಹಾತ್ಮ ಗಾಂಧಿಯವರ ಚಿತ್ರವನ್ನು ತೆಗೆದು ಹಾಕಲು ಮುಂದಾಗಿದೆ ಎಂದು ಹೇಳಿದ್ದಾರೆ.

ಕರೆನ್ಸಿಗಳಿಂದ ಮಹಾತ್ಮಾ ಗಾಂಧೀಜಿ ಚಿತ್ರವನ್ನು ತೆಗೆಯುವ ಯಾವುದೇ ಪ್ರಸ್ತಾವನೆ ಪರಿಗಣನೆಯಲ್ಲಿ ಇಲ್ಲ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಪದೇ ಪದೇ ನಿರಾಕರಿಸಿದರೂ ಈ ಆರೋಪ ಬಂದಿದೆ. ದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಬ್ರಿಟಾಸ್, ಈ ವಿಷಯದ ಕುರಿತು ಉನ್ನತ ಮಟ್ಟದ ಸಭೆ ಈಗಾಗಲೇ ನಡೆದಿದೆ, ಕೇಂದ್ರ ಸರ್ಕಾರ ಬದಲಾವಣೆ ಮಾಡಲು ಹೊರಟಿದೆ ಎಂದಿದ್ದಾರೆ.

ಮೊದಲ ಸುತ್ತಿನ ಚರ್ಚೆಗಳು ಈಗಾಗಲೇ ಉನ್ನತ ಮಟ್ಟದಲ್ಲಿ ನಡೆದಿವೆ. ಇದು ಕೇವಲ ಊಹಾಪೋಹವಲ್ಲ. ನಮ್ಮ ಕರೆನ್ಸಿಯಿಂದ ಗಾಂಧೀಜಿಯವರ ಚಿತ್ರ ತೆಗೆದುಹಾಕುವುದು ರಾಷ್ಟ್ರದ ಚಿಹ್ನೆಗಳನ್ನು ಪುನಃ ಬರೆಯುವ ದೊಡ್ಡ ಪ್ರಯತ್ನದ ಭಾಗವಾಗಿದೆ ಎಂದು ಬ್ರಿಟಾಸ್ ಹೇಳಿದರು.

ಮೂಲಗಳ ಪ್ರಕಾರ, ಕೇಂದ್ರ ಸರ್ಕಾರವು ಮಹಾತ್ಮಾ ಗಾಂಧೀಜಿಯವರ ಚಿತ್ರವನ್ನು ಪರ್ಯಾಯ ಚಿಹ್ನೆಯೊಂದಿಗೆ ಬದಲಿಸಲು ಪರಿಗಣಿಸಬಹುದು. ಭಾರತದ ಸಂಸ್ಕೃತಿಗೆ ಉತ್ತಮ ಪರ್ಯಾಯವಾಗಿ ಭಾರತ ಮಾತೆಯ ಚಿತ್ರವನ್ನು ಹಾಕುವ ಚಿಂತನೆಯಲ್ಲಿ ಸರ್ಕಾರ ಇರಬಹುದು. ಸರ್ಕಾರದ ಚರ್ಚೆಯ ಆಯ್ಕೆಗಳಲ್ಲಿ ಒಂದಾಗಿದೆ ಎಂದು ತಿಳಿದುಬಂದಿದೆ. ಆದಾಗ್ಯೂ, ಕರೆನ್ಸಿ ನೋಟುಗಳ ವಿನ್ಯಾಸದ ನಿರ್ಧಾರವು ಕೇಂದ್ರದೊಂದಿಗೆ ಸಮಾಲೋಚಿಸಿ ಆರ್‌ಬಿಐ ತೆಗೆದುಕೊಳ್ಳುತ್ತದೆ ಎಂದು ಸರ್ಕಾರದ ಮೂಲಗಳು ಸಮರ್ಥಿಸಿಕೊಂಡಿವೆ.

1996 ರಲ್ಲಿ ಮಹಾತ್ಮಾ ಗಾಂಧಿ ಭಾವಚಿತ್ರಗಳನ್ನು ನಮೂದಿಸಿ ಸರಣಿ ನೋಟುಗಳನ್ನು ಶಾಶ್ವತವಾಗಿ ರಿಸರ್ವ್ ಬ್ಯಾಂಕ್ ಬಿಡುಗಡೆ ಮಾಡಲಾರಂಭಿಸಿತು. 2022 ರಲ್ಲಿ, ಭಾರತೀಯ ಕರೆನ್ಸಿಯಿಂದ ಗಾಂಧಿಯವರ ಚಿತ್ರವನ್ನು ತೆಗೆದುಹಾಕಲಾಗುವುದು ಎಂದು ಸೂಚಿಸುವ ವರದಿಗಳನ್ನು ಆರ್‌ಬಿಐ ಸ್ಪಷ್ಟವಾಗಿ ನಿರಾಕರಿಸಿತ್ತು. ಅಧಿಕೃತ ಹೇಳಿಕೆಯಲ್ಲಿ, ಸೆಂಟ್ರಲ್ ಬ್ಯಾಂಕ್ ಗಾಂಧಿಯವರ ಭಾವಚಿತ್ರವನ್ನು ಬೇರೆ ಯಾವುದೇ ವ್ಯಕ್ತಿಯ ಚಿತ್ರದೊಂದಿಗೆ ಬದಲಾಯಿಸುವ ಯಾವುದೇ ಪ್ರಸ್ತಾಪವಿಲ್ಲ ಎಂದು ಹೇಳಿತ್ತು.

# ಡಿ.25 ರಂದು ರಸಪ್ರಶ್ನೆ ಸ್ಪರ್ಧೆ

**ಮಡಿಕೇರಿ:** ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಮತ್ತು ಅರೆಭಾಷೆ ಗೌಡ ವಿಕಾಸ ವೇದಿಕೆ(ಸಾಮಾಜಿಕ ಮಾಧ್ಯಮ ವಿಭಾಗ) ವತಿಯಿಂದ ಪ್ರೌಢಶಾಲಾ ಮಕ್ಕಳಿಗೆ ಅರೆಭಾಷೆ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮವು ಡಿಸೆಂಬರ್, 25 ರಂದು ಬೆಳಗ್ಗೆ 10 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಸದಾನಂದ ಮಾವಜಿ, ಭಾಗಮಂಡಲ ಶ್ರೀ ಕಾವೇರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ದಿವಾಕರ ಕುಂದಲ್ಪಾಡಿ, ಅರೆಭಾಷೆ ಗೌಡ ವಿಕಾಸ ವೇದಿಕೆಯ ನಿರ್ದೇಶಕರಾದ ಪ್ರಹ್ಲಾದ್ ಪೊಕ್ಕುಳಂಡ್ರ, ಅರೆಭಾಷೆ ಹಿರಿಯ ಸಾಹಿತಿ ಬೈತಡ್ಕ ಜಾನಕಿ ಬೆಳ್ಯಪ್ಪ, ಹಾಕತ್ತೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ತೆಕ್ಕಡೆ ಕುಮಾರ ಸ್ವಾಮಿ,

ಮಡಿಕೇರಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಸಂಘಟನಾ ಕಾರ್ಯದರ್ಶಿ ಚೊಕ್ಕಾಡಿ ಪ್ರೇಮ ರಾಘವಯ್ಯ, ಕೊಡಗು ಗೌಡ ಸಮಾಜಗಳ ಒಕ್ಕೂಟದ ನಿರ್ದೇಶಕರಾದ ಪುದಿಯನೆರವನ ರೇವತಿ ರಮೇಶ್ ಇತರರು ಪಾಲ್ಗೊಳ್ಳಲಿದ್ದಾರೆ.

# ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಸಿಗಬೇಕು: ಡಿಸಿ ಕುಮಾರ





**ಮಂಡ್ಯ:** ಸಮಾಜದಲ್ಲಿ ಕಾಯಕಯೋಗಿಯಾಗಿ ರೈತರು ಕಾರ್ಯ ನಿರ್ವಹಿಸುತ್ತಿದ್ದಾರೆ. ರೈತರು ಕೆಲಸದಲ್ಲಿ ನಿಸ್ವಾರ್ಥ ಮನೋಭಾವ ಮತ್ತು ವೃತ್ತಿ ನಿಷ್ಠೆಯನ್ನು ತೋರುತ್ತಾ ಯಾವ ಕೀರ್ತಿಯನ್ನು ಬಯಸದೆ ಸಮಾಜದ ಹಿತಕ್ಕಾಗಿ ರೈತ ವರ್ಗ ಶ್ರಮಿಸುತ್ತಿದೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ "ರಾಷ್ಟ್ರೀಯ ರೈತ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ರೈತರನ್ನು ಕುಗ್ಗಿಸುವ ಕೆಲಸವಾಗುತ್ತಿದೆ. ಇದು ದೇಶದ ಹಿತಕ್ಕೆ ಮಾರಕ, ರೈತರನ್ನು ಹಿಗ್ಗಿಸುವ ಕೆಲಸವಾಗಬೇಕಿದೆ. ರೈತರುಗಳು ಬೆಳೆದ ಬೆಳೆಗಳಿಗೆ ಸಮರ್ಪಕವಾದ ವೈಜ್ಞಾನಿಕ ಬೆಲೆ ದೊರೆತಾಗ ಮಾತ್ರ ರೈತರ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ರೈತರಿಲ್ಲದ ಪ್ರಪಂಚವನ್ನು ಊಹಿಸಲು ಸಾಧ್ಯವಿಲ್ಲ ರೈತರ ಅಭಿವೃದ್ಧಿ ಮತ್ತು ಏಳಿಗೆಗಾಗಿ ಪ್ರತಿಯೊಬ್ಬರೂ ಶ್ರಮಿಸಬೇಕು. ಅನ್ನದಾತನನ್ನು ಎಲ್ಲರೂ ಸ್ಮರಿಸಿ ಗೌರವಿಸಬೇಕು. 1930 ರಲ್ಲೆ ರಾಷ್ಟ್ರಕವಿ ಕುವೆಂಪು ಅವರು ತಮ್ಮ ಕೊಳಲು ಎನ್ನುವ ಕವನ ಸಂಕಲನದಲ್ಲಿ ರೈತ ಗೀತೆಯನ್ನು ಬರುತ್ತಿದ್ದಾರೆ. ಸದರಿ ರೈತ ಗೀತೆಯ ಮಹತ್ವವನ್ನು ಕೇಳುವುದರ ಜೊತೆಗೆ ಅರ್ಥೈಸಿಕೊಳ್ಳಬೇಕು ಎಂದು ತಿಳಿಸಿದರು.

ಆಧುನಿಕ ಜಗತ್ತಿನಲ್ಲಿ ರೈತರಿಗೆ ದೊರೆಯಬೇಕಾದ ಮನ್ನಣೆ ದೊರೆಯುತ್ತಿಲ್ಲ ಎನ್ನುವುದು ದುಃಖಕರ ಸಂಗತಿ. ಆಧುನಿಕತೆಗೆ ರೈತರು ಹೊಂದಿಕೊಳ್ಳಲು ತಾಂತ್ರಿಕ ಮತ್ತು ವೈಜ್ಞಾನಿಕ ಉಪಕ್ರಮಗಳನ್ನು ತಮ ಕೃಷಿ ಪದ್ಧತಿಯಲ್ಲಿ ಅಳವಡಿಸಿಕೊಳ್ಳಬೇಕು. ರೈತರು ದೇಶ ಆರ್ಥಿಕತೆಗೆ ರೈತರ ಕೊಡುಗೆ ಅಪಾರ ಎಂದರು.

ಮಂಡ್ಯ ಕೃಷಿ ಪ್ರಧಾನವಾದ ಜಿಲ್ಲೆ, ಜಿಲ್ಲೆಯ ರೈತರು ಸಹ ನಮ್ಮ ಆರ್ಥಿಕತೆಗೆ ತಮ್ಮದೇ ಆದ ಕೊಡುಗೆಯನ್ನು ನೀಡುತ್ತಿದ್ದಾರೆ. ರೈತರು ವೈಜ್ಞಾನಿಕತೆಯನ್ನು ಕೃಷಿಯಲ್ಲಿ ಅಳವಡಿಸಿಕೊಂಡು ಪರ್ಯಾಯ ಬೆಳೆಗಳನ್ನು ಬೆಳೆಯಬೇಕು. ಮಣ್ಣಿನ ಗುಣಮಟ್ಟವನ್ನು ಯಾವ ರೀತಿಯಲ್ಲಿ ಹೆಚ್ಚಿಸಿಕೊಳ್ಳಬೇಕು. ಕಬ್ಬು, ಭತ್ತ ಬಿಟ್ಟು ವಿವಿಧ ವೈಜ್ಞಾನಿಕ ಬೆಳೆಗಳನ್ನು ಬೆಳೆಯುವ ನಿಟ್ಟಿನಲ್ಲಿ ಕೃಷಿ ಕ್ಷೇತ್ರದಲ್ಲಿ ಇನ್ನಷ್ಟು ಸಂಶೋಧನೆಗಳು ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ರೈತರ ಕ್ಷೇಮಾಭಿವೃದ್ಧಿಗಾಗಿ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ಎಲ್ಲಾ ಕಾರ್ಯಕ್ರಮಗಳನ್ನು ರೈತರು ಸಮರ್ಪಕವಾಗಿ ಸದುಪಯೋಗಪಡಿಸಿಕೊಂಡು ಪ್ರಗತಿ ಕಾಣಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್.

ಜಿಲ್ಲಾ ಕೃಷಿಕರ ಸಮಾಜದ ಅಧ್ಯಕ್ಷ ಸಿ.ಎಂ. ನಾಗರಾಜು, ಕಬ್ಬಿನ ಗಾಣದ ಮಾಲೀಕರ ಸಂಘ ಅಧ್ಯಕ್ಷ ಸೋಮಶೇಖರ್ ಗೌಡ, ರೈತರ ಪಾಠ ಶಾಲೆಯ ಸತ್ಯ ಮೂರ್ತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಆಹಾರ ಸುರಕ್ಷತಾ-ಗ್ರಾಹಕರ ದಿನಾಚರಣೆ ಜ.9 ಕ್ಕೆ ಮುಂದೂಡಿಕೆ: ಹೆಚ್. ಕೃಷ್ಣ



**ಮಂಡ್ಯ:** ಡಿಸೆಂಬರ್ 24 ರಂದು ನಡೆಯಬೇಕಿದ್ದ ಆಹಾರ ಸುರಕ್ಷತಾ ಹಾಗೂ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯನ್ನು ಕಾರಣಾಂತರದಿಂದ ಜನವರಿ 9 ಕ್ಕೆ ಮುಂದೂಡಿಕೆ ಮಾಡಲಾಗಿದೆ ಎಂದು ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಹೆಚ್ ಕೃಷ್ಣ ಅವರು ಹೇಳಿದರು.

ಮಂಡ್ಯದ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು ಸದರಿ ಕಾರ್ಯಕ್ರಮದಲ್ಲಿ ಆಹಾರದ ಮೌಲ್ಯ ಮತ್ತು ಆಹಾರದ ಮಹತ್ವದ ಕುರಿತು ಅರಿವು ಮೂಡಿಸಲಾಗುವುದು ಎಂದು ಹೇಳಿದರು.

ಜನವರಿ 9 ರಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಆಚರಿಸಲಾಗುವುದು ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳಿ ಎಂದು ತಿಳಿಸಿದರು.

14 ಇಲಾಖೆಗಳು ಒಗ್ಗೂಡಿ ಸದರಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಆಹಾರ ಸುರಕ್ಷತೆ ಕುರಿತು ಅರಿವು ಮೂಡಿಸುವ 14 ಮಳಿಗೆಗಳನ್ನು ತೆರೆಯಲಾಗುವುದು. ಪ್ರಮುಖವಾಗಿ ವಿದ್ಯಾರ್ಥಿ ನಿಲಯಗಳಲ್ಲಿ, ಮದುವೆ, ಸಮಾರಂಭಗಳಲ್ಲಿ ಮಕ್ಕಳು ಮತ್ತು ಸಾರ್ವಜನಿಕರು ಹೆಚ್ಚಾಗಿ ಆಹಾರ ವ್ಯರ್ಥ ಮಾಡುತ್ತಾರೆ, ಈ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದೆ ಎಂದು ಹೇಳಿದರು.


ಎರಡು ಸಾವಿರಕ್ಕೂ ಹೆಚ್ಚು ಜನ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಎಲ್ಲರೂ ಸೇರಿ ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಿದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯ ಎಂದರು.

ಇತರೆ ಜಿಲ್ಲೆಗಳಿಗೆ ಮಾದರಿಯಾಗುವಂತೆ ಮಂಡ್ಯ ಜಿಲ್ಲೆಯಲ್ಲಿ ಆಹಾರ ಜಾಗೃತಿಯನ್ನು ಮೂಡಿಸಬೇಕು. ಅಧಿಕಾರಿಗಳು ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ಆಹಾರ ಜಾಗೃತಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕಾರ್ಯ ದಕ್ಷತೆಯಿಂದ ಕೆಲಸ ನಿರ್ವಹಿಸಿ ಎಂದು ಹೇಳಿದರು.

ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಆನಂದ್ ಎಂ ಅವರು ಮಾತನಾಡಿ ಜಿಲ್ಲೆಯ ನ್ಯಾಯ ಬೆಲೆ ಅಂಗಡಿ ಮಾಲೀಕರಿಗೆ ಜಾಗೃತಿ ಕಾರ್ಯಾಗಾರ ಮಾಡಿ. ಕಡ್ಡಾಯವಾಗಿ ಎಲ್ಲಾ ನ್ಯಾಯಬೆಲೆ ಅಂಗಡಿಯ ಮಾಲೀಕರು ಕಾರ್ಯಕ್ರಮದಲ್ಲಿ ಹಾಜರಿರಬೇಕು ಎಂದು ಹೇಳಿದರು.

ಸಭೆಯಲ್ಲಿ ರಾಜ್ಯ ಆಹಾರ ಆಯೋಗದ ಕಾನೂನು ಸಲಹೆಗಾರರಾದ ಕುಮಾರ ಸ್ವಾಮಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಪ್ರತೀಕ್ ಹೆಗ್ಡೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಲೋಕೇಶ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೋಮಲ್ ಕುಮಾರ್ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾಧಿಕಾರಿ ಮಂಜುಳಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# 'ಪ್ರತಿಯೊಬ್ಬರೂ ಸಹಕಾರ ಮನೋಭಾವನೆಯೊಂದಿಗೆ ತಮ್ಮ ಬದುಕು ನಡೆಸಿ'



**ಕೆ.ಆರ್.ನಗರ:** ಪ್ರತಿಯೊಬ್ಬರೂ ಸಹಕಾರ ಮನೋಭಾವನೆಯೊಂದಿಗೆ ತಮ್ಮ ಬದುಕನ್ನು ನಡೆಸಬೇಕು ಎಂದು ಖ್ಯಾತ ಮೂಳೆ ತಜ್ಞ ವೈದ್ಯ ಡಾ.ಕೆ.ಆರ್.ಗೌತಮ್ ಹೇಳಿದರು.

ಅವರು ಪಟ್ಟಣದಲ್ಲಿ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿಯು ಹೊರ ತಂದಿರುವ 2026ನೇ ನೂತನ ವರ್ಷದ ದಿನದರ್ಶಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದರು.

ಮಹನೀಯರುಗಳ ಬಗ್ಗೆ ಕೇವಲ ನಾವು ಮಾತನಾಡುವುದು ಮುಖ್ಯವಲ್ಲ ಅವರು ನಡೆದು ಬಂದ ಹಾದಿಯಲ್ಲಿ ಅವರ ಆದರ್ಶ ಗುಣಗಳನ್ನು ಮೈಗೂಡಿಸಿಕೊಂಡು ನಡೆದಾಗ ಮಾತ್ರ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದರು.

ಯಾರಿಗೆ ಯಾವ ಅವಶ್ಯಕತೆ ಇರುತ್ತದೆ ಅಂತಹವರಿಗೆ ಅದನ್ನು ಪೂರೈಸಿದರೆ ಅದಕ್ಕೆ ಒಂದು ಬೆಲೆ ಇರುತ್ತದೆ. ಯಾವುದೇ ಅವಶ್ಯಕತೆ ಇಲ್ಲದವರಿಗೆ ನೆರವಾದರೆ ಅದಕ್ಕೆ ಯಾವುದೇ ಬೆಲೆ ಇರುವುದಿಲ್ಲ.

ಇರುವವರಿಗೆ ನೆರವಾಗುವ ಬದಲು ಇಲ್ಲದವರಿಗೆ ನೆರವಾಗುವ ಮೂಲಕ ಅವರ ಬದುಕಿಗೆ ಆಸರೆಯಾಗುವ ಕೆಲಸವನ್ನು ಮಾಡುವ ಮೂಲಕ ಬದುಕಿನಲ್ಲಿ ನೆಮ್ಮದಿಯನ್ನು ಕಾಣಬೇಕು ಎಂದರು.

ಜೀವನದಲ್ಲಿ ಪರಸ್ಪರ ದ್ವೇಷ, ಅಸೂಯೆ, ತಾರತಮ್ಯ ನೀತಿಗಳನ್ನು ಬಿಟ್ಟು ಎಲ್ಲರೊಂದಿಗೂ ಪ್ರೀತಿ, ವಿಶ್ವಾಸ, ಸಹಬಾಳ್ವೆಯೊಂದಿಗೆ ನಡೆದುಕೊಳ್ಳಬೇಕು. ನಮ್ಮ ಜೀವಿತಾವಧಿಯಲ್ಲಿ ಅಶಕ್ತರಿಗೆ ನಮ್ಮ ಕೈಲಾದ ಮಟ್ಟಿಗೆ ಸಹಾಯ ಮಾಡುವ ಗುಣವನ್ನು ರೂಢಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸೊಸೈಟಿಯು ಯಾವುದೇ ಆಡಂಬರಗಳಿಗೆ ಆದ್ಯತೆಯನ್ನು ನೀಡದೆ ಸೊಸೈಟಿಯನ್ನು ಗಟ್ಟಿಯಾಗಿ ಕಟ್ಟಿ ಬೆಳೆಸುವ ಕೆಲಸದೊಂದಿಗೆ ಸಾರ್ವಜನಿಕರಿಗೆ ನೆರವಾಗುವ ಕಾರ್ಯವನ್ನು ಮಾಡುತ್ತಿರುವುದು ಉತ್ತಮ ಸೇವೆಯಾಗಿದೆ ಎಂದರು.

ಸಾಲಿಗ್ರಾಮದಲ್ಲಿ ಆರಂಭಗೊಂಡ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿಯು ಜನರ ನಂಬಿಕೆಗೆ ಪಾತ್ರವಾಗುವ ಮೂಲಕ ಕೆ.ಆರ್.ನಗರ ಪಟ್ಟಣದಲ್ಲಿ ಮತ್ತೊಂದು ಶಾಖೆಯನ್ನು ತೆರೆದಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಮುಂದಿನ ದಿನಗಳಲ್ಲಿ ಈ ಸೊಸೈಟಿಯು ಉತ್ತಮವಾಗಿ ನಡೆಯುವ ಮೂಲಕ ಮತ್ತಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ವೈದ್ಯ ಡಾ.ಕೆ.ಆರ್.ಗೌತಮ್, ಪತ್ರಕರ್ತರಾದ ಕೆ.ಟಿ.ಮೋಹನ್ ಕುಮಾರ್ ಮತ್ತು ಜೈನಹಳ್ಳಿ ಬಸವರಾಜು ಅವರುಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿಯ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್, ಉಪಾಧ್ಯಕ್ಷೆ ಭಾಗ್ಯಗುರುರಾಜ್, ನಿರ್ದೇಶಕರುಗಳಾದ ಎಂ.ಎಸ್.ನರಸಿಂಹ, ಮಂಜುನಾಥ, ಕೆ.ಎ.ಶಶಿಕುಮಾರ್, ನೇತ್ರಾವತಿ ಸುರೇಶ್, ಎಸ್.ಕೆ.ಕಮಲರೇಣುಕೇಶ್, ವೃತ್ತಿಪರ ನಿರ್ದೇಶಕರಾದ ಅಶ್ವಿನಿ ಸ್ವಿನ್ ಕೃಷ್ಣ, ಡಿ.ಆರ್.ಅವಿನಾಶ್, ಸಿಇಓ ಸಿಂಧೂ ಮಂಜುನಾಥ್, ಸಿಬ್ಬಂದಿ ಮಮತಾರಾಜೇಶ್ ಗೌಡ, ವಕೀಲ ಸ್ವಿನ್ ಕೃಷ್ಣ, ಉದ್ಯಮಿ ಅನಿಲ್ ಕುಮಾರ್, ಮುಖಂಡರುಗಳಾದ ನವೀನ್, ಸುರೇಶ, ಗುರುರಾಜ್, ರೇಣುಕೇಶ್ ಸೇರಿದಂತೆ ಹಲವರು ಇದ್ದರು.

# ಪೊಲೀಸರು-ಪತ್ರಕರ್ತರ ಸೌಹಾರ್ದ ಕ್ರಿಕೆಟ್ ಆಟ ಯಶಸ್ವಿ-ಉತ್ತಮ ಸ್ಪಂದನೆ



**ಹಾಸನ:** ನಗರದ ಡಿಎಆರ್ ಮೈದಾನದಲ್ಲಿಂದು ಜಿಲ್ಲಾ ಪೊಲೀಸರು ಮತ್ತು ಹಾಸನ ಜಿಲ್ಲಾ ಪತ್ರಕರ್ತರ ಸಂಘದ ತಲಾ ಎರಡು ತಂಡಗಳ ನಡುವೆ ಸೌಹಾರ್ದಯುತ ಕ್ರಿಕೆಟ್ ಪಂದ್ಯಾವಳಿ ನಡೆಯಿತು.

ಬೆಳಗ್ಗೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಡಾ.ಶ್ರೀನಿಧಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎಚ್.ಬಿ.ಮದನಗೌಡ ಬ್ಯಾಟಿಂಗ್ ಮತ್ತು ಬೌಲಿಂಗ್ ಮಾಡುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಶ್ರೀನಿಧಿ ಅವರು, ಜಿಲ್ಲೆಯಲ್ಲಿ ಮೊದಲಿಂದಲೂ ಪೊಲೀಸರು ಮತ್ತು ಪತ್ರಕರ್ತರ ನಡುವೆ ಕ್ರಿಕೆಟ್ ಪಂದ್ಯಾವಳಿ ನಡೆಯುತ್ತಾ ಬಂದಿದೆ. ಇಬ್ಬರೂ ಒಂದೊಂದು ರೀತಿಯಲ್ಲಿ ಸಾಮಾಜಿಕ ಸೇವೆಯಲ್ಲಿ ತೊಡಗಿ, ಸಾರ್ವಜನಿಕ ಸೇವೆ ಮಾಡುತ್ತಿರುತ್ತೇವೆ. ಪೊಲೀಸರು-ಪತ್ರಕರ್ತರ ನಡುವೆ ಅವಿನಾಭಾವ ಸಂಬಂಧ ಇರುವುದು ಒಳ್ಳೆಯ ಬೆಳವಣಿಗೆ, ಇದು ಹೀಗೆಯೇ ಮುಂದುವರಿಯುವುದು ಸ್ವಾಗತಾರ್ಹ ಹಾಗೂ ಉತ್ತಮ ಬೆಳವಣಿಗೆ ಎಂದರು.

ಎಚ್.ಬಿ.ಮದನಗೌಡ ಮಾತನಾಡಿ, ಪೊಲೀಸರು ಮತ್ತು ಪತ್ರಕರ್ತರು ಸದಾ ಒತ್ತಡದಲ್ಲಿ ಕೆಲಸ ಮಾಡುವವರು. ಸಿಕ್ಕ ಬಿಡುವಿನಲ್ಲಿ ಈ ರೀತಿಯ ಪಂದ್ಯಾವಳಿ ಆಡುವುದು ಇಬ್ಬರ ನಡುವೆ ಬಾಂಧವ್ಯ ವೃದ್ಧಿಗೆ ಸಹಕಾರಿ ಆಗಲಿದೆ. ಸಂಬಂಧ ಮತ್ತಷ್ಟು ಗಟ್ಟಿಯಾಗಲಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಹಿಂದಿನಿಂದಲೂ ಪೊಲೀಸರು ಮತ್ತು ಪತ್ರಕರ್ತರ ನಡುವೆ ಉತ್ತಮ ಸ್ನೇಹ ಸಂಬಂಧ, ಬಾಂಧವ್ಯ ಇದೆ. ಅದು ಹೀಗೆಯೇ ಮುಂದುವರಿಯಲಿ ಎಂದು ಆಶಿಸಿದರು.

ಜೆ.ಆರ್.ಕೆಂಚೇಗೌಡ ಮಾತನಡಿ, ಯಾವುದೇ ಕ್ರೀಡೆಯಲ್ಲಿ ಸೋಲು- ಗೆಲುವು ಸಾಮಾನ್ಯ. ಸೋತಾದ ಕುಗ್ಗದೆ, ಗೆದ್ದಾಗ ಹಿಗ್ಗದೆ ಪ್ರೀತಿ, ಸ್ನೇಹ ಬಾಂಧವ್ಯ ಮುಂದುವರಿಸಿಕೊಂಡು ಹೋಗಬೇಕು. ಅದಕ್ಕೆಂದೇ ಪಂದ್ಯಾವಳಿ ಆಯೋಜನೆ ಮಾಡಿದ್ದೇವೆ. ಎಲ್ಲರೂ ಕ್ರೀಡಾ ಮನೋಭಾವದಿಂದ ಆಡಿ ಗೆಲುವು ಸಾಧಿಸಿ ಎಂದು ನುಡಿದರು.

ಈ ಸಂದರ್ಭದಲ್ಲಿ ಸಕಲೇಶಪುರ ಡಿವೈಎಸ್ಪಿ ಮಾಲತೇಶ್, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಮಾಜಿ ಅಧ್ಯಕ್ಷರಾದ ಬಾಳ್ಳುಗೋಪಾಲ್, ಬಿ.ಆರ್.ಉದಯಕುಮಾರ್, ರವಿನಾಕಲಗೂಡು, ಹಿರಿಯ ಪತ್ರಕರ್ತರ ಉದಯರವಿ, ಸಂಘದ ಪದಾಧಿಕಾರಿಗಳಾದ ಕೆ.ಜಿ.ಸುರೇಶ್, ಬಿ.ಆರ್. ಬೊಮ್ಮೇಗೌಡ, ಕೆ.ಎಂ. ಹರೀಶ್, ಕುಶ್ವಂತ್, ತ್ಯಾಗರಾಜ್(ಪ್ರಕಾಶ್ ಟಿವಿ5) ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ವಿವಿಧ ಸುದ್ದಿ-ಮಾಧ್ಯಮಗಳ ಪತ್ರಕರ್ತರು ಇದ್ದರು.

ಬೆಸ್ಟ್ ಆಫ್ ತ್ರಿ ಪಂದ್ಯಗಳಲ್ಲಿ ಉತ್ತಮವಾಗಿ ಆಟ ಆಡಿದ ಪೊಲೀಸ್ ತಂಡ ಜಯಭೇರಿ ಬಾರಿಸಿತು.ವಿಜೇತ ತಂಡಗಳ ನಾಯಕರಾದ ಡಿವೈಎಸ್ಪಿ ಮಾಲತೇಶ್, ಇನ್ಸ್‌ಪೆಕ್ಟರ್ ವಿನಯ್ ಅವರಿಗೆ ಜಿಲ್ಲಾ ಪತ್ರಕರ್ತರ ಸಂಘದ ಪರವಾಗಿ ಜೆ.ಆರ್.ಕೆಂಚೇಗೌಡ ಮತ್ತು ಎಚ್.ಬಿ.ಮದನಗೌಡ ಅವರು 5 ಸಾವಿರ ನಗದು ಬಹುಮಾನ ನೀಡಿ ಅಭಿನಂದಿಸಿದರು. ಈ ವೇಳೆ ಆಗಮಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಅವರನ್ನು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರು-ಪದಾಧಿಕಾರಿಗಳು ಹಾಗೂ ಪತ್ರಕರ್ತರು ಹಾರ್ದಿಕವಾಗಿ ಅಭಿನಂದಿಸಿದರು.

# ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಎ.ಎಸ್.ಪೊನ್ನಣ್ಣ ಚಾಲನೆ



ಮಡಿಕೇರಿ: ತಾಲ್ಲೂಕಿನ ಊರುಬೈಲು ಬಳಿ 43 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಕಿರು ಸೇತುವೆಯನ್ನು ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರರು ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಎಸ್.ಪೊನ್ನಣ್ಣ ಅವರು ಉದ್ಘಾಟಿಸಿದರು.

ಹಾಗೆಯೇ ಚೆಂಬು ಗ್ರಾಮಕ್ಕೆ ಭೇಟಿ ನೀಡಿ ಸಾರ್ವಜನಿಕರ ಅಹವಾಲು ಆಲಿಸಿದರು. ಬಳಿಕ ಮಾತನಾಡಿದ ಶಾಸಕರು ಮಳೆಗಾಲದಲ್ಲಿ ತುಂಬಾ ತೊಂದರೆ ಅನುಭವಿಸುವ ಗ್ರಾಮಸ್ಥರ ಅನುಕೂಲಕ್ಕಾಗಿ ಕಿರು ಸೇತುವೆಯನ್ನು ಶಾಸಕರ ನಿಧಿಯಿಂದ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದರು. ಗ್ರಾಮೀಣ ಪ್ರದೇಶದಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಸೇತುವೆ, ಸಾರಿಗೆ ಸಂಪರ್ಕ ಮತ್ತಿತರ ಕನಿಷ್ಠ ಸೌಲಭ್ಯಗಳು ಅತ್ಯಗತ್ಯ. ಆ ನಿಟ್ಟಿನಲ್ಲಿ ಮೂಲ ಸೌಲಭ್ಯ ಒದಗಿಸಲು ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಎ.ಎಸ್.ಪೊನ್ನಣ್ಣ ಅವರು ತಿಳಿಸಿದರು.

ಬಳಿಕ ಅನ್ಯಾಳ ಭಾಗದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಳ್ಳಲಾಗುವ ತಡೆಗೋಡೆ ಕಾಮಗಾರಿಗೆ ಶಾಸಕರು ಭೂಮಿ ಪೂಜೆ ನೆರವೇರಿಸಿದರು. ಹಾಗೆಯೇ ಇಲ್ಲಿ ನಿರ್ಮಾಣವಾಗಿರುವ ಕಾಂಕ್ರೀಟ್ ರಸ್ತೆಯನ್ನು ಉದ್ಘಾಟಿಸಿದರು. ಚೆಂಬು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿನ ಮಕ್ಕಳ ಶಿಕ್ಷಣ ಸಂಬಂಧ ಮಾಹಿತಿ ಪಡೆದರು. ಬಳಿಕ ಕಜೆ, ಪರ್ದಾಯ ಗದ್ದೆ ಭಾಗದಲ್ಲಿ ಸುಮಾರು 15 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಬಹುಬೇಡಿಕೆಯ ಕಾಂಕ್ರೀಟ್ ರಸ್ತೆಯನ್ನು ಉದ್ಘಾಟಿಸಿದರು.

ಬಳಿಕ ಪರಿಶಿಷ್ಟ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಲಾಗುವ ಉಚಿತ ಕೊಳವೆ ಬಾವಿ ಸಂಬಂಧ ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಿಸಿದರು. ಮೀನುಗಾರಿಕೆ ಇಲಾಖೆ ವತಿಯಿಂದ ನೀಡಲಾಗುವ ವಿವಿಧ ಸೌಲಭ್ಯಗಳನ್ನು ಎ.ಎಸ್.ಪೊನ್ನಣ್ಣ ಅವರು ವಿತರಿಸಿದರು. ಪ್ರಮುಖರಾದ ಇಸ್ಮಾಯಿಲ್, ಸುರೇಶ್, ರವಿರಾಜ್, ಜಯರಾಮ್ ಪೆರುಮುಂಡ, ಹೊಸೂರು ಸೂರಜ್, ಅಪ್ಪುರವೀಂದ್ರ, ಮೊಹಿದ್ದಿನ್, ವಿಜಯಕುಮಾರ್, ಹನೀಫ್, ಇತರರು ಇದ್ದರು.

ನಂತರ ಸಂಪಾಜೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಶಾಸಕರ ಅನುದಾನದಲ್ಲಿ ನಿರ್ಮಾಣಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಹಾಗೂ ಭೂಮಿ ಪೂಜೆಯನ್ನು ಶಾಸಕರಾದ ಎ.ಎಸ್.ಪೊನ್ನಣ್ಣ ಅವರು ನೆರವೇರಿಸಿದರು. ಸಂಪಾಜೆಯ ಕೂಟೇಲು ಮತ್ತು ಕಾಂತಬೈಲು ಭಾಗದ ರಸ್ತೆ 30 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಕಾಂಕ್ರೀಟ್ ರಸ್ತೆಯನ್ನು ಲೋಕಾರ್ಪಣೆ ಮಾಡಿದರು. ಕಲ್ಯಾಳ ಹಾಗೂ ಎಸ್ಟೇಟ್ ಭಾಗದ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

# ಡಿ.24 ರಂದು ಪೆರಾಜೆಯಲ್ಲಿ ಅರೆಭಾಷೆ ಕೂಡ್‌ಕಟ್ಟ್ ಕಾರ್ಯಕ್ರಮ

**ಮಡಿಕೇರಿ:** ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಹಾಗೂ ಪೆರಾಜೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಪೆರಾಜೆ ಗ್ರಾಮ ಪಂಚಾಯತ್ ಮಟ್ಟದ ಸಂಜೀವಿನಿ ಒಕ್ಕೂಟ ಮತ್ತು ಪೆರಾಜೆ ಗ್ರಾಮ ಗೌಡ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ 'ಅರೆಭಾಷೆ ಕೂಡ್‌ಕಟ್ಟ್' ಕಾರ್ಯಕ್ರಮವು ಡಿಸೆಂಬರ್, 24 ರಂದು ಬೆಳಗ್ಗೆ 10 ಗಂಟೆಗೆ ಪೆರಾಜೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಂಗಣದಲ್ಲಿ ನಡೆಯಲಿದೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಸದಾನಂದ ಮಾವಜಿ, ಪೆರಾಜೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ನಾಗೇಶ ಕುಂದಲ್ಪಾಡಿ, ಅರೆಭಾಷೆ ಸಾಹಿತಿ ಭವಾನಿಶಂಕರ ಹೊದ್ದೆಟ್ಟಿ, ಪೆರಾಜೆ ಗ್ರಾ.ಪಂ.ಮಟ್ಟದ ಸಂಜೀವಿನಿ ಒಕ್ಕೂಟದ ಅಧ್ಯಕ್ಷರಾದ ಭವಾನಿ ಕೊಳಂಗಾಯ, ಪೆರಾಜೆ ಗ್ರಾಮ ಗೌಡ ಸಮಿತಿ ಅಧ್ಯಕ್ಷರಾದ ಕೆ.ಕೆ.ಪದ್ಮಯ್ಯ, ಪೆರಾಜೆ ಗ್ರಾ.ಪಂ.ಅಧ್ಯಕ್ಷರಾದ ಚಂದ್ರಕಲಾ ಬಾಲಚಂದ್ರ ಬಳ್ಳಡ್ಕ, ಗ್ಯಾರಂಟಿ ಅನುಷ್ಠಾನ ಸಮಿತಿ ಮಡಿಕೇರಿ ತಾಲ್ಲೂಕು ಸದಸ್ಯರಾದ ಮನು ಪೆರುಮುಂಡ ಇತರರು ಪಾಲ್ಗೊಳ್ಳಲಿದ್ದಾರೆ.

